ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 234

12–3–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 234

## ವಿಶೇಷಚೇತನರ ಮಾಸಿಕ ಪಿಂಚಣಿ ಹೆಚ್ಚಿಸುವಂತೆ ಸಂಸದೆ ಒತ್ತಾಯ




**ದಾವಣಗೆರೆ:** ಇಂದಿರಾಗಾಂಧಿ ರಾಷ್ಟ್ರೀಯ ವಿಶೇಷಚೇತನರ ಪಿಂಚಣಿ ಯೋಜನೆಯಡಿ ಫಲಾನುಭವಿಗಳಿಗೆ ತಿಂಗಳಿಗೆ ಕೇವಲ 300 ರೂಪಾಯಿ ನೀಡಲಾಗುತ್ತಿದೆ. ಇದರಿಂದ ಮೂಲಭೂತ ಅಗತ್ಯಗಳನ್ನು ಪೂರೈಸಲು ಸಾಧ್ಯವಿಲ್ಲದ ಕಾರಣ ಪಿಂಚಣಿ ಮೊತ್ತ ಏರಿಕೆಗೆ ಕೇಂದ್ರ ಸರ್ಕಾರ ಕ್ರಮಕೈಗೊಳ್ಳಬೇಕು ಎಂದು ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಒತ್ತಾಯಿಸಿದ್ದಾರೆ.

ನವದೆಹಲಿಯ ಸಂಸತ್ತಿನಲ್ಲಿ ನಡೆದ ಕಲಾಪದ ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡಿದ ಪ್ರಭಾ,

ವಿಶೇಷಚೇತನರು ತಮ್ಮ ಮೂಲಭೂತ ಅಗತ್ಯಗಳನ್ನು ನೋಡಿಕೊಳ್ಳಲು ಅಲ್ಪ ಮೊತ್ತದ ಮಾಸಾಶನದಿಂದ ಸಾಧ್ಯವಾಗುವುದಿಲ್ಲ.ಹಾಗಾಗಿ ಮಾಸಾಶನ ಹೆಚ್ಚಿಸಬೇಕೆಂದು ಒತ್ತಾಯಿಸಿದರು.

ಪ್ರಸ್ತುತ ಶೇ. 80 ಅಥವಾ ಅದಕ್ಕಿಂತ ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವ ವ್ಯಕ್ತಿಗಳಿಗೆ ಮಾತ್ರ ಅರ್ಹತೆ ಇದೆ. ಶೇ. 40 ಅಥವಾ ಹೆಚ್ಚು ಅಂಗವಿಕಲತೆಯನ್ನು ಹೊಂದಿರುವವರಿಗೂ ಈ ಯೋಜನೆಯ ಲಾಭವನ್ನು ವಿಸ್ತರಿಸುವುದರ ಬಗ್ಗೆ ಪರಿಗಣಿಸಬೇಕೆಂದು ಸದನದ ಗಮನಸೆಳೆದರು.

ಸಂಸದರ ಪ್ರಶ್ನೆಗೆ ಕೇಂದ್ರ ಗ್ರಾಮಿಣ ವಿಕಾಸ್ ಸಚಿವರಾದ ಶಿವರಾಜ್ ಸಿನ್ಹಾ ಚೌಹಾಣ್ ಉತ್ತರಿಸುತ್ತಾ, ಕೇಂದ್ರ ಸರ್ಕಾರದಲ್ಲಿ ಈ ಬಗ್ಗೆ ಯಾವುದೇ ಪ್ರಸ್ತಾಪಗಳಿಲ್ಲ. ಆದರೆ ಆಯಾ ರಾಜ್ಯಗಳ ವ್ಯಾಪ್ತಿಯಲ್ಲಿ ವಿಶೇಷಚೇತನರ ಮಾಸಾಶನ ಹೆಚ್ಚಳ ಮಾಡಬಹುದಾಗಿದೆ ಎಂದರು.

## ಹುಟ್ಟುಹಬ್ಬಕ್ಕೆ ದುಂದು ವೆಚ್ಚ ಬೇಡ ಎಂದ ಸಂಸದರು: ಅಭಿಮಾನಿಗಳಿಂದ ವಿನೂತನ ಆಚರಣೆ

**ದಾವಣಗೆರೆ:** ಲೋಕಸಭಾ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ನಿನ್ನೆ ತಮ್ಮ ಹುಟ್ಟುಹಬ್ಬ ಆಚರಣೆಗಾಗಿ ದುಂದು ವೆಚ್ಚ ಮಾಡಬೇಡಿ ಎಂದು ಅಭಿಮಾನಿಗಳಿಗೆ ಕರೆ ನೀಡಿದ್ದರು. ಅವರು ಈ ರೀತಿ ಕರೆ ನೀಡಿದ 24 ಗಂಟೆಯಲ್ಲಿಯೇ, ಅವರ ಹುಟ್ಟುಹಬ್ಬವನ್ನು ಜನರಿಗೆ ಅನುಕೂಲವಾಗುವ ರೀತಿಯಲ್ಲಿ ವಿಶೇಷವಾಗಿ ಆಚರಿಸಬೇಕು ಎಂದು ತೀರ್ಮಾನಿಸಿದ ಹರಿಹರ ತಾಲ್ಲೂಕಿನ ಮುಖಂಡರಾದ ಬೆಳ್ಳೂಡಿ ಬಸವರಾಜ್ ಹಾಗೂ ಹಾಲೇಶ್ ಗೌಡ್ರು ದೇವರ ಬೆಳಕೇರಿಯ ಸಿದ್ದವೀರಪ್ಪ ನಾಲೆಯ ಬಲದಂಡೆಯ ಚಾನೆಲ್ ಹೂಳು ತೆಗೆಯುವ ಮೂಲಕ ಸಂಸದರಿಗೆ ಹುಟ್ಟು ಹಬ್ಬದ ಶುಭಾಶಯ ಕೋರಲು ತೀರ್ಮಾನಿಸಿದ್ದಾರೆ. ದೇವರಬೆಳಕೆರೆ, ಕಡ್ಲೆಗುಂದಿ, ಸಲಗನಹಳ್ಳಿ, ಬನ್ನಿಕೋಡು, ಶಿವನಹಳ್ಳಿ, ಬೆಳ್ಳೂಡಿ, ಹನಗವಾಡಿ ಮಾರ್ಗವಾಗಿ ಹರಿಹರ ತಲುಪುವ ಈ ನಾಲೆಯ ಹೂಳು ತೆಗೆಯುವ ಕಾರ್ಯ ಮಾ. 13 ಗುರುವಾರದಿಂದ ಪ್ರಾರಂಭವಾಗಲಿದೆ.

## 8ನೇ ತರಗತಿ ಪ್ರವೇಶ ಪರೀಕ್ಷೆ

**ದಾವಣಗೆರೆ :** ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿನ ಪರಿಶಿಷ್ಟಜಾತಿ ಹಾಗೂ ಅನೈರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ನೀಡಿ 8ನೇ ತರಗತಿಗೆ ಸೇರಿಸುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ.

ಏಪ್ರಿಲ್ 12 ರಂದು ಬೆಳಿಗ್ಗೆ 10 ಗಂಟೆಗೆ ಶ್ರೀರಾಮಕೃಷ್ಣ ವಿದ್ಯಾಶಾಲೆ, ಮೈಸೂರು ಇಲ್ಲಿ ಆಯ್ಕೆಯ ಪ್ರವೇಶ ಪರೀಕ್ಷೆ ನಡೆಸಲಾಗುವುದು. ಅರ್ಜಿಯನ್ನು ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ:37, ಮೊದಲನೇ ಮಹಡಿ, ಜಿಲ್ಲಾಡಳಿತ ಭವನ ಇಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಮಾರ್ಚ್ 29 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದು ಇಲಾಖೆಯ ಜಂಟಿ ನಿದೇಶಕರಾದ ನಾಗರಾಜ ತಿಳಿಸಿದ್ದಾರೆ.

## ರಾಷ್ಟ್ರೀಯ ವೃತ್ತಿ ರಂಗೋತ್ಸವ–2025

**ದಾವಣಗೆರೆ :** ವೃತ್ತಿ ರಂಗಭೂಮಿ, ರಂಗಾಯಣ ದಾವಣಗೆರೆ ವತಿಯಿಂದ ಮಾರ್ಚ್ 15, 16 ಮತ್ತು 17 ರಂದು ಬೆಳಿಗ್ಗೆ 11.30ಕ್ಕೆ ನಗರದ ದೃಶ್ಯಕಲಾ ಮಹಾವಿದ್ಯಾಲಯ, ಬಯಲು ರಂಗಮಂದಿರದ ಪ್ರಾಂಗಣದಲ್ಲಿ ವಿಚಾರ ಸಂಕಿರಣ, ರಂಗ ಸಂವಾದ, ರಂಗಗೌರವ, ರಂಗಗೀತೆಗಳ ಗಾಯನ, ನಾಟಕಗಳ ಪ್ರದರ್ಶನ, ರಂಗ ದಾಖಲೆಗಳ ಪ್ರದರ್ಶನ, ಚಿತ್ರಕಲಾ ಪ್ರದರ್ಶನ ಕುರಿತು ರಾಷ್ಟ್ರೀಯ ವೃತ್ತಿ ರಂಗೋತ್ಸವ–2025 ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಮಾರ್ಚ್ 15 ರಂದು ಬೆಳಿಗ್ಗೆ 11.30 ಕ್ಕೆ ಚಿತ್ರಕಲೆ ಮತ್ತು ರಂಗದಾಖಲೆಗಳ ಪ್ರದರ್ಶನವನ್ನು ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ಬಿ.ಡಿ.ಕುಂಬಾರ ಉದ್ಘಾಟಿಸುವರು. ವೃತ್ತಿ ರಂಗಭೂಮಿ ರಂಗಾಯಣ ನಿರ್ದೇಶಕರಾದ ಮಲ್ಲಿಕಾರ್ಜುನ ಕಡಕೋಳ ಅಧ್ಯಕ್ಷತೆ ವಹಿಸುವರು.


### ಗ್ಯಾರಂಟಿ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರ ನೇಮಕ:

# ವಿಧಾನಸಭೆಯಲ್ಲಿ ವಿಪಕ್ಷಗಳ ಗದ್ದಲ, ಕೋಲಾಹಲ..!

**ಬೆಂಗಳೂರು:** ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗಾಗಿ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾಂಗ್ರೆಸ್ ನಾಯಕರು, ಕಾರ್ಯಕರ್ತರನ್ನು ನೇಮಕ ಮಾಡಿರುವುದನ್ನು ವಿರೋಧಿಸಿ ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಸದಸ್ಯರು ಧರಣಿ ನಡೆಸಿ, ಪದೇ ಪದೇ ಕಲಾಪಕ್ಕೆ ಅಡ್ಡಿಪಡಿಸಿದ್ದರಿಂದ ವಿಧಾನಸಭೆಯಲ್ಲಿಂದು ಅಕ್ಷರಶ: ಕೋಲಾಹಲ ಉಂಟಾಯಿತು

**ಶಾಸಕರ ಅಧಿಕಾರ ಮೊಟಕು ಆರೋಪ:** ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗೆ ಕಾಂಗ್ರೆಸ್ ಕಾರ್ಯಕರ್ತರನ್ನು ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನಾಗಿ ನೇಮಿಸುವ ಮೂಲಕ ಸರ್ಕಾರ ಶಾಸಕರ ಅಧಿಕಾರವನ್ನು ಮೊಟಕುಗೊಳಿಸಿದೆ ಎಂದು ಆರೋಪಿಸಿದ ಪ್ರತಿಪಕ್ಷಗಳು, ಈ ಪಕ್ಷದ ಕಾರ್ಯಕರ್ತರಿಗೆ ಗೌರವಧನ ನೀಡಲು ರಾಜ್ಯದ ಬೊಕ್ಕಸದಿಂದ ಹಣವನ್ನು ಬಳಸಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದವು. ಈ ಎಲ್ಲ ಸಮಿತಿಗಳನ್ನು ರದ್ದುಪಡಿಸುವಂತೆ ಒತ್ತಾಯಿಸಿ ಪ್ರತಿಪಕ್ಷಗಳು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದವು. ಪ್ರತಿಪಕ್ಷಗಳ ಬೇಡಿಕೆಯನ್ನು ಸಚಿವ ಸಂಪುಟದಲ್ಲಿ ಪರಿಶೀಲಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಭರವಸೆ ನೀಡಿದರು.

ದೊಡ್ಡ ಮಟ್ಟದ ವೇತನ: ರಾಜ್ಯ ಮಟ್ಟದ ಸಮಿತಿಯ ಅಧ್ಯಕ್ಷರು ಮತ್ತು ಐವರು ಉಪಾಧ್ಯಕ್ಷರಿಗೆ ರಾಜ್ಯ ಸಚಿವರ ಸೌಲಭ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿಗಳ ಅಧ್ಯಕ್ಷರಿಗೆ ಕ್ರಮವಾಗಿ ರೂ.40,000 ಮತ್ತು ರೂ.25,000 ಮಾಸಿಕ ಗೌರವಧನ ನೀಡಿರುವುದು ಪ್ರತಿಪಕ್ಷಗಳ ತೀವ್ರ ಟೀಕೆಗೆ ಗುರಿಯಾಯಿತು. ಜಿಲ್ಲಾ ಸಮಿತಿಯ ಉಪಾಧ್ಯಕ್ಷರಿಗೆ ಮಾಸಿಕ 10 ಸಾವಿರ ಗೌರವಧನ ನೀಡಿದರೆ, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿ ಸದಸ್ಯರಿಗೆ ಕ್ರಮವಾಗಿ 1,100 ಮತ್ತು 1,000 ರೂ. ಗೌರವ



ಧನ ನೀಡಲಾಗುತ್ತಿದೆ. ರಾಜ್ಯಮಟ್ಟದ ಸಮಿತಿಯಲ್ಲಿ ಅಧ್ಯಕ್ಷರು, ಐವರು ಉಪಾಧ್ಯಕ್ಷರು ಹಾಗೂ 31 ಮಂದಿ ಸದಸ್ಯರಿದ್ದಾರೆ. ಜಿಲ್ಲಾ ಮಟ್ಟದ ಸಮಿತಿಯಲ್ಲಿ ಅಧ್ಯಕ್ಷರು, ಐವರು ಉಪಾಧ್ಯಕ್ಷರು ಮತ್ತು 15 ಸದಸ್ಯರನ್ನು ಹೊಂದಿದ್ದರೆ, ತಾಲೂಕು ಮಟ್ಟದ ಸಮಿತಿಗೆ ಅಧ್ಯಕ್ಷರು, 14 ಮಂದಿ ಸದಸ್ಯರಿದ್ದಾರೆ.

**ರಾಜ್ಯದ ಬೊಕ್ಕಸದಿಂದ ಕಾಂಗ್ರೆಸ್ ಕಾರ್ಯಕರ್ತರಿಗೆ ಹಣ:** ಪ್ರಶ್ನೋತ್ತರ ಕಲಾಪದಲ್ಲಿ ವಿಷಯ ಪ್ರಸ್ತಾಪಿಸಿದ ಜೆಡಿಎಸ್ ಶಾಸಕ ಎಂ. ಪಿ. ಕೃಷ್ಣಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಸಮಿತಿಗೆ ಸರ್ಕಾರ ಏಕೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಕ ಮಾಡಿದೆ ಎಂದು ಎಂದು ಪ್ರಶ್ನಿಸಿದರು. ಶಾಸಕರು ಮತ್ತು ಅಧಿಕಾರಿಗಳು ಇಲ್ಲವೇ? ರಾಜ್ಯದ ಬೊಕ್ಕಸವನ್ನು ಕಾಂಗ್ರೆಸ್ ಕಾರ್ಯಕರ್ತರಿಗೆ ಈ ರೀತಿ ನೀಡಬಹುದೇ? ಈ ದೇಶದಲ್ಲಿ ವಿವಿಧ ಪಕ್ಷಗಳು ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿವೆ, ಆದರೆ ಅದರ ಅನುಷ್ಠಾನಕ್ಕೆ ಎಂದಿಗೂ ಪಕ್ಷದ ಕಾರ್ಯಕರ್ತರನ್ನು ನೇಮಿಸಿಲ್ಲ. ಇದು ತಪ್ಪು . ಇದು ಕಾನೂನುಬಾಹಿರ ಎಂದರು. ಅನೇಕ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಕೃಷ್ಣಪ್ಪ ಅವರೊಂದಿಗೆ ಸೇರಿಕೊಂಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಬಿಜೆಪಿ ಶಾಸಕ ಸುನೀಲ್ ಕುಮಾರ್ ಮಾತನಾಡಿ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರ ಸಂಬಳ ಹೆಚ್ಚಿಸಲು ಹಿಂಜರಿಯುವ ಸರ್ಕಾರ, ಗ್ಯಾರಂಟಿ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಿಸಿ ದೊಡ್ಡ ಸಂಬಳ ನೀಡಲಾಗುತ್ತಿದೆ. ಏನಿದರ ಅರ್ಥ? ಎಲ್ಲಾ ಯೋಜನೆಗಳು ಡಿಬಿಟಿ ಮೂಲಕ ಆನ್ ಲೈನ್ ನಲ್ಲಿ ಅನುಷ್ಟಾನಗೊಳ್ಳುತ್ತಿರುವಾಗ ಇಂತಹ ಸಮಿತಿ ಏನು ಮಾಡುತ್ತವೆ ಎಂದು ಪ್ರಶ್ನಿಸಿದರು. ಡಿಕೆ ಶಿವಕುಮಾರ್ ಕಾಂಗ್ರೆಸ್ ಅಧ್ಯಕ್ಷರಾದ ನಂತರ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷದ ನಡುವೆ ಯಾವುದೇ ವ್ಯತ್ಯಾಸ ಇಲ್ಲದಂತಾಗಿದೆ. ಸರ್ಕಾರದ ಹಣವನ್ನು ಕಾಂಗ್ರೆಸ್ ತೆಗೆದುಕೊಳ್ಳುತ್ತಿದೆ ಎಂದು ಆರೋಪಿಸಿದರು.

ಕಲಾಪ ಕೆಲಕಾಲ ಮುಂದೂಡಿಕೆ: ಈ ವೇಳೆ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಈ ವಿಚಾರದಲ್ಲಿ ವಿಪಕ್ಷಗಳು ರಾಜಕೀಯ ಮಾಡುತ್ತಿವೆ ಎಂದು ಆರೋಪಿಸಿದರು. ಇದರಿಂದ ವಿಪಕ್ಷಗಳ ಸದಸ್ಯರು ಕೆರಳಿದ್ದರಿಂದ ಆಡಳಿತ ಹಾಗೂ ವಿಪಕ್ಷ ಸದಸ್ಯರ ನಡುವೆ ವಾಗ್ದಾಳಿ ನಡೆಯಿತು. ಮಧ್ಯ ಪ್ರವೇಶಿಸಿದ ಶಿವಕುಮಾರ್, ಇದು ಸರ್ಕಾರದ ಇಚ್ಛಾಶಕ್ತಿ. ಈ ಸರ್ಕಾರವನ್ನು ಅಧಿಕಾರಕ್ಕೆ ತಂದ ಪಕ್ಷದ ಕಾರ್ಯಕರ್ತರಿಗೆ ಈ ಸರ್ಕಾರದ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಹಕ್ಕಿದೆ ಎಂದು ಸಮರ್ಥಿಸಿಕೊಂಡರು. ಗದ್ದಲ ಮುಂದುವರಿದ ಕಾರಣ ಸ್ಪೀಕರ್ ಯುಟಿ ಖಾದರ್ ಸದನವನ್ನು ಕೆಲಕಾಲ ಮುಂದೂಡಿದರು.

ಕಲಾಪ ಮತ್ತೆ ಸಮಾವೇಶಗೊಂಡಾಗ ಶಾಸಕರು ತಮ್ಮ ತಮ್ಮ ಭಾಗದಲ್ಲಿ ಸರ್ಕಾರದ ಯೋಜನೆಗಳ ಅನುಷ್ಠಾನವನ್ನು ನೋಡಿಕೊಳ್ಳುತ್ತಾರೆ ಮತ್ತು ಶಾಸಕರನ್ನು ಕಡೆಗಣಿಸಿ ಈ ಸಮಿತಿಗಳನ್ನು ರಚಿಸುವುದು ಕಾನೂನುಬಾಹಿರ ಎಂದು ಕೃಷ್ಣಪ್ಪ ಹೇಳಿದರು.

ಶಾಸಕರ ಯಾವುದೇ ಅಧಿಕಾರ ಮೊಟಕುಗೊಳಿಸುತ್ತಿಲ್ಲ:

ಇದೇ ವೇಳೆ, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಿವೆ ಎಂದು ಆರೋಪಿಸಿದ ಶಿವಕುಮಾರ್, ಈ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವವರೆಗೆ ಈ ಯೋಜನೆಗಳನ್ನು ನಿಲ್ಲಿಸುವುದು ಅಸಾಧ್ಯ. 52,000 ಕೋಟಿ ರೂ. ಗಳ ಯೋಜನೆಗಳ ಅನುಷ್ಠಾನದ ಮೇಲುಸ್ತುವಾರಿ ಮಾಡಲು ಕಾಂಗ್ರೆಸ್ ಕಾರ್ಯಕರ್ತರಿಗೆ ಅವಕಾಶ ನೀಡಿರುವುದನ್ನು ಪ್ರತಿಪಕ್ಷಗಳು ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಶಾಸಕರ ಯಾವುದೇ ಅಧಿಕಾರವನ್ನು ಮೊಟಕುಗೊಳಿಸುತ್ತಿಲ್ಲ. ಒಂದು ವೇಳೆ ಆ ಸಮಿತಿಗೆ ಶಾಸಕರೇ ಮೇಲ್ವಿಚಾರಣೆ ಮಾಡಬೇಕೇ ಎಂಬುದರ ಕುರಿತು ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ತಿಳಿಸುತ್ತೇವೆ ಎಂದು ಹೇಳಿದರು.

## ಶ್ರೀರಾಮ ಸೇನೆಯಿಂದ ಆರ್‌ಟಿಓ ಕಚೇರಿಗೆ ಮುತ್ತಿಗೆ



**ದಾವಣಗೆರೆ:** ಸಾರಿಗೆ ಅಧಿಕಾರಿಗಳ ಮೇಲೆ ಲೋಕಾಯುಕ್ತ ಕೋರ್ಟ್ ನಲ್ಲಿ ಅಕ್ರಮ ಆಸ್ತಿ ಪ್ರಕರಣ ದಾಖಲಾಗಿದ್ದರೂ ಕೂಡ ಸರ್ಕಾರಿ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಶ್ರೀ ರಾಮ ಸೇನೆ ವತಿಯಿಂದ ನಗರದ ಆರ್.ಟಿ.ಓ. ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಪ್ರಾದೇಶಿಕಾ ಸಾರಿಗೆ ಅಧಿಕಾರಿ ಸಿ.ಎಸ್. ಪ್ರಮುಂತೇಶ್, ಹಿರಿಯ ಮೋಟರ್ ವಾಹನ ನೀರಿಕ್ಷಕ ಮೋಹಮದ್ ಖಾಲೀದ್ ಹಾಗೂ ಹಿರಿಯ ಮೋಟರ್ ವಾಹನ ನೀರಿಕ್ಷಕ ಟಿ.ಎಸ್. ಸತೀಶ್ ಅವರ ಮೇಲೆ ಅಕ್ರಮ ಆಸ್ತಿ ಸಂಬಂಧ ಲೋಕಾಯಕ್ತ ಕೋರ್ಟ್ ನಲ್ಲಿ ದೂರು ದಾಖಲಿಸಿದರು ಕೂಡ ಈ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಆರಾಮಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಆಕ್ರೋಶ ಹೊರ ಹಾಕಿದರು.

ಈ ವೇಳೆ ಶ್ರೀ ರಾಮ ಸೇನೆ ಜಿಲ್ಲಾಧ್ಯಕ್ಷ ಮಣಿಸರ್ಕಾರ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಬಂದ ಮೇಲೆ ರಾಜ್ಯದ್ಯಂತ ಸಾಕಷ್ಟು ಭ್ರಷ್ಟಚಾರ ತಾಂಡವಾಡುತ್ತಿದೆ. ಅದರಲ್ಲೂ ದಾವಣಗೆರೆ ನಗರದ ಆರ್ ಟಿ ಓ ಕಚೇರಿಯಲ್ಲಿ ಭ್ರಷ್ಟಚಾರ ಮನೆ ಮಾಡಿದೆ. ಜೊತೆಗೆ ಪ್ರಭಾವಿ ಅಧಿಕಾರಿಗಳ ಸಹಾಯದಿಂದ ಕಳೆದ 10,15 ವರ್ಷಗಳಿಂದ ಒಂದೇ ಜಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿ.ಎಸ್. ಪ್ರಮುಂತೇಶ್, ಮೋಹಮದ್ ಖಾಲೀದ್ ಹಾಗೂ ಟಿ.ಎಸ್. ಸತೀಶ್ ಸಾರ್ವಜನಿಕರಿಂದ ಹಣ ಕಿತ್ತುಕೊಂಡು ಅಕ್ರಮವಾಗಿ ಆಸ್ತಿ ಮಾಡಿದ್ದಾರೆ.

ಅವರುಗಳನ್ನು 15 ದಿನಗಳೊಳಗೆ ಅಧಿಕಾರಿಗಳನ್ನು ಅಮಾನತ್ತು ಇಲ್ಲವೇ ವರ್ಗಾವಣೆ ಮಾಡಬೇಕು ಇಲ್ಲದಿದ್ದರೆ ಜಿಲ್ಲಾದ್ಯಂತ ಆರ್.ಟಿ.ಓ. ಕಚೇರಿ ಮುಂಭಾಗ ಉಗ್ರಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸೇನೆಯ ಪದಾಧಿಕಾರಿಗಳಾದ ಪಿ. ಸಾಗರ್, ರಾಹುಲ್, ಶ್ರೀಧರ್, ಅನಿಲ್ ಸುರ್ವೆ, ರಾಜು ದೊಡ್ಡಮನಿ, ಪರಶುರಾಂ, ವಿನೋದ್ ರಾಜ್, ಶಿವು ಪೂಜಾರ್, ರಾಘು, ಅವಿನಾಶ್, ಮಧು, ಮಂಜು, ಶ್ರೀಕಾಂತ್, ಶಶಿ, ಸುನೀಲ್, ರುದ್ರೇಶ್, ಚಂದ್ರು ಇನ್ನಿತರರು ಪಾಲ್ಗೊಂಡಿದ್ದರು.

## ಕಾನೂನುಗಳಿದ್ದರೂ ಮಕ್ಕಳು, ಮಹಿಳೆಯರ ಮೇಲೆ ದೌರ್ಜನ್ಯ, ಹಿಂಸೆ: ನ್ಯಾ. ರಾಜೇಶ್ವರಿ




**ದಾವಣಗೆರೆ:** ದೇಶದಲ್ಲಿ ಮಕ್ಕಳು ಹಾಗೂ ಮಹಿಳೆಯರ ಪರವಾಗಿ ಎಷ್ಟೋ ಕಾನೂನುಗಳಿದ್ದರೂ ಸಹ ಈಗಲೂ ಸಹ ಮಕ್ಕಳು ಮತ್ತು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ, ಹಿಂಸೆ ಮುಂದುವರೆಯುತ್ತಿರುವುದು ನಿಜಕ್ಕೂ ಕಳವಳಕಾರಿ ಸಂಗತಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ತಿಳಿಸಿದರು

ನಗರದ ಆರ್ ಎಲ್ ಕಾನೂನು ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರು ಹಾಗೂ ಪುರುಷರಲ್ಲಿನ ಅಸಮಾನತೆ, ಸಾಮಾಜಿಕ ಅಂತರ ಕಡಿಮೆ ಮಾಡುವ ಮೂಲಕ ತಾರತಮ್ಯ ನಿವಾರಣೆ ಮಾಡಬೇಕಾಗಿದೆ. ಇಂತಹ ಮಹಿಳೆಯರ ದಿನಾಚರಣೆ ಮೂಲಕ ಕೆಲವು ಅನಿಷ್ಠಗಳನ್ನು ಹೋಗಲಾಡಿಸಲು ಮಹಿಳೆಯರು, ಪುರುಷರು ಇಬ್ಬರೂ ಮುಂದಾಗಬೇಕೆಂದು ಕಿವಿಮಾತು ಹೇಳಿದರು.

ಆಧುನಿಕತೆ ಇಷ್ಟೆಲ್ಲಾ ಮುಂದುವರೆದಿದ್ದರೂ ಸಹ ಈಗಲೂ ನಾವುಗಳು ಕೆಲವು ಕಡೆ ಪುರುಷ ಪ್ರಧಾನ ಸಮಾಜ ಕಾಣುತ್ತಿದ್ದೇವೆ. ಮನೆಗಳಲ್ಲೂ ಸಹ ಹೆಣ್ಣು ಮಕ್ಕಳಿಗಿಂತ ಗಂಡು ಮಕ್ಕಳಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡಲಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರದಲ್ಲಿ ಮಹಿಳೆಯರು ಪುರುಷರಿಗೆ ಸಮಾನ ಸ್ಥಾನದಲ್ಲಿದ್ದಾರೆ. ಅದಕ್ಕಾಗಿ ಹಲವಾರು ಮಹನೀಯರಾದ ರಾಜರಾಮ್‌ಮೋಹನ್ ರಾಯ್, ವಿವೇಕಾನಂದ, ಡಾ.ಬಿ.ಆರ್.ಅಂಬೇಡ್ಕರ್ ಸೇರಿದಂತೆ ಹಲವಾರು ಪುರುಷರ ಪಾತ್ರವೂ ಇದೆ ಎಂದು ಹೇಳಿದರು.

ಏನೇ ಕಾನೂನು ಇದ್ದರೂ ನಮ್ಮಗಳ ಮನಸ್ಥಿತಿ ಬದಲಾಗದ ಹೊರತು ಸಾಮಾಜಿಕವಾಗಿ ಬದಲಾವಣೆ ತರಲು ಅಸಾಧ್ಯ. ಕಾರ ನಮ್ಮಲ್ಲಿ ಮೊದಲು ಬದಲಾವಣೆ ಆಗಬೇಕು. ಕಾನೂನುಗಳಿಗೆ ಗೌರವ ನೀಡಿದಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯ. ನಮ್ಮಗಳ ಮನಸ್ಸನ್ನು ನಿಗ್ರಹ ಮಾಡಿದಾಗ ಮಾತ್ರ ಅಪರಾಧಗಳನ್ನು ತಡೆಗಟ್ಟಬಹುದು ಸಾಧ್ಯ ಎಂದು ತಿಳಿಸಿದರು. **(3ನೇ ಪುಟಕ್ಕೆ)**

## ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆಗೆ ಒತ್ತಾಯಿಸಿ ಬ್ಯಾಂಕ್ ನೌಕರರ ಪ್ರತಿಭಟನೆ

**ದಾವಣಗೆರೆ:** ಬ್ಯಾಂಕುಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಶೀಘ್ರ ನೇಮಕಾತಿ ಮಾಡಬೇಕು, 5 ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ತರಬೇಕು, ತಾತ್ಕಾಲಿಕವಾಗಿ ಕೆಲಸ ಮಾಡುತ್ತಿರುವ ನೌಕರರನ್ನು ಖಾಯಂಗೊಳಿಸಬೇಕು ಎಂದು ಬ್ಯಾಂಕ್ ಕಾರ್ಮಿಕ ಸಂಘಟನೆಗಳ ಸಂಯುಕ್ತ ವೇದಿಕೆಯ ಜಿಲ್ಲಾ ಸಂಚಾಲಕ ಹಾಗೂ ಕೆನರಾ ಬ್ಯಾಂಕ್ ಎಂಪ್ಲಾಯೀಸ್ ಯೂನಿಯನ್‌ನ ರಾಷ್ಟ್ರೀಯ ಕಾರ್ಯದರ್ಶಿ ಕೆ.ರಾಘವೇಂದ್ರ ನಾಯರಿ ಸರ್ಕಾರವನ್ನು ಒತ್ತಾಯಿಸಿದರು.

ಮಂಗಳವಾರ ದೇಶದಾದ್ಯಂತ ಎಲ್ಲ ಬ್ಯಾಂಕುಗಳ ಪ್ರಾದೇಶಿಕ ಕಛೇರಿಗಳ ಮುಂಭಾಗ ಪ್ರತಿಭಟನಾ ಮತಪ್ರದರ್ಶನ ನಡೆಸಲು ಬ್ಯಾಂಕ್ ಕಾರ್ಮಿಕ ಸಂಘಟನೆಗಳ ಸಂಯುಕ್ತ ವೇದಿಕೆಯು ಕರೆ ನೀಡಿರುವ ಹಿನ್ನಲೆಯಲ್ಲಿ ದಾವಣಗೆರೆಯ ಸಿದ್ದವೀರಪ್ಪ ಬಡಾವಣೆಯ ಕೆನರಾ ಬ್ಯಾಂಕಿನ ಪ್ರಾದೇಶಿಕ ಕಛೇರಿಯ ಮುಂಭಾಗ ಆಯೋಜಿಸಿದ್ದ ಪ್ರತಿಭಟನಾ




ಮತಪ್ರದರ್ಶನದಲ್ಲಿ ಮಾತನಾಡಿದರು.

ಕೆನರಾ ಬ್ಯಾಂಕ್ ಅಧಿಕಾರಿಗಳ ಸಂಘಟನೆಯ ಪ್ರಾದೇಶಿಕ ಕಾರ್ಯದರ್ಶಿ ಪ್ರದೀಪ್ ಪಾಟೀಲ್ ಮಾತನಾಡಿ ಬ್ಯಾಂಕುಗಳಲ್ಲಿ ಅಗತ್ಯ ಪ್ರಮಾಣದ ನೇಮಕಾತಿ ಮಾಡುವ ಮೂಲಕ ಗ್ರಾಹಕರಿಗೆ ಅತ್ಯುತ್ತಮ ಸೇವೆಯನ್ನು ಒದಗಿಸಬೇಕು ಹಾಗೂ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ಬರಬೇಕು ಎನ್ನುವುದು ನಮ್ಮ ಹಲವಾರು ವರ್ಷಗಳ ಬೇಡಿಕೆಯಾಗಿದೆ. ಈ ಬಗ್ಗೆ ಇಂಡಿಯನ್ ಬ್ಯಾಂಕ್ ಅಸೋಸಿಯೇಷನ್ ಹಾಗೂ ಕಾರ್ಮಿಕ ಸಂಘಟನೆಗಳ ನಡುವೆ ಈಗಾಗಲೇ ಒಪ್ಪಂದ ಆಗಿದ್ದರೂ ಸಹ ಕೇಂದ್ರ ಸರಕಾರ ಈ ಕುರಿತು ಮೌನ ತಾಳಿದೆ ಎಂದು ಆರೋಪಿಸಿದರು.

ದಾವಣಗೆರೆ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಕಾರ್ಯದರ್ಶಿ ಹೆಚ್.ಎಸ್.ತಿಪ್ಪೇಸ್ವಾಮಿ ಮಾತನಾಡಿ ಸರಕಾರವು ಈ ಕೂಡಲೇ ಮಧ್ಯಪ್ರವೇಶಿಸಿ ನಮ್ಮ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲವಾದರೆ ಮಾರ್ಚ್ 24 ಮತ್ತು 25 ರಂದು ಅಖಿಲ ಭಾರತ ಬ್ಯಾಂಕ್ ಮುಷ್ಕರ ನಡೆಯಲಿದೆ ಎಂದು ಎಚ್ಚರಿಸಿದರು.

ಪ್ರತಿಭಟನಾ ಮತಪ್ರದರ್ಶನದಲ್ಲಿ ಬ್ಯಾಂಕ್ ಕಾರ್ಮಿಕ ಸಂಘಟನೆಗಳ ನಾಯಕರುಗಳಾದ ಕೆ.ರಾಘವೇಂದ್ರ ನಾಯರಿ, ಪ್ರದೀಪ್ ಪಾಟೀಲ್, ಹೆಚ್.ಎಸ್.ತಿಪ್ಪೇಸ್ವಾಮಿ, ಹೆಚ್.ಸುಗುರಪ್ಪ, ಅನುರಾಧಾ ಸಂಪನ್ನ ಮುತಾಲಿಕ್, ಪರಶುರಾಮ, ಕೆ.ಗಂಗಾಧರ್, ವಿನೋದ್ ವರ್ಣೇಕರ್, ಸಿದ್ದಲಿಂಗೇಶ್ ಕೋರಿ, ಎಸ್.ಪ್ರಶಾಂತ್, ಡಿ.ಹರ್ಷದ್, ಎಲ್. ಗೋಪಾಲಕೃಷ್ಣ, ವಿ.ಆರ್.ಹರೀಶ್, ಅನಿಲ್ ಟಿ.ಎಸ್., ಗೋಪಾಲಕೃಷ್ಣ, ಬಿ.ಎ.ಸುರೇಶ್, ರಶ್ಮಿ ನಾಗರಾಜ್, ಕೆ.ಜಯಲಕ್ಷ್ಮಿ, ವಿಶ್ವಚೇತನ್, ಆಶಾ ವಿದ್ಯಾಸಾಗರ್, ಸುಷ್ಮ ಜೋಷಿ, ರೋಹಿಣಿ ಮಂಡ್ರೆ, ಎಲ್.ಲತಾ, ನಾಗರತ್ನಮ್ಮ, ರೇಣುಕಮ್ಮ ಮತ್ತಿತರರು ಭಾಗವಹಿಸಿದ್ದರು.

## ಮಾರ್ಚ್ 15 ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ, 50 ಕ್ಕೂ ಹೆಚ್ಚು ಕಂಪನಿಗಳು ಭಾಗಿ, 5000 ಕ್ಕೂ ಹೆಚ್ಚು ಹುದ್ದೆಗಳಿಗೆ ಆಯ್ಕೆ; ಜಿಲ್ಲಾಧಿಕಾರಿ

**ದಾವಣಗೆರೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವೃದ್ದಿ ಇಲಾಖೆಯಿಂದ ಮಾರ್ಚ್ 15 ರಂದು ದಾವಣಗೆರೆಯಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದ್ದು ಐದು ಸಾವಿರಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಆಯ್ಕೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಅವರು ಮಂಗಳವಾರ (ಮಾ.11) ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಉದ್ಯೋಗ ಮೇಳ ಕುರಿತು ಏರ್ಪಡಿಸಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಉದ್ಯೋಗ ಮೇಳವು ಹದಡಿ ರಸ್ತೆಯಲ್ಲಿರುವ ಸರ್ಕಾರಿ ಐಟಿಐ ಕಾಲೇಜು ಮತ್ತು ಬಾಪೂಜಿ ತಾಂತ್ರಿಕ ಮಹಾವಿದ್ಯಾಲಯ ಈ ಎರಡು ಕಡೆ ನಡೆಯಲಿದೆ. ಬಿಐಟಿಯಲ್ಲಿ ಬಿಇ ಹಾಗೂ ಎಂಬಿಎ ಪದವಿ ಪಡೆದ ಅಭ್ಯರ್ಥಿಗಳ ಆಯ್ಕೆ ನಡೆಯಲಿದ್ದು ಐಟಐ ಕಾಲೇಜಿನಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಪದವಿ, ಸ್ನಾತಕೋತ್ತರ ಪದವಿ ಪಡೆದವರಿಗೆ



ಆಯ್ಕೆ ನಡೆಯಲಿದೆ ಎಂದರು.

ಬೃಹತ್ ಉದ್ಯೋಗ ಮೇಳದಲ್ಲಿ 50 ಕ್ಕೂ ಹೆಚ್ಚಿನ ಕಂಪನಿಗಳು ಭಾಗವಹಿಸಲು ತಮ್ಮ ಆಸಕ್ತಿ ವ್ಯಕ್ತಪಡಿಸಿವೆ. ಆದ್ದರಿಂದ ಜಿಲ್ಲೆಯ ನಿರುದ್ಯೋಗಿಗಳಿಗೆ ಮೇಳ ವರದಾನವಾಗಿದೆ. ಮೇಳದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಇಲಾಖೆಗೆ ಸಂಬಂಧಿಸಿದ ಕಂಪನಿಗಳು ಭಾಗವಹಿಸುತ್ತಿವೆ. ಜಿಲ್ಲೆಯ 1000 ಕ್ಕೂ ಹೆಚ್ಚಿನ ಯುವಕ, ಯುವತಿಯರು ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಸಿದ್ದು ಎಲ್ಲಾ ದಾಖಲೆಗಳೊಂದಿಗೆ ನೇರವಾಗಿಯು ಭಾಗವಹಿಸಲು ಅವಕಾಶ ಇದೆ. ಆಗಮಿಸುವ ಅಭ್ಯರ್ಥಿಗಳಿಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದರು. ಜಿಲ್ಲೆಯಲ್ಲಿ 6 ಸಾವಿರಕ್ಕಿಂತಲೂ ಹೆಚ್ಚು ಪದವಿ, ಡಿಪ್ಲೊಮಾ ಪಾಸಾದವರಿಗೆ ಯುವನಿಧಿಯಡಿ ನಿರುದ್ಯೋಗ ಭತ್ಯೆ ನೀಡುತ್ತಿದ್ದು ಇವರೆಲ್ಲರಿಗೂ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಲಾಗಿದೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಕುಂದಿದ ಜೀವಂತಿಕೆ ವ್ಯವಸ್ಥೆಯಲ್ಲಿ ದೀರ್ಘಕಾಲೀನ ವಿಷದಂತ ವರ್ತಿಸುತ್ತದೆ. ನಿಮ್ಮನ್ನು ಸೃಜನಶೀಲ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಮತ್ತು ರೋಗದ ವಿರುದ್ಧ ಹೋರಾಡಲು ಪ್ರೇರೇಪಿಸುವುದು ಒಳ್ಳೆಯದು. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ತನ್ನ ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ.

### ವೃಷಭ ರಾಶಿ

ನಿಮ್ಮ ಕೆಟ್ಟ ಚಟಗಳು ನಿಮ್ಮನ್ನು ನಾಶಗೊಳಿಸುತ್ತವೆ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು.ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು. ಸಾಲ ಪಡೆಯುವುದನ್ನು ತಪ್ಪಿಸಲು ನಿಮಗೆ ಸೂಚಿಸಲಾಗಿದೆ. ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು, ನೀವು ಅದೃಷ್ಟವಂತರು.

### ಮಿಥುನ ರಾಶಿ

ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ಹಳೆಯ ಸಂಬಂಧಿಗಳು ಅವಿವೇಕದ ಬೇಡಿಕೆಗಳನ್ನು ಮಾಡುವ ಸಾಧ್ಯತೆಯಿದೆ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಇಂದು ನಿಮ್ಮ ಮನಸ್ಸು ಕಚೇರಿಯ ಕೆಲಸದಲ್ಲಿ ಇರುವುದಿಲ್ಲ. ಇಂದು ನಿಮ್ಮ ಮನಸ್ಸಿನಲ್ಲಿ ಯಾವುದೇ ಸಂದಿಗ್ಧತೆ ಉಳಿದಿರುತ್ತದೆ.

### ಕರ್ಕ ರಾಶಿ

ಭಾವನಾತ್ಮಕವಾಗಿ ನೀವು ತುಂಬ ಸ್ಥಿರವಾಗಿರುವುದಿಲ್ಲ – ಆದ್ದರಿಂದ ನೀವು ಇತರರ ಮುಂದೆ ಹೇಗೆ ವರ್ತಿಸುತ್ತೀರಿ ಮತ್ತು ಏನು ಹೇಳುತ್ತೀರಿ ಎನ್ನುವ ಬಗ್ಗೆ ಎಚ್ಚರದಿಂದಿರಿ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ. ಪ್ರೇಮದಲ್ಲಿ ಗುಲಾಮರಂತೆ ವರ್ತಿಸಬೇಡಿ.

### ಸಿಂಹ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ಕನ್ಯಾ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

### ತುಲಾ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನೀವು ಶಾಂತಿ ಕಾಪಾಡಲು ಹಾಗೂ ಕೌಟುಂಬಿಕ ಸಾಮರಸ್ಯವನ್ನು ಕಾಪಾಡಲು ನಿಮ್ಮ ಕೋಪವನ್ನು ಮೆಟ್ಟಿ ನಿಲ್ಲಬೇಕು ನೀವು ಇಂದು ಪ್ರೀತಿ ಮಾಡುವ ಅವಕಾಶವನ್ನು ಕಳೆದುಕೊಳ್ಳದಿದ್ದಲ್ಲಿ, ನಿಮ್ಮ ಇಡೀ ಜೀವನದಲ್ಲಿ ಈ ದಿನವನ್ನು ಎಂದಿಗೂ ಮರೆಯುವುದಿಲ್ಲ. ನೀವು ಬಡ್ತಿ ಪಡೆಯುವ ಸಾಧ್ಯತೆಯಿರುವುದರಿಂದ ನಿಮ್ಮ ಶ್ರಮವನ್ನು ಪ್ರಶಂಸಿಸಲಾಗುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ಕುಂದಿದ ಜೀವಂತಿಕೆ ವ್ಯವಸ್ಥೆಯಲ್ಲಿ ದೀರ್ಘಕಾಲೀನ ವಿಷದಂತ ವರ್ತಿಸುತ್ತದೆ. ನಿಮ್ಮನ್ನು ಸೃಜನಶೀಲ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಮತ್ತು ರೋಗದ ವಿರುದ್ಧ ಹೋರಾಡಲು ಪ್ರೇರೇಪಿಸುವುದು ಒಳ್ಳೆಯದು. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಮಕ್ಕಳೊಂದಿಗೆ ಸಮಯ ಕಳೆಯುವುದು ಮುಖ್ಯ. ನೀವು ಮೊದಲ ನೋಟದಲ್ಲೇ ಪ್ರೀತಿಯಲ್ಲಿ ಬೀಳಬಹುದು. ವೃತ್ತಿಪರ ವಿಷಯಗಳನ್ನು ಆರಾಮವಾಗಿ ಬಗೆಹರಿಸಲು ನಿಮ್ಮ ಅನುಭವವನ್ನು ಬಳಸಿ

### ಧನು ರಾಶಿ

ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

### ಮಕರ ರಾಶಿ

ಗರ್ಭಿಣಿಯರಿಗೆ ಉತ್ತಮ ದಿನವಲ್ಲ. ನೀವು ನಡೆಯುವಾಗ ಹೆಚ್ಚು ಜಾಗರೂಕರಾಗಿರಬೇಕು. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ನೀವು ಇಂದು ಹಾಜರಾಗುವ ಒಂದು ಸಾಮಾಜಿಕ ಸಮಾರಂಭದಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ಇತರರ ಹಸ್ತಕ್ಷೇಪ ವ್ಯಾಜ್ಯವುಂಟುಮಾಡುತ್ತದೆ.

### ಕುಂಭ ರಾಶಿ

ನಕಾರಾತ್ಮಕ ಆಲೋಚನೆಗಳು ಮಾನಸಿಕ ಕಾಯಿಲೆಗಳಾಗುವ ಮೊದಲೇ ನೀವು ಅವುಗಳನ್ನು ನಾಶಮಾಡಬೇಕು. ನೀವು ನಿಮಗೆ ಸಂಪೂರ್ಣ ಮಾನಸಿಕ ತೃಪ್ತಿ ನೀಡುವ ದಾನ ಮತ್ತು ಧರ್ಮಕಾರ್ಯಗಳಲ್ಲಿ ನಿಮ್ಮನ್ನು ತೊಡಗಿಸಿಕೊಂಡು ಅವುಗಳನ್ನು ತೊಡೆದುಹಾಕಬಹುದು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

### ಮೀನ ರಾಶಿ

ಹೊರಾಂಗಣ ಚಟುವಟಿಕೆಗಳು ನಿಮಗೆ ಉಪಯುಕ್ತವಾಗುತ್ತವೆ. ಕೋಟೆಯೊಳಗಿನ ಜೀವನ ಶೈಲಿ ಮತ್ತು ಯಾವಾಗಲೂ ಭದ್ರತೆಯ ಬಗ್ಗ ಯೋಚಿಸುವುದು ನಿಮ್ಮ ದೈಹಿಕ ಹಾಗೂ ನಿಮ್ಮ ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತವೆ. ಇದು ನಿಮ್ಮನ್ನು ಒಬ್ಬ ಗಾಬರಿಯ ವ್ಯಕ್ತಿಯನ್ನಾಗಿಯೂ ಮಾಡುತ್ತದೆ. ಹಣಕಾಸು ಲಾಭ ಒಂದಕ್ಕಿಂತ ಹೆಚ್ಚು ಮೂಲಗಳಿಂದ ಬರುತ್ತದೆ.

# ಹಿರೇಮಗಳೂರಿನಲ್ಲಿ ಪಂಚವಟಿ ಯಾತ್ರಿ ನಿವಾಸ ಲೋಕಾರ್ಪಣೆ





**ಚಿಕ್ಕಮಗಳೂರು:** ಹಿರೇಮಗಳೂರು ಶ್ರೀ ಕೋದಂಡರಾಮಚಂದ್ರಸ್ವಾಮಿ ದೇವಸ್ಥಾನ ದ ಸಮೀಪ ಪ್ರವಾಸೋದ್ಯಮ ಇಲಾಖೆಯ ಅನುದಾನದ ಅಡಿಯಲ್ಲಿ ನೂತನವಾಗಿ ನಿರ್ಮಿಸಿರುವ ಪಂಚ ವಟಿ ಯಾತ್ರಿ ನಿವಾಸದ ಕಟ್ಟಡವನ್ನು ಭಾನುವಾರ ಧಾರ್ಮಿಕ ಪೂಜಾಕೈಂಕಾರ್ಯಗಳ ನಡುವೆ ಗ್ರಾಮಸ್ಥರ ಸಮ್ಮುಖದಲ್ಲಿ ಶಾಸಕ ಹೆಚ್.ಡಿ.ತಮ್ಮಯ್ಯ ಲೋಕಾರ್ಪಣೆಗೊಳಿಸಿದರು.

ಶ್ರೀ ಕೋದಂಡರಾಮಚಂದ್ರ ವಿಗ್ರಹವನ್ನು ದೇವಾಲಯದ ಪ್ರಧಾನ ಅರ್ಚಕರ ನೇತೃತ್ವ ದಲ್ಲಿ ಸಮಿತಿ ಸದಸ್ಯರುಗಳು, ಗ್ರಾಮಸ್ಥರು ಸಂಪ್ರದಾಯಿಕ ಪಂಚೆ, ಶಲ್ಯ ಧರಿಸಿ ನೂತನ ಕಟ್ಟಡದ ಒಳಾಂ ಗಣಕ್ಕೆ ಕರೆತಂ ದರು. ಕನ್ನಡ ಪೂಜಾರಿ ಪೂಜಾರಿ ಹಿರೇಮಗಳೂರು ಕಣ್ಣನ್ ಶ್ಲೋಕ, ಮಂತ್ರಗಳ ಮುಖೇನಾ ಶ್ರೀರಾಮ ನಲ್ಲಿ ಪ್ರಾರ್ಥನೆ ಸಲ್ಲಿಸಿ ಕಟ್ಟಡದ ಒಳಿತಿಗೆ ಶುಭ ಹಾರೈಸಿದರು.

ಬಳಿಕ ಶ್ರೀರಾಮನ ವಿಗ್ರಹ ಮೂರ್ತಿಯನ್ನು ಅಡ್ಡಪಲ್ಲಕ್ಕಿಯಲ್ಲಿ ಕುಳ್ಳಿರಿಸಿ ದೇವಾಲಯ ಸುತ್ತಲು ಮೆರವ ಣಿಗೆ ನಡೆಸಿದರು. ಗ್ರಾಮದ ಹಳೇ ವಿದ್ಯಾರ್ಥಿಗಳು ಭಕ್ತರಿಗೆ ಪಾನಕ ಹಂಚಿದರು. ಮನೆಗಳ ಸಮೀಪ ವಿಗ್ರಹ ಮೂರ್ತಿ ಬರುತ್ತಿದ್ದಂತೆ ಸ್ಥಳೀಯ ನಿವಾಸಿಗಳು, ಅಂಗಡಿ ಮುಂಗಟ್ಟುದಾರರು ರಸ್ತೆಯನ್ನು ಶುಚಿಗೊಳಿಸಿ ಶ್ರೀ ಕೋದಂಡರಾಮನಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಶಾಸಕ ಹೆಚ್.ಡಿ.ತಮ್ಮಯ್ಯ ಶ್ರೀಕೋದಂಡರಾಮನ ಸನ್ನಿಧಾನಕ್ಕೆ ಆಗಮಿಸುವ ಂಥ ಭಕ್ತಾಧಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಪಂಚ ವಟಿ ಕುಟೀರ ಯಾತ್ರಿ ನಿವಾಸ ನಿರ್ಮಿಸಿ ದೂರದೂರಿನಿಂದ ಬರುವಂಥ ಭಕ್ತಾಧಿಗಳಿಗೆ ರಿಯಾಯಿತಿ ದರದಲ್ಲಿ ಸೂಕ್ತ ವ್ಯವ ಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಸುಮಾರು 144 ವರ್ಷಗಳಿಗೊಮ್ಮೆ ಬರುವಂಥ ನಕ್ಷತ್ರದಲ್ಲಿ ಬ್ರಹ್ಮರಥೋತ್ಸವ ಆಚರಿಸುತ್ತಿರುವ ಕಾರಣ ಯಾತ್ರಿ ನಿವಾಸವನ್ನು ಇಂದೇ ಲೋಕಾರ್ಪಣೆ ಮಾಡಲಾಗಿದೆ. ಕ್ಷೇತ್ರದ ಮಾಜಿ ಶಾಸಕರು ಪ್ರವಾ ಸೋದ್ಯಮ ಸಚಿವರಾದ ವೇಳೆಯಲ್ಲಿ 2 ಕೋಟಿ ಅನುದಾನ ಮಂಜೂರಾಗಿತ್ತು. ಇದೀಗ ಯಾತ್ರಿಕರ ನಿವಾಸ ಪೂರ್ಣ ಗೊಂಡು ಭಕ್ತಾಧಿಗಳಿಗೆ ಸಮರ್ಪಿಸಲಾಗಿದೆ ಎಂದು ಹೇಳಿದರು.

ಪ್ರಸ್ತುತ ರಾಜ್ಯ ಸರ್ಕಾರದಿಂದ ಯಾತ್ರಿ ನಿವಾಸದ ಕಾಂಪೌಂಡ್ ನಿರ್ಮಾಣಕ್ಕೆ 50 ಲಕ್ಷ ರೂ. ಮಂ ಜೂರಾಗಿದ್ದು ಈ ಪೈಕಿ 25 ಲಕ್ಷ ಬಿಡುಗಡೆಗೊಂಡಿದೆ. ಒಟ್ಟಾರೆ ಈ ಪಂಚಕುಟಿ ಕುಟೀರಕ್ಕೆ 2.50 ಕೋಟಿ ವ್ಯಯಿಸಲಾಗಿದೆ. ಇದೀಗ ಪ್ರಸಿದ್ಧ ದೇವಾಲಯಕ್ಕೆ ಯಾತ್ರಿ ನಿವಾಸದ ಕೊರತೆಯನ್ನು ನೀಗಿಸಿ ಭಕ್ತಾಧಿಗಳಿಗೆ ತಂಗಲು ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು. ಯಾತ್ರಿ ನಿವಾಸಕ್ಕೆ ಭೇಟಿ ಕೊಡುವ ಭಕ್ತಾಧಿಗಳು ಹೋಂಸ್ಟೇ ಅಥವಾ ರೆಸಾರ್ಟ್ ಮಾದರಿಯಂತೆ ತಿಳಿ ಯದೇ ದೇವಾಲಯ ಆಶ್ರಯ ತಾಣವೆಂದು ಭಾವಿಸಿ, ಶಾಂತಿಯಿಂದ ತಂಗುವ ಮೂಲಕ ಸ್ವಚ್ಚತೆ ಕಾಪಾಡ ಬೇಕು. ಅಲ್ಲದೇ ಈ ಕಟ್ಟಡಕ್ಕೆ ಅಡುಗೆ ಮನೆಯ ಅವಶ್ಯಕವಿರುವ ಹಿನ್ನೆಲೆ ಸದ್ಯದಲ್ಲೇ ಅಡುಗೆ ಕೋಣೆಗೆ ಅನು ದಾನ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ದೇವಾಲಯ ಪ್ರಧಾನ ಅರ್ಚಕ ಹಿರೇಮಗಳೂರು ಕಣ್ಣನ್ ಮಾತನಾಡಿ ಭಾರ್ಗರಿಪುರಿ ಶ್ರೀ ಕೋದಂಡ ರಾಮಚಂದ್ರ ಸ್ವಾಮಿ ದೇವಾಲಯಕ್ಕೆ ದೇಶ-ವಿದೇಶಗಳಲ್ಲಿ ಭಕ್ತಗಣವಿದೆ. ವಿಶೇಷವಾಗಿ ಈ ಬ್ರಹ್ಮ ರಥೋ ತ್ಸವಕ್ಕೆ ಸಾವಿರಾರು ಸಂಖ್ಯೆಯಲ್ಲಿ ಭಕ್ತಾಧಿಗಳು, ದೇವಾಲಯ ಒಕ್ಕಲಿನವರು ಸಂತೋಷದಿಂದ ಪಾಲ್ಗೊಂಡು ಜಾತ್ರಾ ಮಹೋತ್ಸವ ಸಂಭ್ರಮದಿಂದ ಆಚರಿಸುತ್ತಾರೆ ಎಂದರು.

ಈ ಸಂದರ್ಭದಲ್ಲಿ ನಗರಸಭಾ ಅಧ್ಯಕ್ಷ ಸುಜಾತ ಶಿವಕುಮಾರ್, ಗ್ಯಾರಂಟಿ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಗುತ್ತಿಗೆದಾರ ಜಯಣ್ಣ, ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ದ ಅಧ್ಯಕ್ಷ ಬಿ.ಹೆಚ್.ಹರೀಶ್, ನಗರಸಭೆ ಸದಸ್ಯೆ ವಿದ್ಯಾ ಬಸವರಾಜ್, ಹಿರೇಮಗಳೂರು ಗ್ರಾಮಸ್ಥ ರಾದ ಹೆಚ್.ಕೆ.ಕೇಶವಮೂರ್ತಿ, ಆಶಾ ರಂಗನಾಥ್, ಕುಲಕರ್ಣಿ, ರಮಾ ಪ್ರಸಾದ್, ಪ್ರವಾಸೋದ್ಯಮ ಇಲಾಖೆ ರೋಹಿತ್, ನಿರ್ಮಿತಿ ಕೇಂದ್ರದ ಗಂಗಾಧರ್, ದೇವಾಲಯ ಟ್ರಸ್ಟಿ ಎಂ.ಎನ್.ರಂಗನಾಥ್ ಮತ್ತಿತರರಿದ್ದರು.

# ಗೀತಾರಿಗೆ ಜೆಸಿಐನಿಂದ ಸನ್ಮಾನ

ಚಿಕ್ಕಮಗಳೂರು. ಮಹಿಳಾ ದಿನಾಚರಣೆ ಪ್ರಯುಕ್ತ ಸರ್ಕಾರಿ ಶಾಲೆಯ ಅಭಿವೃದ್ಧಿಗಾಗಿ ವೈಯಕ್ತಿಕ ಸೇವೆ ಪರಿಗಣಿಸಿ ರಾಜ್ಯಮಟ್ಟದ ಶಿಕ್ಷಕ ಪ್ರಶಸ್ತಿ ಪಡೆದಿರುವ ಶಿಕ್ಷಕಿ ಗೀತಾ ಅವರಿಗೆ ಜೆಸಿಐ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಚಿಕ್ಕಮಗಳೂರು ತಾಲ್ಲೂಕಿನ ಯಲಗುಡಿಗೆ ಗ್ರಾಮದ ಸರ್ಕಾರಿ ಪ್ರಾಥಮಿಕ ಪಾಠಶಾಲೆಯ ಶಿಕ್ಷಕಿ ಗೀತಾ ಅವರಿಗೆ ಜೆಸಿಐ ವತಿಯಿಂದ ಮಹಿಳಾ ದಿನಾಚರಣೆಯ ಅಂಗವಾಗಿ ಸನ್ಮಾನಿಸಿ ಮಹಿಳಾ ದಿನಾಚರಣೆಯನ್ನು ಶಾಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜೆಸಿಐನ ಅಧ್ಯಕ್ಷರಾದ ಪ್ರದೀಪ್ ಅವರು ಮಾತನಾಡಿ ಪ್ರಸ್ತುತ ತಲೆ ಮಾರಿನಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳನ್ನು ಮುಂದುವರೆದಿದ್ದು ಇವರ ಕೊಡುಗೆ ನಮ್ಮ ಜೀವನಕ್ಕೆ ಅಪಾರವಾಗಿದೆ ಚಂದ್ರನ ಮೇಲೆ ಕಾಲಿಡುವುದರೊಂದಿಗೆ ಒಲಂಪಿಕ್ಸ್ ನಲ್ಲಿ ಚಿನ್ನದ ಪದಕವನ್ನು ಬೇಟೆಯಾಡಿ ಸಮಾಜದಲ್ಲಿ ಸರಿಸಮಾನ ನ್ಯಾಯವನ್ನು ಲಿಂಗತ್ವ ಭೇದವಿಲ್ಲದೆ ಸಾರುವ ಮೂಲಕ ಪ್ರತಿಯೊಬ್ಬರು ಈ ಸಮಾಜದಲ್ಲಿ ಸಮಾನರು ಎಂದು ಒಂದು ಉತ್ತಮ ಸಂದೇಶವನ್ನು ನೀಡಿದ್ದು ಇದರಂತೆಯೇ ಈ ಸರ್ಕಾರಿ ಶಾಲೆಯ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಿಕ್ಷಕಿ ಗೀತಾ ಅವರ ಸಾಧನೆ ಅಪಾರವಾಗಿದೆ ಇದನ್ನು ಮನಗಂಡು ಇವರನ್ನು ಗೌರವಿಸಲು ಅವಕಾಶ ಸಿಕ್ಕಿರುವ ನಮ್ಮ ಜೆಸಿಐ ಸಂಸ್ಥೆಗೆ ನಿಜಕ್ಕೂ ಸಂತೋಷದಾಯಕವಾಗಿದೆ, ಮುಂದಿನ ದಿನಗಳಲ್ಲಿ ಈ ಸರ್ಕಾರಿ ಶಾಲೆಯ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಿಕ್ಷಕಿ ಗೀತಾ ಅವರ ಸಾಧನೆ ಅಪಾರವಾಗಿದೆ ಇದನ್ನು ಮನಗಂಡು ಇವರನ್ನು ಗೌರವಿಸಲು ಅವಕಾಶ ಸಿಕ್ಕಿರುವ ನಮ್ಮ ಜೆಸಿಐ ಸಂಸ್ಥೆಗೆ ನಿಜಕ್ಕೂ ಸಂತೋಷದಾಯಕವಾಗಿದೆ, ಮುಂದಿನ ದಿನಗಳಲ್ಲಿ ಇಂತಹ ಶಿಕ್ಷಕರು ಪ್ರತಿ ಶಾಲೆಗಳಲ್ಲಿಯೂ ಕಾರ್ಯ ನಿರ್ವಹಿತರಾಗಿ ಮಾದರಿಯಾಗಬೇಕಿದೆ ಎಂದು ತಿಳಿಸಿದರು.

ಜೆಸಿಐನ ಸಂಸ್ಥಾಪಕ ಅಧ್ಯಕ್ಷರಾದ ಅನಿಲ್ ಆನಂದ್ ಅವರು ಮಾತನಾಡಿ ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು ಆಗಿರುವಾಗ ಮಹಿಳೆಯರ ಬಗೆಗಿನ ಸಾಮಾಜಿಕ ಸಮ ಗೌರವದ ಕಾಳಜಿ ಮತ್ತು ಮಹಿಳೆಯರ ಸಾಧನೆಗಳ ಬಗೆಗಿನ ಅರಿವು ಬಹು ಮುಖ್ಯವಾಗಿದ್ದು ಸಾಧನೆಗೈದ ಮಹಿಳೆಯರನ್ನು ನೆನೆದು ಅವರನ್ನು ಆದರ್ಶವಾಗಿ ಇಟ್ಟುಕೊಳ್ಳುವುದು ಇಂದಿನ ಪೀಳಿಗೆಯ ಮಕ್ಕಳ ಬಹುದೊಡ್ಡ ಕರ್ತವ್ಯವಾಗಿದ್ದು ಅಂತೆಯೇ ಸಾಧನೆಯ ಸಾಲಿನಲ್ಲಿ ಮುಂಚೂಣಿಯಲ್ಲಿರುವ ಮಹಿಳೆಯರ ಮತ್ತು ಹೆಣ್ಣು ಮಕ್ಕಳನ್ನು ಪ್ರೋತ್ಸಾಹಿಸುವ ಕಾರ್ಯ ಈಗಿನ ತಲೆಮಾರಿನಲ್ಲಿ ನಡೆಯಬೇಕಿದೆ ಮತ್ತು ಹೆಣ್ಣು ಮಕ್ಕಳನ್ನು ಇನ್ನಷ್ಟು ಸಮಾಜದ ಮುನ್ನಡೆಗೆ ತರಲು ವೇದಿಕೆಯನ್ನು ಸೃಷ್ಟಿಸುವ ಅಗತ್ಯವಿದ್ದು ಈ ಕಾರ್ಯಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕಿದೆ ಅಲ್ಲದೆ ಹೆಣ್ಣು ಮಕ್ಕಳ ಸಾಧನೆಯನ್ನು ಗೌರವಿಸಿ ಆಶೀರ್ವದಿಸುವ ಕಾರ್ಯ ಸಮಾಜದ ಪ್ರತಿಯೊಬ್ಬರು ಮಾಡಬೇಕಿದೆ ಎಂದು ಮನವಿ ಮಾಡಿದರು.

ಗೌರವ ಸ್ವೀಕರಿಸಿ ಮಾತನಾಡಿದ ಶಿಕ್ಷಕಿ ಗೀತಾ ಅವರು ನನ್ನ ಸಾಧನೆಯನ್ನು ಗುರುತಿಸಿ ರಾಜ್ಯಮಟ್ಟದ ಪ್ರಶಸ್ತಿ ಸರ್ಕಾರವು ನೀಡಿದ್ದು ಇನ್ನಿತರರಿಗೆ ಮಾದರಿಯಾಗಲಿ ಎಂದು ಜೆಸಿಐ ಸಂಸ್ಥೆ ನನ್ನನ್ನು ಗುರುತಿಸಿ ಗೌರವಿಸುವ ಕಾರ್ಯಕ್ಕೆ ಮುಂದಾಗಿರುವುದು ಅಪಾರ ಸಂತಸ ವ್ಯಕ್ತವಾಗಿದ್ದು ಮುಂದಿನ ದಿನಗಳಲ್ಲಿ ಪ್ರತಿಯೊಬ್ಬ ಮಹಿಳೆಯು ಸಹ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಹೆಚ್ಚಿನ ಸಾಧನೆಯನ್ನು ತೋರಲು ಇದು ದಾರಿ ದೀಪವಾಗಲಿದೆ ಎಂದು ಅಭಿಪ್ರಾಯಸಿದರು.

ಮಕ್ಕಳಿಗೆ ಸಿಹಿ ಹಂಚುವ ಮೂಲಕ ಮಕ್ಕಳ ದಿನಾಚರಣೆಯನ್ನು ಶಾಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜೆಸಿಐ ಸಂಸ್ಥೆಯ ಮುಖ್ಯಸ್ಥರಾದ ಶಬರಿ ತಿಲಕ್, ತಿಲಕ್, ಯೋಗಿತ್ ಹಾಗೂ ಪೂರ್ವಾಧ್ಯಕ್ಷರಾದ ಗಿರಿಧರ್ ರಾಜ್ ಅರಸ್ ಹಾಗೂ ರವಿ ಮತ್ತು ಶಾಲಾ ಶಿಕ್ಷಕರಾದ ಮಂಜಪ್ಪ ಸೇರಿದಂತೆ ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಯೋಗಿತ್ ನಿರೂಪಿಸಿದರು, ಗಿರಿಧರ್ ರಾಜ್ ಅರಸ್ ವಂದಿಸಿದರು.

# ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ



**ಸೊರಬ:** ತಾಲೂಕಿನ ಮಾವಲಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಅಣ್ಣಾಜಿಗೌಡ ಮಾವಲಿ ಹಾಗೂ ಉಪಾಧ್ಯಕ್ಷರಾಗಿ ಸುಮಾ ಮಲ್ಲಿಕಾರ್ಜುನಗೌಡ ಅವಿರೋಧವಾಗಿ ಆಯ್ಕೆಯಾದರು.

ನೂತನ ಅಧ್ಯಕ್ಷ ಅಣ್ಣಾಜಿಗೌಡ ಮಾವಲಿ ಮಾತನಾಡಿ, ಸಂಘದ ನಿರ್ದೇಶಕರ ಸಹಕಾರದಿಂದ ಅಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ. ಮುಂದಿನ ದಿನಗಳಲ್ಲಿ ಸಂಘದ ಅಭಿವೃದ್ಧಿಗೆ ಸರ್ವ ಸದಸ್ಯರ ಸಹಕಾರ ಮತ್ತು ಮಾರ್ಗದರ್ಶನದೊಂದಿಗೆ ಮುನ್ನೆಡೆಯಲಾಗುವುದು. ಪ್ರಸ್ತುತ ಸಂಘವು ಖಾಸಗಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸ್ವಂತ ಕಟ್ಟಡ ನಿರ್ಮಿಸುವ ಉದ್ದೇಶ ಹೊಂದಲಾಗಿದೆ. ಜೊತೆಗೆ ರೈತರಿಗೆ ಸಮರ್ಪಕವಾಗಿ ಬೀಜ ಗೊಬ್ಬರ ವಿತರಿಸುವ ಮೂಲಕ ಸರ್ಕಾರದಿಂದ ದೊರೆಯಬಹುದಾದ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದರು.

ಬಿಜೆಪಿ ತಾಲೂಕು ಅಧ್ಯಕ್ಷ ಪ್ರಕಾಶ್ ಅಗಸನಹಳ್ಳಿ ಮಾತನಾಡಿ, ರೈತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ನೂತನ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಕಾರ್ಯೋನ್ಮುಖರಾಗಬೇಕು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಸದುಪಯೋಗ ಪಡೆದು ರೈತರ ಅಭ್ಯುದಯಕ್ಕೆ ಸಹಕರಿಸುವಂತೆ ತಿಳಿಸಿದ ಅವರು, ಸಹಕಾರ ಮನೋಭಾವನೆಯಿಂದ ಮುನ್ನೆಡೆದಾಗ ಮಾತ್ರ ಸಹಕಾರ ಸಂಘಗಳು ಬೆಳವಣಿಗೆ ಹೊಂದಲು ಸಾಧ್ಯವಿದೆ ಎಂದರು.

ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಹಾಗೂ ದಿಶಾ ಸಮಿತಿ ಸದಸ್ಯ ದೇವೇಂದ್ರಪ್ಪ ಚನ್ನಾಪುರ ಮಾತನಾಡಿ, ತಾವು ಗ್ರಾಪಂ ಉಪಾಧ್ಯಕ್ಷರಾಗಿದ್ದ ಅವಧಿಯಲ್ಲಿ ಸಹಕಾರ ಸಂಘಕ್ಕೆ ನಿವೇಶನವನ್ನು ಕಾಯ್ದಿರಿಸಲಾಗಿದೆ. ಅದನ್ನು ಸಹಕಾರ ಸಂಘದ ಹೆಸರಿಗೆ ನೋಂದಣಿ ಸಹ ಮಾಡಿಸಲಾಗಿದೆ. ಸರ್ಕಾರದಿಂದ ಸಹಾಯ ಪಡೆಯುವ ಮೂಲಕ ಉತ್ತಮ ಕಟ್ಟಡ ನಿರ್ಮಾಣವಾಗಲಿ ಮತ್ತು ರೈತರಿಗೆ ಸೌಲಭ್ಯಗಳು ದೊರೆಯಲಿ ಎಂದು ಆಶಿಸಿದರು.

ಚುನಾವಣಾಧಿಕಾರಿಯಾಗಿ ಸಹಕಾರಿ ಅಭಿವೃದ್ಧಿ ಅಧಿಕಾರಿ ಟಿ.ವಿ. ಪ್ರಕಾಶ್ ಕಾರ್ಯನಿರ್ವಹಿಸಿದರು. ಸಹಕಾರಿ ಸಂಘದ ಸಿಇಒ ಕೆ.ಬಿ. ಸುನೀಲ್ ಕುಮಾರ್, ಸಹಾಯಕರಾಗಿ ಎನ್.ಟಿ. ರವಿಕುಮಾರ್ ಸಹಕರಿಸಿದರು.

ನಿರ್ದೇಶಕರಾದ ಸತೀಶ್ ಗೌಡ, ರಾಜಶೇಖರ ಗೌಡ ಯಲವಳ್ಳಿ, ಹಾಲಪ್ಪ, ಟಿ.ಎಂ. ವೀರಪ್ಪ ಗೌಡ ತಾವರೆಕೊಪ್ಪ, ಆಂಜನೇಯಪ್ಪ, ಮಹೇಶ ಯಲವಳ್ಳಿ, ಬಿಜೆಪಿ ಸಾಗರ ಪ್ರಭಾರಿ ವಿನಯ್ ಶೇರ್ವಿ, ಮುಖಂಡರಾದ ಸಂದೀಪಗೌಡ ಯಲವಳ್ಳಿ, ಪ್ರಮೋದ್ ಗೌಡ, ವಿನಯ ಮಾವಲಿ, ಬಂಗಾರಪ್ಪ ಮಾವಲಿ, ಲಿಂಗರಾಜ ಗೌಡ, ಶಿವು, ಪ್ರವೀಣ್ ತಾವರೆಕೊಪ್ಪ, ಕೇಶವ, ಕಿರಣ್, ಜಗದೀಶ್, ಮಂಜಪ್ಪ ತಾವರೆಕೊಪ್ಪ, ನಾಗಪ್ಪ, ಪುಟ್ಟಪ್ಪ, ಮಂಜಪ್ಪ ಯಲವಳ್ಳಿ, ಶಿವಕುಮಾರ್, ದೇವರಾಜ ಆರೇಕೊಪ್ಪ ಸೇರಿದಂತೆ ಇತರರಿದ್ದರು.

# ಚಂದ್ರಗುತ್ತಿಯ ಶ್ರೀ ರೇಣುಕಾಂಬ ದೇವಿ ಮಹಾರಥೋತ್ಸ

**ಸೊರಬ:** ತಾಲೂಕಿನ ಪುರಾಣ ಹಾಗೂ ಐತಿಹಾಸಿಕ ಪ್ರಸಿದ್ಧ ಚಂದ್ರಗುತ್ತಿಯ ಶ್ರೀ ರೇಣುಕಾಂಬ ದೇವಿ ಮಹಾರಥೋತ್ಸವದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಶ್ರೀ ದೇವಿಗೆ ಬೃಹತ್ ಹಾರವನ್ನು ಸಮರ್ಪಿಸಿ, ನಾಡಿನ ಜನತೆಯ ಸುಭೀಕ್ಷತೆಗೆ ಪ್ರಾರ್ಥಿಸಲಾಯಿತು. ಈ ಸಂದರ್ಭದಲ್ಲಿ ಡಿವೈಎಸ್‌ಪಿ ಇ. ಕೇಶವ್, ಸಿಪಿಐ

ಎಲ್. ರಾಜಶೇಖರ್, ಪಿಎಸ್‌ಐಗಳಾದ ಎಚ್.ಎನ್. ನಾಗರಾಜ್, ಚಂದನ್, ರಾಜುರೆಡ್ಡಿ, ಎಎಸ್‌ಐಗಳಾದ ಲಿಂಗರಾಜ್, ಶಿವಮೂರ್ತಿ, ಸಿಬ್ಬಂದಿ ನಾಗೇಶ್, ನಾಗರಾಜ್, ರಾಘವೇಂದ್ರ, ಲೋಕೇಶ್, ವಿನಯ್, ಪ್ರದೀಪ್, ಸಂದೀಪ್, ಮಂಜುನಾಥ ದೈವಜ್ಞ, ಉಷಾ, ಹೇಮಲತಾ ಸೇರಿದಂತೆ ಇಲಾಖಾ ಸಿಬ್ಬಂದಿ ಮತ್ತು ಸ್ಥಳೀಯ ಮುಖಂಡರು ಇದ್ದರು



# ಯೋಗ ಸಾಧಕಿಯರಿಂದ ಅಂತರಾಷ್ಟ್ರೀಯ ಮಹಿಳಾ ದಿನ ಆಚರಣೆ

**ಚಿತ್ರದುರ್ಗ:** ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ 2025 ಅಂಗವಾಗಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ವತಿಯಿಂದ ಶನಿವಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಯೋಗ ಸಂಸ್ಥೆಯ ಸಾಧಕಿಯರು ಕೇಕ್ ಕತ್ತರಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು ನಂತರ ಪರಸ್ಪರ ಸಿಹಿ ಹಂಚಿ ಮಹಿಳಾ ದಿನಾಚರಣೆಯ ಶುಭಾಶಯಗಳನ್ನು ಕೋರಿದರು. ಮಹಿಳಾ ಯೋಗ ಸಾಧಕಿಯರಾದ ಶ್ರೀಮತಿ ರೇಣುಕಾದೇವಿ ನಳಿನ ರೂಪ ಭಾಗ್ಯಲಕ್ಷ್ಮಿ



ಸುಕನ್ಯಾ ರಮಾ ಅನಿತಾ ಅರುಣ ಹೇಮಲತಾ ಹಾಗೂ ಇನ್ನೂ ಅನೇಕ ಯೋಗ ಆಸಕ್ತರು ಪಾಲ್ಗೊಂಡಿದ್ದರು.

# ಮಾರ್ಚ್ 18-21 ರವರೆಗೆ ಕರ್ನಾಟಕ ಉಪಲೋಕಾಯುಕ್ತ ನ್ಯಾ.ಕೆ.ಎನ್.ಫಣೀಂದ್ರರವರ ಜಿಲ್ಲಾ ಭೇಟಿ

**ಶಿವಮೊಗ್ಗ :** ಕರ್ನಾಟಕ ಉಪಲೋಕಾಯುಕ್ತ ನ್ಯಾ.ಕೆ.ಎನ್.ಫಣೀಂದ್ರ ಅವರು ಮಾ. 18 ರಿಂದ 21 ರವರೆಗೆ ಶಿವಮೊಗ್ಗ ನಗರಕ್ಕೆ ಭೇಟಿ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸುವರು ಅಲ್ಲದೇ ಇದೇ ಅವಧಿಯಲ್ಲಿ ವಿವಿಧ ಸಭೆ-ಸಮಾರಂಭ, ತರಬೇತಿ ಕಾರ್ಯಾಗಾರಗಳು, ಸಮಾಲೋಚನಾ ಸಭೆಗಳಲ್ಲಿ ಭಾಗವಹಿಸುವರು.

ಮಾ.18ರಂದು ಸಂಜೆ 7.40ಕ್ಕೆ ಶಿವಮೊಗ್ಗಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಮಾ.19ರಂದು ಬೆಳಿಗ್ಗೆ 10.00 ರಿಂದ ಸಂಜೆ 5.00 ರವರೆಗೆ ನಗರದ ಕುವೆಂಪು ರಂಗಮಂದಿರದಲ್ಲಿ

ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸುವರು. ಜಿಲ್ಲೆಯಲ್ಲಿ ಯಾವುದೇ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ/ನೌಕರರಿಂದ ಕಾನೂನು ರೀತ್ಯಾ ಆಗಬೇಕಾದ ಕೆಲಸದಲ್ಲಿ ವಿಳಂಬನೆಯಾಗಿದ್ದಲ್ಲಿ ಅಥವಾ ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆಕೊಡುವುದು ಅಥವಾ

ಇನ್ಯಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಅರ್ಜಿ ನಮೂನೆ 1 ಮತ್ತು 2 ರಲ್ಲಿ ಲಿಖಿತವಾಗಿ ದಾಖಲೆ, ಸಾಕ್ಷ್ಯಾಧಾರಗಳೊಂದಿಗೆ ಸಲ್ಲಿಸಬಹುದಾಗಿದೆ.

### ಗಣೇಶ್ ಶೆಣೈಯವರಿಗೆ ಕನ್ನಡ ರತ್ನ ರಾಜ್ಯ ಪ್ರಶಸ್ತಿ ಪ್ರಧಾನ

**ದಾವಣಗೆರೆ:** ಬೆಳಗಾವಿ ಜಿಲ್ಲೆಯ ಬ್ಯಾಕೂಡ ಗ್ರಾಮದ ಶ್ರೀ ಲಕ್ಕಮ್ಮದೇವಿ ಕಲಾ ಪೋಷಕರ ಸಂಘದ ಆಶ್ರಯದಲ್ಲಿ ಮಾರ್ಚ್ 16 ರಂದು ಧಾರವಾಡ ರಂಗಾಯಣ ಸಭಾಂಗಣದಲ್ಲಿ ನಡೆಯಲಿರುವ ಅಖಿಲ ಕರ್ನಾಟಕ ತೃತೀಯ ಬಯಲಾಟ ಉತವ ಕಾರ್ಯಕ್ರಮದಲ್ಲಿ ಕನ್ನಡ ನಾಡು, ನುಡಿ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಕಳೆದ ದಶಕಗಳಿಂದ ಸಾಧನೆ ಮಾಡಿದ ದಾವಣಗೆರೆಯ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಕನ್ನಡ ರತ ರಾಜ್ಯ ಪ್ರಶಸ್ತಿ ವಿತರಿಸಿ ಗೌರಸಲಾಗುವುದು ಎಂದು ಸಂಘಟನೆಯ ಅಧ್ಯಕ್ಷರಾದ ಸಿದ್ರಾಮ ಎಂ.ನಿಲಜಗಿ ತಿಳಿಸಿದ್ದಾರೆ.


**ಮಾನ್ಯ ಭೂ ದಾಖಲೆಗಳ ಉಪನಿರ್ದೇಶಕರ ನ್ಯಾಯಾಲಯ ದಾವಣಗೆರೆ**

**ಭೂ.ಉ.ನಿ.ಆರ್ ಸಂಖ್ಯೆ: 543 /2024-25**

**ಅಪೀಲುದಾರರು:** 1) ಜಯಲಕ್ಷ್ಮೀ ಬಿನ್ ಲೇಟ್ ಶಿವಾಜಪ್ಪ ವಯಸ್ಕರು ವಾಸ: ಗ್ಯಾರಹಳ್ಳಿ ಹೊಳಲ್ಕೆರೆ ತಾಲ್ಲೂಕು

**-ವಿರುದ್ಧ-**

**ಎದುರುದಾರರು:** ಭೂ ದಾಖಲೆಗಳ ಸಹಾಯಕ ನಿರ್ದೇಶಕರು ದಾವಣಗೆದೆ ತಾಲೂಕು ಮತ್ತು ಇತರರು

ಎದುರುದಾರರ ನಂ 3ಬಿ) ಆಶಾ ಬಿನ್ ಲೇಟ್ ನಾಗರಾಜಪ್ಪ ವಯಸ್ಕರರು
ಎದುರುದಾರರ ನಂ 3ಡಿ) ಅನಿತಾ ಬಿನ್ ಲೇಟ್ ನಾಗರಾಜಪ್ಪ ವಯಸ್ಕರರು
ಎದುರುದಾರರ ನಂ 3ಎಫ್) ಸುನಿತಾ ಬಿನ್ ಲೇಟ್ ನಾಗರಾಜಪ್ಪ ಬಿನ್ ಹಳದಪ್ಪ ವಯಸ್ಕರರು

**ಸಿ.ಪಿ.ಸಿ ಆದೇಶ 5.ನಿಯಮ20ರ ಅಡಿಯಲ್ಲಿ ನೀಡಲಾದ ಪ್ರಕಟಣಾ ನೋಟೀಸ್.**

ಮೇಲ್ಕಂಡ ಅಪೀಲುದಾರರು ಘನ ನ್ಯಾಯಾಲಯದಲ್ಲಿ ಪೋಡುಗಳನ್ನು ರದ್ದುಪಡಿಸಿ ಹೊಸ ಪೋಡುಗಳನ್ನು ಮಾಡಿಕೊಡುವಂತೆ ಸದರಿ ಮೇಲ್ಕಂಡ ಪ್ರಕರಣವನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ 3(ಬಿ), 3(ಡಿ) ಮತ್ತು 3(ಎಫ್) ನೇ ಎದುರುದಾರರು ನಿಮ್ಮ ತಕರಾರು ಏನಾದರೂ ಇದ್ದಲ್ಲಿ, ಕಾರಣ ಹಾಜರಾತಿಗಾಗಿ ದಿನಾಂಕ: 20-3-2025 ರಂದು ಮಧ್ಯಾಹ್ನ 3.00 ಘಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು ತಕರಾರು ಇದ್ದಲ್ಲಿ ಸಲ್ಲಿಸಬಹುದು. ತಪ್ಪಿದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷೀಯ ತೀರ್ಮಾನ ತೆಗೆದುಕೊಳ್ಳಲಾಗುವುದು.

**ಷೆಡ್ಯೂಲ್:**

ದಾವಣಗೆರೆ ಜಿಲ್ಲೆ,ದಾವಣಗೆರೆ ತಾ. ಆನಗೋಡು ಹೋಬಳಿ,ಪಾಮೇನಹಳ್ಳಿ ಗ್ರಾಮದ ರೀ ಸ ನಂ 53/10, 11 ಮತ್ತು 12 ರಲ್ಲಿನ ಪೋಡುಗಳನ್ನು ರದ್ದುಪಡಿಸುವ ಕುರಿತಂತೆ ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ ದಿನಾಂಕ: 06/03/2025. ರಂದು ಕೊಡಲ್ಪಟ್ಟಿದೆ

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಶಿರಸ್ತೇದಾರರು/ಸೂಪರಿಡೆಂಟ್
ಡಿ.ಡಿ.ಎಲ್.ಆರ್ ನ್ಯಾಯಾಲಯ
ಭೂದಾಖಲೆಗಳ ಉಪ ನಿರ್ದೇಶಕರು
ದಾವಣಗೆರೆ ಜಿಲ್ಲೆ ದಾವಣಗೆರೆ

# ಒಳ ಮೀಸಲಾತಿ ಜಾರಿ ಬಳಿಕ ಬ್ಯಾಕ್ ಲಾಗ್ ಹುದ್ದೆ ಭರ್ತಿ ಮಾಡಿ

**ಚಿಕ್ಕಮಗಳೂರು:** ಒಳ ಮೀಸಲಾತಿ ಜಾರಿ ಮಾಡಿದ ಬಳಿಕವೇ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಬೇಕು. ಇಲ್ಲದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ರೂಪಿಸಲಾಗುವುದು ಎಂದು ಮಾದಿಗ ಸಮಾಜದ ರಾಜಕಾರ್ಯದರ್ಶಿ ಚಂದ್ರಶೇಖರ್ ತಿಳಿಸಿದರು.ನಗರದ ಪ್ರೆಸ್ ಕ್ಲಬ್ ನಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜ ಕಲ್ಯಾಣ ಸಚಿವರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್ ಲಾಕ್ ಹುದ್ದೆಗಳನ್ನು ತರಾತುರಿಯಲ್ಲಿ ಭರ್ತಿ ಮಾಡಲು ಹೊರಟಿರುವ ಕ್ರಮ ಮಾದಿಗ ಸಮಾಜಕ್ಕೆ ಅನ್ಯಾಯ ಮಾಡುವಂತಿದೆ ಎಂದು ದೂರಿದರು.ಸದಾಶಿವ ಆಯೋಗದ ವರದಿ ಜಾರಿ ಮಾಡಿ ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಒಳ ಮೀಸಲಾತಿ ಕಲ್ಪಿಸಲು ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗ ರಚನೆ ಮಾಡಲಾಗಿದೆ. ಆದರೆ ಈ ಆಯೋಗ ಸರ್ಕಾರ-ಕ್ಕೆ ವರದಿ ಸಲ್ಲಿಕೆ ಮಾಡುವ ಮೊದಲೇ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಮುಂದಾಗಿರುವುದು ಸರಿಯಲ್ಲ. ಸರ್ಕಾರ ಕೂಡಲೇ ಈ ಕ್ರಮ ಕೈಬಿಡಬೇಕು ಇಲ್ಲದಿದ್ದಲ್ಲಿ ರಾಜ್ಯಾದ್ಯಂತ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.ರಾಜ್ಯ ಸರ್ಕಾರದ ಈ ಕ್ರಮ ಖಂಡಿಸಿ ಮಾ. 19ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ನಡೆಸಲಾಗುವುದು. ಇದಲ್ಲದೆ ಮಾ. 5ರಿಂದ ಬಿ.ಕೃಷ್ಣಪ್ಪ ಅವರ ಸಮಾಧಿ ಸ್ಥಳ ಹರಿಹರದಿಂದ ಬೆಂಗಳೂರುವರೆಗೆ ಪಾದಯಾತ್ರೆ ನಡೆಸಲಾಗುವುದು. ಈ ಹಿಂದೆ ಚಿತ್ರದುರ್ಗದಲ್ಲಿ ನಡೆದ ಎಸ್ ಸಿ ಸಮಾವೇಶದಲ್ಲಿ ಒಳ ಮೀಸಲಾತಿ ಜಾರಿ ಮಾಡುವುದಾಗಿ ಗೃಹ ಸಚಿವ ಜಿ.ಪರಮೇಶ್ವರ್ ಹೇಳಿಕೆ ನೀಡಿದ್ದರು. ಕೂಡಲೇ ಸರ್ಕಾರ ತಾನು ಹೇಳಿದಂತೆ ನಡೆದುಕೊಳ್ಳಬೇಕು ಎಂದು ಆಗ್ರಹಿಸಿದರು.ಸುದ್ದಿಗೋಷ್ಠಿಯಲ್ಲಿ ಚಿಕ್ಕಮಗಳೂರು ಜಿಲ್ಲಾ ಮಾದಿಗ ಸಮಾಜದ ಅಧ್ಯಕ್ಷ ರಮೇಶ್, ಪ್ರಮುಖರಾದ ಜಗದೀಶ್, ನಾಗೇಂದ್ರಪ್ಪ, ಲಕ್ಷ್ಮಣ್, ತಂಗಲಿ ರಾಘವೇಂದ್ರ ಮತ್ತಿತರರಿದ್ದರು.

# ಕಡು ಬಡವರಿಗೆ ಮಾತ್ರ ಗ್ಯಾರಂಟಿ ಯೋಜನೆ ನೀಡಲು ಪರಿಶೀಲನೆ

**ಬೆಂಗಳೂರು, ಫೆ.25:** ವಿಧಾನಸಭೆ ಚುನಾವಣೆಯ ಸಮಯದಲ್ಲಿ ಕಾಂಗ್ರೆಸ್ ಪಕ್ಷ ನೀಡಿದ ಭರವಸೆಯಂತೆ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿಗಳ ಪುನರ್ ಪರಿಶೀಲನೆಗೆ ಚಿಂತನೆ ನಡೆಸಿದೆ.

ಗೃಹ ಜ್ಯೋತಿ ಗೃಹಲಕ್ಷ್ಮಿ ಅನ್ನಭಾಗ್ಯ ಸೇರಿದಂತೆ ಪಂಚ ಗ್ಯಾರಂಟಿಗಳನ್ನು ಅಗತ್ಯವಿರುವ ಅದರಲ್ಲೂ ಬಿಪಿಎಲ್ ಕುಟುಂಬದವರಿಗೆ ಮಾತ್ರ ನೀಡುವ ಕುರಿತಂತೆ ಚರ್ಚೆ ನಡೆಸಿದ್ದು, ಮುಂಬರುವ ಬಜೆಟ್ ನಲ್ಲಿ ಈ ಬಗ್ಗೆ ಸ್ಪಷ್ಟ ನಿರ್ಧಾರ ಹೊರಬೀಳಲಿದೆ ಎನ್ನಲಾಗುತ್ತಿದೆ

ಈ ಕುರಿತಂತೆ ಸುಳಿವು ನೀಡಿರುವ ಗೃಹಮಂತ್ರಿ ಡಾ. ಜಿ. ಪರಮೇಶ್ವರ್ ರಾಜ್ಯದಲ್ಲಿ ಸ್ವಯಂಪ್ರೇರಿತವಾಗಿ ಅನೇಕ ಜನ ಗ್ಯಾರಂಟಿ ಯೋಜನೆಗಳನ್ನು ಬಿಡುತ್ತಿದ್ದಾರೆ. ಆದಾಯ ತೆರಿಗೆ ಪಾವತಿಸುವವರು, ಸರ್ಕಾರಿ ನೌಕರರು ಸೇರಿದಂತೆ ಬಹಳಷ್ಟು ಜನ ಬಿಟ್ಟಿದ್ದಾರೆ ಎಂದು ತಿಳಿಸಿದರು

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಅಗತ್ಯತೆ-ಯ ಬಗ್ಗೆ ಚರ್ಚೆ ಮಾಡಬೇಕು. ನಂತರ ಏನೆಂಬುದು ಗೊತ್ತಾಗಲಿದೆ.

# ಕಾನೂನುಗಳಿದ್ದರೂ ಮಕ್ಕಳು, ಮಹಿಳೆಯರ ಮೇಲೆ ದೌರ್ಜನ್ಯ

(1ನೇ ಪುಟದಿಂದ)

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣನವರ ಮಾತನಾಡಿ, ಭಾರತದ ಇತಿಹಾಸವನ್ನು ಗಮನಿಸಿದಾಗ ಅನೇಕ ಯುದ್ಧಗಳು ಅನೇಕ ರಾಜ ಮನೆತನಗಳ ನಡುವೆ ಹೋರಾಟಗಳು ಮಹಿಳೆಯರ ಕಾರಣದಿಂದಲೇ ನಡೆದಿರುವುದು ದುರಾದೃಷ್ಟಕರ ಸಂಗತಿ, ಮಹಿಳೆಯರ ಮೇಲಿನ ದೌರ್ಜನ್ಯಗಳಿಗೆ ಮಹಿಳೆಯರೇ ಕಾರಣ ಆಗುತ್ತಿರುವುದನ್ನು ನಾವು ಕಾಣುತ್ತಿದ್ದೇವೆ. ಮಹಿಳಾ ದಿನಾಚರಣೆಗಳು ಸಕಾರಾತ್ಮಕ ಚಿಂತನೆ ಅಡಿಯಲ್ಲಿ ಆಚರಣೆ ಆಗಬೇಕಾಗಿದೆ ಎಂದು ಹೇಳಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್. ಅರುಣಕುಮಾರ್ ಮಾತನಾಡಿ, ಸ್ತ್ರೀ ಸಮಾನತೆಗಾಗಿ ಮತ್ತು ಅವರ ಮೇಲೆ ದೌರ್ಜನ್ಯಗಳನ್ನು ತಡೆಯಲು ಮತ್ತು ಹಿಂದಿನ ಕಾಲದಲ್ಲಿದ್ದ ಮಹಿಳೆಯರ ವಿರುದ್ಧದ ಅನೇಕ ಅನಿಷ್ಠ ಪದ್ಧತಿಗಳನ್ನು ತಡೆಗಟ್ಟಲು ಅನೇಕ ಮಹನೀಯರು ಹೋರಾಟ ಮಾಡಿದ ಫಲವಾಗಿ ಇಂದು ಸ್ತ್ರೀಯರು ಸಮಾನತೆ ಪಡೆಯಲು ಸಾಧ್ಯವಾಗಿದೆ. ದೇಶಕ್ಕೆ ಸ್ವಾತಂತ್ರ್ಯ ಬಂದ ಮೇಲೆ ಸಂವಿಧಾನ ಜಾರಿಗೊಂಡ ಮೇಲೆ ಮಹಿಳೆಯರು ತಮ್ಮ ಹಕ್ಕುಗಳನ್ನು ಪಡೆದುಕೊಂಡು ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆ ಮೆರೆದಿದ್ದಾರೆ. ಅಲ್ಲದೇ ಮಹಿಳಾ ದಿನಾಚರಣೆ ಕೇವಲ ಭಾಷಣಕ್ಕೆ ಸೀಮಿತವಾಗದೇ ಆರ್.ಎಲ್.ಕಾನೂನು ಕಾಲೇಜು ಸ್ತ್ರೀ ಸಮಾನತೆಗೆ ದುಡಿದವರನ್ನು ಗೌರವಿಸುತ್ತಿರುವುದು ಅತ್ಯಂತ ಶ್ಲಾಘನೀಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಡಾ.ಜಿ.ಎಸ್.ಯತೀಶ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಜೆ.ಜೆ.ಎಂ. ಮೆಡಿಕಲ್ ಕಾಲೇಜು ಪ್ರಾಂಶುಪಾಲೆ ಡಾ.ಶುಕ್ಲಶೆಟ್ಟಿ, ಸಂಚಾರಿ ಪೊಲೀಸ್ ಅಧಿಕಾರಿ ಶೈಲಜಾ, ನಿವೃತ್ತ ಪ್ರಾಧ್ಯಾಪಕಿ ಡಾ.ಅನುರಾಧ ಬಕ್ಕಪ್ಪ ವೇದಿಕೆಯಲ್ಲಿದ್ದರು.



# ನಾಡಪ್ರಭು ಕೆಂಪೇಗೌಡ ಬಡಾವಣೆ: ದಶರಥ ರಸ್ತೆ ನಿರ್ಮಾಣದ ತೊಡಕು ನಿವಾರಣೆ

**ಬೆಂಗಳೂರು:** ನಾಡಪ್ರಭು ಕೆಂಪೇಗೌಡ ಬಡಾವಣೆಯಮೂಲಕ ಹಾದುಹೋಗುವ ದಶ ಪಥ ಎಕ್ಸ್ ಪ್ರೆಸ್ ರಸ್ತೆ ನಿರ್ಮಾಣ ಕಾಮಗಾರಿ ನನೆಗುದಿಗೆ ಬಿದ್ದು ದಶಕದ ನಂತರ ಮತ್ತೆ ಜೀವ ಪಡೆದಿದೆ. 200 ಶೆಡ್ಗಳನ್ನು ತೆರವುಗೊಳಿಸುವಮೂಲಕ ಸಂಪರ್ಕ ಕಲ್ಪಿಸಲು ಇದ್ದ ತೊಡಕನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ನಿವಾರಿಸಿದೆ.

ನೈಸ್ ರಸ್ತೆಗೆ ಸಮಾನಾಂತರವಾಗಿ ಈ ರಸ್ತೆಯನ್ನು ನಿರ್ಮಿಸಲಾಗುತ್ತಿದೆ. ಆದರೆ, ಶೆಡ್ ಮತ್ತು ಇತರ ಕಟ್ಟಡಗಳು ಇದ್ದಿದ್ದರಿಂದ ಮಧ್ಯದಲ್ಲಿ ಒಂದು ಕಿ.ಮೀ. ಸಂಪರ್ಕ ಇಲ್ಲದಂತಾಗಿತ್ತು. ತಡೆ ನಿವಾರಣೆಯಾಗಿರುವುದರಿಂ ದ 10.5 ಕಿ.ಮೀ. ಉದ್ದದ ಟೋಲ್ ರಹಿತ ಎಕ್ಸ್ ಪ್ರೆಸ್ ಹೈವೆ ನಿರ್ಮಾಣಗೊಳ್ಳಲಿದೆ. ಚಲ್ಲಘಟ್ಟದ ಬಳಿ 250 ಮೀಟರ್ ಉದ್ದದ ಸುರಂಗ ರಸ್ತೆ ನಿರ್ಮಾಣಗೊಳ್ಳಲಿದೆ. ಜೊತೆಗೆ ರೈಲ್ವೆ ಕೆಳಸೇತುವೆ ಕೂಡ ಇರಲಿದೆ.

ನಾಡಪ್ರಭು ಕೆಂಪೇಗೌಡ ಬಡಾವಣೆಯ ಎಲ್ಲ ಒಂಬತ್ತು ಬ್ಲಾಕ್ಗಳನ್ನು ಸಂಪರ್ಕಿಸುವ ಈ ರಸ್ತೆಯು ಕಾರ್ಯಾರಂಭಗೊಂಡರೆ ಬಡಾವಣೆಯಲ್ಲಿ ನಿವೇಶನ ಹೊಂದಿರುವವರು ಮನೆಗಳ ನಿರ್ಮಾಣ ಮಾಡಲು ಉತ್ತೇಜನ ದೊರೆಯಲಿದೆ.

ಬಡಾವಣೆಯಲ್ಲಿ ಒಂದು ಕಿಲೋ ಮೀಟರ್ಹೊರತುಪಡಿಸಿ ಉಳಿದ ಭಾಗಗಳಲ್ಲಿ ಶೇ80ರಷ್ಟು ಕಾಮಗಾರಿ ನಡೆದಿತ್ತು. ಪ್ರಮುಖ ಪ್ರದೇಶಗಳಾದ ಮಾಚೋಹಳ್ಳಿ, ಸೂಲಿಕೆರೆ, ಕನ್ನಹಳ್ಳಿ ಮತ್ತು ಚಲ್ಲಘಟ್ಟದಲ್ಲಿ ಭೂಸ್ವಾಧೀನ ಸಮಸ್ಯೆಯಿಂದಾಗಿಯೋಜನೆಯು ಹಿನ್ನಡೆಯನ್ನು ಅನುಭವಿಸಿತ್ತು.

'ಹತ್ತು ಪಥದ ಎಕ್ಸ್ ಪ್ರೆಸ್ವೇಯಿಂದ ಮಾಗಡಿ ರಸ್ತೆಗೆ ಸಂಪರ್ಕಿಸುವ ಮಾರ್ಗದ ಕಾಮಗಾರಿ ಮುಂದಿನ ಎರಡು ತಿಂಗಳಲ್ಲಿ ಪೂರ್ಣ ಗೊಳ್ಳುವ ನಿರೀ ಕ್ಷೆಯಿದೆ. ಹೈಕೋರ್ಟ್ ನಮ್ಮ ಪರವಾಗಿ ತೀರ್ಪು ನೀಡಿದ ನಂತರ, ನಾವು ಕೇವಲ ನಾಲ್ಕು ದಿನಗಳಲ್ಲಿ ಸುಮಾರು 200 ಕಟ್ಟಡಗಳನ್ನು ತೆರವುಗೊಳಿಸಿದ್ದೇವೆ. ಆದರೆ, ಅದಕ್ಕಿಂತ ಮೊದಲು ಕಾನೂನುಹೋ ರಾಟದಲ್ಲಿ ಎರಡು ವರ್ಷಗಳು ಕಳೆದುಹೋದವು' ಎಂದು ಬಿಡಿಎ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದರು.

ಬಿಡಿಎ ಇತ್ತೀಚೆಗೆ ಕನ್ನಹಳ್ಳಿ ಬಳಿ ಸುಮಾರು 1 ಎಕರೆ ಜಾಗವನ್ನು ಸ್ವಾಧೀನ ಪಡಿಸಿಕೊಂಡಿತ್ತು. ಆದರೂ ಸಮಸ್ಯೆಗಳು ಇನ್ನೂ ಪೂರ್ಣ ದೂರವಾಗಿಲ್ಲ. ಸೂಲಿಕೆರೆಯಲ್ಲಿ ಸುಮಾರು 4 ಎಕರೆ ಅರಣ್ಯ ಜಮೀನು ಪ್ರಾಧಿಕಾರಕ್ಕೆ ಹಸ್ತಾಂತರವಾಗಬೇಕಿದೆ. 585 ಕೋಟಿ ವೆಚ್ಚದ ಈಯೋಜನೆ ಪೂರ್ಣಗೊಳ್ಳಬೇಕಿದ್ದರೆ ಜಮೀನು ಹಸ್ತಾಂತರವಾಗಬೇಕು. ಅರಣ್ಯ ಇಲಾಖೆಯಿಂದ ತಡವಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಅವರ ಗಮನಕ್ಕೆ ತಂದಿದ್ದರು. ಶೀಘ್ರದಲ್ಲಿಯೇ ಅರಣ್ಯ ಜಮೀನು ಹಸ್ತಾಂತರಿಸಲಾಗುವುದು ಎಂದು ಅರಣ್ಯ ಸಚಿವರು ಇತ್ತೀಚೆಗೆ ನಡೆದ ಸಭೆಯಲ್ಲಿ ಭರವಸೆ ನೀಡಿದ್ದರು.

'ಜಮೀನು ಹಸ್ತಾಂತರದ ನಿರೀಕ್ಷೆಯಲ್ಲಿದ್ದೇವೆ' ಎಂದು ಬಿಡಿಎ ಎಂಜಿನಿಯರ್ ತಿಳಿಸಿದ್ದಾರೆ.

ಪರಿಹಾರ ನೀಡದೇ ಮನೆ ನೆಲಸಮ!

ಚಲ್ಲಘಟ್ಟದಲ್ಲಿ ರೈಲ್ವೆ ಕೆಳಸೇತುವೆ ಕಾಮಗಾರಿಯನ್ನು ಬಿಡಿಎ ಕೈಗೆತ್ತಿಕೊಂಡಿತ್ತು. ಯಾವುದೇ ಪರಿಹಾರ ಪರ್ಯಾಯ ಜಮೀನು ನೀಡದೇ ಮೂರು ಮನೆಗಳನ್ನು ನೆಲಸಮ ಮಾಡಿತ್ತು. ಇದರಿಂದ ಸ್ಥಳೀಯರು ಆತಂಕಕ್ಕೆ ಒಳಗಾಗಿದ್ದರು. ಯಶವಂತಪುರ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಟಿ.ಸೋಮಶೇಖರ್ ಭಾನುವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಕಟ್ಟಡಗಳನ್ನು ನೆಲಸಮಗೊಳಿಸುವ ಮೊದಲು ಅವರಿಗೆ ಪರ್ಯಾಯ ಜಾಗ ತೋರಿಸಬೇಕು ಎಂದು ಅವರು ಭೂಸ್ವಾಧೀನ ಅಧಿಕಾರಿಗಳಿಗೆ ಸೂಚಿಸಿದರು. ರೈಲ್ವೆ ಕೆಳಸೇತುವೆಗೆ ನಮ್ಮ ಮೆಟ್ರೊ ಸುರಂಗ ರಸ್ತೆ ಸಂಪರ್ಕವನ್ನು ಕಲ್ಪಿಸುತ್ತಿದೆ. ಸೇತುವೆ ಕಾಮಗಾರಿ ಪೂರ್ಣಗೊಳ್ಳಲು ಸುಮಾರುಮೂರು ತಿಂಗಳು ಬೇಕಾಗಬಹುದು. ಅದೇ ಸಮಯದಲ್ಲಿ ಮೆಟ್ರೊ ಸುರಂಗಮಾರ್ಗವೂ ಪೂರ್ಣಗೊಳ್ಳಬೇಕು. ಆನಂತರ ಮೈಸೂರು ಕಡೆಗೆ ಇದು ಬೈಪಾಸ್ ಆಗಿ ಕಾರ್ಯನಿರ್ವಹಿಸಲಿದೆ ಎಂದು ಎಂಜಿನಿಯರ್ ಮಾಹಿತಿ ನೀಡಿದರು.

# ಶಿಲ್ಪಕಲೆಗಳ ಕೆತ್ತನೆಯಲ್ಲಿ ವಿಶ್ವಕರ್ಮ ಕೊಡುಗೆ ಅಪಾರ



**ಚಿಕ್ಕಮಗಳೂರು:** ಪರಮಾತ್ಮನ ವಿಗ್ರಹ ಹಾಗೂ ಶಿಲ್ಪಕಲೆಗಳ ಕೆತ್ತನೆಯಲ್ಲಿ ವಿಶ್ವಕರ್ಮ ರ ಕೊಡುಗೆ ಅಪಾರ. ಬಂಡೆ ಹಾಗೂ ಮರಗಳಿಂದ ಆರಾಧಿಸುವ ದೈವ ಮೂರ್ತಿಗಳನ್ನು ಕೆತ್ತಲಟ್ಟಿರುವ ಹಿ ನ್ನೆಲೆಯಲ್ಲಿ ವಿಶ್ವಕರ್ಮರಿಗೆ ರಾಷ್ಟ್ರದಲ್ಲಿ ವಿಶೇಷ ಗೌರವವಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಶ್ರೀಲೇಖಾ ಟಾಕೀಸ್ ಸಮೀಪದ ವಿಶ್ವಕರ್ಮ ಸಮುದಾಯ ಭವನದಲ್ಲಿ ಜಿಲ್ಲಾ ವಿಶ್ವಬ್ರಾಹ್ಮಣ ಸಮಾಜ ಸೇವಾಸಭಾದಿಂದ ಹಮ್ಮಿಕೊಂಡಿದ್ಧ ಶ್ರೀ ವೈಶ್ಯಕರ್ಮಣ ಮಹಾಯಜ್ಞ, ಸಾಮೂಹಿಕ ಉಪನಯನ ಮತ್ತು ಸಂಘದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯ ಬಂಡೆಯನ್ನು ನೂರಾರು ಹುಳಿಏಟಿನಿಂದ ಕೆತ್ತಿ ಸುಂದರ ರೂಪಕೊಟ್ಟು ದೈವಜ್ಞಾನ ತುಂಬು ವ ಕೈಚಳಕ ವಿಶ್ವಕರ್ಮರಲ್ಲಿದೆ. ಆ ಕೆತ್ತಲ್ಪಟ್ಟಿರುವ ನೂರಾರು ಮೂರ್ತಿಗಳನ್ನು ಮಠ-ಮಂದಿರ, ಮನೆಗಳಲ್ಲಿ ಪ್ರತಿಷ್ಠಾಪಿಸಿ ಕೈಮುಗಿಯುವ ಸಂಸ್ಕೃತಿಗೆ ಪ್ರೇರಿತರು. ಹೀಗಾಗಿ ದೈವದ ಸೇವೆಯಲ್ಲಿ ವಿಶ್ವಕರ್ಮರ ಕೊಡುಗೆ ಶ್ಲಾಘನೀಯ ಎಂದರು.

ಅಮರಶಿಲ್ಪಿ ಜಕಣಾಚಾರಿಯ ಬೇಲೂರು ಹಳೇಬೀಡು ಕೆತ್ತನೆ ನೋಡಲು ಎರಡು ಕಣ್ಣುಗಳು ಸಾಲದು. ಈ ವಿಶಿಷ್ಟ ಶಿಲ್ಪಕಲೆ ಸವಿಯಲು ಪ್ರಪಂಚದ ವಿವಿಧ ಮೂಲೆಗಳಿಂದ ಭೇಟಿ ನೀಡುತ್ತಾರೆ. ಅದರಂತೆ ವಿಜಯ ನಗರ ಸಾಮ್ರಾಜ್ಯ, ಪುರಾತನ ದೇವಾಲಯಗಳಲ್ಲಿ ಯಾವುದೇ ತಾಂತ್ರಿಕತೆ ಇಲ್ಲದ ವೇಳೆಯಲ್ಲಿ ಕೇವಲ ಮೆ ದುಳಿನ ಶಕ್ತಿಯಿಂದಲೇ ಭವ್ಯ ರೂಪು ನೀಡಿ-ದ್ದಾರೆ ಎಂದರು. ಪ್ರಸ್ತುತ ಶ್ರೀಲೇಖಾ ಟಾಕೀಸ್ ಸಮೀಪ ಸಂಘದ ಕಟ್ಟಡವು ಅರ್ಧಬರ್ಧ ಸ್ಥಿತಿಯಲ್ಲಿದೆ. ಈ ಭವನದ ಅಭಿವೃದ್ಧಿಗೆ ನಗರಸಭಾದ ಆಡಳಿತದಲ್ಲಿ ಅನುದಾನವು ಕಾಯ್ದಿರಿಸಿದ್ದು, ಸದ್ಯದಲ್ಲೇ ಅನುದಾನ ಬಿಡುಗಡೆ ಗೊಳಿಸಿ, ಮುಂದಿನ ವಾರ್ಷಿಕೋತ್ಸವ ಕಾರ್ಯಕ್ರಮದ ವೇಳೆಗೆ ಕಟ್ಟಡದ ಸಂಪೂರ್ಣ ಕಾಮಗಾರಿ ಪೂರೈಸಿ ಸಮಾಜಕ್ಕೆ ಅರ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಚನ್ನಗಿರಿಯ ಸಾವಿತ್ರಿ ಪೀಠದ ಶ್ರೀ ಶಂಕರಾತ್ಮನಂದ ಸರಸ್ವತಿ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಎಳೆವಯಸ್ಸಿನಿಂದಲೇ ಮಕ್ಕಳಿಗೆ ಸನಾತನ ಸಂಸ್ಕೃತಿಯನ್ನು ಪಾಲಕರು ಬಿತ್ತಿದರೆ, ಭವಿಷ್ಯದಲ್ಲಿ ಹಿಂದೂ ಪರಂಪರೆ, ಸನಾತನ ಧರ್ಮವನ್ನು ಉಳಿಸಿ ಬೆಳೆಸಲು ಸಾಧ್ಯ ಎಂದು ಕರೆ ನೀಡಿ-ದರು.

ವಿಶ್ವಕರ್ಮ ಸಮುದಾಯದಲ್ಲಿ ಹಲವಾರು ಉಪಜಾತಿಗಳಿವೆ. ಎಲ್ಲವೂ ಕೂಡಾ ವಿಶ್ವಕರ್ಮ ಜನಾಂಗದ ಭಾಗವಾಗಿದೆ ಎಂದ ಅವರು ಈ ವೈಶ್ವಕರ್ಮಣ ಯಜ್ಞವು ಲೋಕಕಲ್ಯಾಣಾರ್ಥ ಹಾಗೂ ಜನತೆಯಲ್ಲಿ ಸಾ ಮರಸ್ಯ ಮೂಡಿಸುವ ನಿಟ್ಟಿನಲ್ಲಿ ಜರುಗಿಸಲಾಗಿದೆ ಎಂದು ತಿಳಿಸಿದರು.

ಜಿ.ಪಂ. ಮಾಜಿ ಅಧ್ಯಕ್ಷ ಎ.ಎನ್.ಮಹೇಶ್ ಮಾತನಾಡಿ ಸಣ್ಣ ಸಮಾಜಗಳಲ್ಲಿ ಕಾಳೆಯುವ ಸಂಸ್ಕೃತಿ ಯಿದೆ. ಹೀಗಾಗಿ ಸಮಾಜವನ್ನು ಮುನ್ನೆಲೆಗೆ ತರುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಮುನ್ನೆಡೆದರೆ ಆರ್ಥಿಕ ಮತ್ತುವ ಸದೃಢವಾಗಿ ಸಮಾಜವು ಬೆಳವಣಿಗೆ ಹೊಂದಲು ಸಾಧ್ಯವಾಗಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ವಿಶ್ವಬ್ರಾಹ್ಮಣ ಸಮಾಜ ಸೇವಾ ಸಭಾದ ಅಧ್ಯಕ್ಷ ಹೆಚ್.ಆರ್. ಉಮಾಶಂಕರ್ ವಿಶ್ವಕರ್ಮ ಸಮಾಜ ಸ್ಥಾಪನೆಗೆ ಹಲವಾರು ಹಿರಿಯರ ಕೊಡುಗೆಯಿದೆ. ಜೊತೆ ಗೆ ಸಮಾಜದ ಏಳಿಗೆಗೆ ಶಕ್ತಿಮೀರಿ ಕೆಲಸವು ಆಗಿವೆ. ಆದರೆ ಅನೇಕ ವರ್ಷಗಳು ಕಳೆದರೂ ಭವನ ಪೂರ್ಣ ಗೊಳ್ಳದಿರುವುದು ಬೇಸರ ತಂದಿದ್ದು ಈ ಬಗ್ಗೆ ಶಾಸಕರು ಶೀಘ್ರವೇ ಗಮನಹರಿಸಿ ಭವನ ಪೂರ್ಣ-ಕ್ಕೆ ಅನು ದಾನ ಒದಗಿಸಿಕೊಡಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಮುಂಜಾನೆಯಿಂದ ನೂರಾರು ಭಕ್ತಾಧಿಗಳ ಸಮ್ಮುಖದಲ್ಲಿ ಯಜ್ಞ ಪೂರ್ಣಗೊಂಡಿತು. ತದ ನಂತರ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸುಮಾರು 20 ವಟುಗಳಿಗೆ ಸಾಮೂಹಿಕ ಉಪ ನಯನ ಜರುಗಿಸಲಾಯಿತು.

ಕಾರ್ಯಕ್ರಮದಲ್ಲಿ ವಿ.ಬ್ರಾ.ಸ.ಸೇವಾ ಸಭಾದ ಗೌರವಾಧ್ಯಕ್ಷ ಚೇತನ್ಕುಮಾರ್, ನಿಕಟಪೂರ್ವ ಅಧ್ಯಕ್ಷ ಎಂ.ಜೆ.ಮಹೇಶ್ಆಚಾರ್, ವಿಶ್ವಕರ್ಮ ಸಹಕಾರ ಸಂಘದ ಅಧ್ಯಕ್ಷ ಬಿ.ಪಿ.ರತೀಶ್, ಜಿಲ್ಲಾ ವಿಶ್ವಕರ್ಮ ಮಹಿಳಾ ಸಂಘದ ಅಧ್ಯಕ್ಷೆ ಮಂಜುಳಾ ಭೀಮಾಚಾರ್, ಸೇವಾರತ್ನ ಪುರಸ್ಕೃತ ಕೃಷ್ಣಮೂರ್ತಿ, ವಿ.ಸ.ಅ. ನಿಗಮದ ಸದಸ್ಯ ಚಿದಂಬರ್, ಕೆನರಾ ಬ್ಯಾಂಕ್ ಮೌಲ್ಯಮಾಪಲಕರ ಸಂಘದ ರಾಜ್ಯಾಧ್ಯಕ್ಷ ರುದ್ರಯ್ಯ ಆಚಾ ರ್, ಸಮಾಜದ ಮುಖಂಡರುಗಳಾದ ದಿವಾಕರ, ಬಿ.ಚಂದ್ರಶೇಖರ್, ಮಹೇಂದ್ರಚಾರ್, ನವೀನ್ಕುಮಾರ್ ಆಚಾರ್ಯ, ತೀರ್ಥಾಚಾರ್ ಮತ್ತಿತರರಿದ್ದರು

# ಬಜೆಟ್‌ನಲ್ಲಿ ದಲಿತ ಸಮುದಾಯ ಅಭಿವೃದ್ಧಿಗೆ ಅನುದಾನ ಮೀಸಲಿಡಲು ಆಗ್ರಹ

ಹರಿಹರ: ಮಾ. 7ರಂದು ಮುಖ್ಯ ಮಂತ್ರಿ ಸಿದ್ದರಾಮಯ್ಯನವರು ಮಂಡಿಸಲಿರುವ ಆಯ-ವ್ಯಯ (ಬಜೆಟ್)ದಲ್ಲಿದಲಿತ ಸಮುದಾಯಗಳ ಅಭಿವೃದ್ಧಿಗೆ ಹಾಗೂ ಹರಿಹರ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ, ಕುಡಿಯುವ ನೀರಿನ ಸಮಸ್ಯೆಗೆ ಶಾಸ್ವತ ಪರಿಹಾರ ನೀಡುವುದಕ್ಕಾಗಿ 1000 ಕೋಟಿ ರೂ. ಮೀಸಲಿಡಬೇಕೆಂದು ಆಗ್ರಹಿಸಿ, ಇಲ್ಲಿನ ಕರ್ನಾಟಕದಲಿತ ಸಂಘರ್ಷ ಸಮಿತಿ (ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ) ಕಾರ್ಯಕರ್ತರು ತಹಶೀಲ್ದಾರ್ ಕಚೇರಿಯ ಶಿರಸ್ತೆದಾರ್ ಸುನಿತಾರವರ ಮೂಲಕ ಮುಖ್ಯ ಮಂತ್ರಿಗಳಿಗೆ ಮಂಗಳವಾರ ಮನವಿ ಸಲ್ಲಿಸಿದರು. ತಾಲ್ಲೂಕು ಸಂಚಾಲಕ ಪಿ.ಜೆ. ಮಹಾಂತೇಶ್, ಹರೀಶ್ ಎಸ್.ಕೆ., ನವೀನ್ ಜಿ., ಮಂಜುನಾಥ್ ಟಿ.ಎಚ್., ಹನುಮಂತ, ಸ್ವಮಿಎಚ್., ಕಾರ್ತಿಕ್, ವಿ., ದಿವಾಕರಎನ್., ಹನುಮಂತ ಬಿ., ಹಳದೇಶ್ ಆರ್, ಪ್ರಶಾಂತ್ ಪಿ., ಅಪ್ಪು ಕೆ., ಹನುಮಂತಎಚ್. ಇದ್ದರು.



# ಆರೋಗ್ಯವೇ ಶ್ರೇಷ್ಠ, ಇದರಿಂದ ದಾನ, ಜ್ಞಾನದ ಶ್ರೇಷ್ಠತೆ ಕಾಣಬಹುದು: ಮಾದುಸ್ವಾಮಿ

**ಮಲೇಬೆನ್ನೂರು:** ಬಡವರ ಸೇವೆಯ ಮೂಲಕ ದೇವರನ್ನು ಕಾಣಬೇಕು. ದಾನ, ಜ್ಞಾನ ಶ್ರೇಷ್ಠ ಎಂಬ ಭಾವನೆಯಿತ್ತು. ಈ ಆರೋಗ್ಯವು ಶ್ರೇಷ್ಠವಾಗಿದೆ. ಆರೋಗ್ಯ ಚೆನ್ನಾಗಿದ್ದರೆ ದಾನ, ಜ್ಞಾನ ಎಲ್ಲವೂ ಸಾಧ್ಯ ಎಂದು ಮಾಜಿ ಸಚಿವ ಜೆ ಸಿ ಮಾಧುಸ್ವಾಮಿ ತಿಳಿಸಿದರು.ಸಮೀಪದ ಉಕ್ಕಡಗಾತ್ರಿ ಅಜ್ಜಯ್ಯನ ಮಹಾ ಶಿವರಾತ್ರಿ ಜಾತ್ರಾ ಮಹೋತ್ಸವದ ಅಂಗವಾಗಿ ಎಸ್ ಎಸ್ ಕೇರ್,ಜೆಜೆಎಂ ವೈದ್ಯಕೀಯ ಮಹಾವಿದ್ಯಾಲಯ, ಬಾಪೂಜಿ ಆಸ್ಪತ್ರೆ ಮತ್ತು ಮೆಡಿಕಲ್ ಸೈನ್ಸ್ ಮತ್ತು ಶ್ರೀ ಕರಿಬಸವೇಶ್ವರ ಗದ್ದುಗೆ ಟ್ರಸ್ಟ್ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಪರೋಪಕಾರಂ ಇದಂ ಶರೀರಂ ಎಂಬಂತಿದೆ. ಬೃಹತ್ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿರುವುದು ಸಂತೋಷಕರ ಎಂದು ಅಭಿಪ್ರಾಯಪಟ್ಟರು.

ಇಂದಿನ ಕಾಲದಲ್ಲಿ ಆರೋಗ್ಯಕ್ಕೆ ಆದ್ಯತೆ ನೀಡಬೇಕಾಗಿದೆ. ದಾವಣಗೆರೆ ಜಿಲ್ಲೆಯ ಮುತ್ಸದ್ದಿಗಳು ಶಾಸಕರು ಆದ ಶಾಮನೂರು ಶಿವಶಂಕರಪ್ಪ ತಮ್ಮ ಟ್ರಸ್ಟ್ ವತಿಯಿಂದ ವಾರ್ಷಿಕ 20 ಕೋಟಿ ರೂಗಳನ್ನು ಉಚಿತ ಆರೋಗ್ಯ ಶಿಬಿರ ಮತ್ತು ಉಚಿತ ಚಿಕಿತ್ಸೆಗಾಗಿ ಮೀಸಲಿಟ್ಟಿದ್ದಾರೆ. ಇಂತಹ ಯೋಜನೆಗಳನ್ನು ನಾವು ನೀವೆಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು. ಎಲ್ಲಾ ಭಾಗ್ಯಗಳ ನೋಡಬೇಕೆಂದರೆ ನಮಗೆ ಆರೋಗ್ಯ ಭಾಗ್ಯ ಬೇಕು ಎಂದು ಪ್ರಾಸ್ತಾವಿಕವಾಗಿ ದೇವಸ್ಥಾನ ಟ್ರಸ್ಟ್ ಕಮೀಟಿ ಕಾರ್ಯದರ್ಶಿ ಎಸ್ ಸುರೇಶ್ ಮಾತನಾಡಿದರು.

ಮುಖಂಡ ಜಿಗಳಿ ಇಂದೂಧರ ಮಾತನಾಡಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ಅಜ್ಜಯ್ಯನಿಗೆ ಅಭಿಷೇಕ, ವಿಶೇಷ ಪೂಜೆ, ಪೂಜಾಲಂಕಾರ ಮಾಡಲಾಗಿತ್ತು. ಮಾಜಿ ಮಂತ್ರಿ ಜೆಸಿ ಮಾದುಸ್ವಾಮಿ ಮತ್ತು ಪತ್ನಿ ತ್ರಿವೇಣಿ ದಂಪತಿಗಳು ಅಜ್ಜಯ್ಯನ ದರ್ಶನ ಪಡೆದರು.ಶಿಬಿರದಲ್ಲಿ ಚರ್ಮರೋಗ, ಪ್ರಸೂತಿ ಮತ್ತು ಸ್ತ್ರೀರೋಗ, ಕಣ್ಣು, ಕೀಲು, ಮೂಳೆ, ಮಕ್ಕಳ ತಜ್ಞರು ಭಾಗವಹಿಸಿದ್ದರು. ಉಚಿತ ಔಷಧಿ ವಿಭಾಗ, ಬಿಪಿ, ಶುಗರ್ ತಪಾಸಣೆ ಒಳಗೊಂಡಿತ್ತು. ಎಸ್ ಎಸ್ ಕೇರ್ ಕೋ ಆರ್ಡಿನೇಟರ್ ಹರೀಶ್,ಜೆಜೆಎಂ ಆಸ್ಪತ್ರೆ ಪ್ರೋಪೇಸರ್ ಡಾ ಪ್ರಶಾಂತ್ ಒಳಗೊಂಡಂತೆ 80 ಜನ ತಜ್ಞರತಂಡ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿದ್ದರು.

ವಕೀಲ ನಂದಿತಾವರೆ ತಿಮ್ಮನ ಗೌಡ್ರು, ಟ್ರಸ್ಟಿ ಗದ್ದಿಗಯ್ಯ ಪಾಟೀಲ್ ಮತ್ತು ಟ್ರಸ್ಟ್ ಕಮೀಟಿ ಪದಾಧಿಕಾರಿಗಳು ಇದ್ದರು.



ಇಂದಿನ ಕಾಲದಲ್ಲಿ ಆರೋಗ್ಯಕ್ಕೆ ಆದ್ಯತೆ ನೀಡಬೇಕಾಗಿದೆ. ದಾವಣಗೆರೆ ಜಿಲ್ಲೆಯ ಮುತ್ಸದ್ದಿಗಳು ಶಾಸಕರು ಆದ ಶಾಮನೂರು ಶಿವಶಂಕರಪ್ಪ ತಮ್ಮ ಟ್ರಸ್ಟ್ ವತಿಯಿಂದ ವಾರ್ಷಿಕ 20 ಕೋಟಿ ರೂಗಳನ್ನು ಉಚಿತ ಆರೋಗ್ಯ ಶಿಬಿರ ಮತ್ತು ಉಚಿತ ಚಿಕಿತ್ಸೆಗಾಗಿ ಮೀಸಲಿಟ್ಟಿದ್ದಾರೆ. ಇಂತಹ ಯೋಜನೆಗಳನ್ನು ನಾವು ನೀವೆಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು.
**-ಜೆ.ಸಿ.ಮಾಧುಸ್ವಾಮಿ,** ಮಾಜಿ ಸಚಿವ.

## ಅಂಜುಮನ್ ವೆಲ್ಫೇರ್ ತಂಡಕ್ಕೆ ಗೆಲುವು

**ಚಿಕ್ಕಮಗಳೂರು:** ನಗರದ ಅಂಡೆಛತ್ರ ಮುಸಾಫಿರ್ ಖಾನ್, ಅಂಜುಮನ್ ಇ ಇಸ್ಲಾಮಿಯಾ ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರ ಆಯ್ಕೆಗೆ ಶನಿವಾರ ನಡೆದ ಚುನಾವಣೆಯಲ್ಲಿ ಅಂಜುಮನ್ ವೆಲ್ಫೇರ್ ಗ್ರೂಪ್ ಭರ್ಜರಿ ಜಯಸಾಧಿಸಿದೆ. ನಗರದ ಐ.ಜಿ ರಸ್ತೆಯಲ್ಲಿರುವ ಉರ್ದು ಪ್ರಾಥಮಿಕ ಸರಕಾರಿ ಶಾಲೆಯಲ್ಲಿ ಮತದಾನ ನಡೆಯಿತು. 57 ಮಂದಿ ಸ್ಪರ್ಧಾ ಕಣದಲ್ಲಿದ್ದರು. ಅಂಜುಮನ್ ವೆಲ್ಫೇರ್ ಗ್ರೂಪ್‌ನಿಂದ 17 ಮಂದಿ ಕಣದಲ್ಲಿದ್ದು ಅದರಲ್ಲಿ 14 ಮಂದಿ ವಿಜೇತರಾಗಿದ್ದಾರೆ. ಸಿಡಿಎ ಅಧ್ಯಕ್ಷ ನಯಾಜ್ ಅಹ್ಮದ್ ಅವರ ತಂಡದಿಂದ 17 ಮಂದಿ ಚುನಾವಣೆಯಲ್ಲಿ ಸ್ಪರ್ಧಿಸಿದ್ದು ಅದರಲ್ಲಿ 5 ಮಂದಿ ಮಾತ್ರ ಗೆಲುವು ಸಾಧಿಸಿದ್ದಾರೆ. ಯಾವುದೇ ಗ್ರೂಪ್‌ಗೆ ಸೇರದೆ ಪಕ್ಷೇತರರಾಗಿ 2 ಮಂದಿ ವಿಜಯಶಾಲಿಗಳಾಗಿದ್ದು ಒಟ್ಟು 21 ಮಂದಿ ಅಂಜುಮನ್ ಇ ಇಸ್ಲಾಮಿಯಾ ಸಂಸ್ಥೆಗೆ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ವಿಜಯ ಗಳಿಸಿದವರಲ್ಲಿ ಅಬ್ದುಲ್‌ರಜಾಕ್, ಹಫೀಜ್ ಮೊಹಮದ್‌ರಿಯಾಜ್‌ಖಾನ್, ಮಸೂದ್ ಅಹ್ಮದ್, ನಜೀರ್ ಅಹ್ಮದ್, ನಾಸೀರ್‌ಖಾನ್, ಸಿ.ಪಿ.ಬಾಬರ್, ಸಿ.ಎ.ಮೊಹಮದ್ ಇಸ್ಮಾಯಿಲ್, ಅಬ್ರಾರ್‌ಖಾನ್, ಮೊಸಿನ್‌ಖಾನ್, ಹಸನ್ ಸಲೀಂ, ಮೊಹಮ್ಮದ್ ಇರ್ಷಾದ್, ಮೊಹಮದ್ ಉಮರ್, ಶಿರಾಜ್‌ಖಾನ್, ಮೊಹಮದ್ ಜಿಯಾ, ಮೊಹಮ್ಮದ್‌ರಾಹಿಲ್‌ಪಾಷಾ, ನೂರ್ ಮೊಹಮದ್, ತಬ್ರೀಜ್ ಅಹ್ಮದ್, ಸಯದ್‌ಜಬೀ, ಮೊಹಮದ್ ಅಜ್ಮಲ್‌ಬಾಗಿ, ಅಜ್ಮಲ್, ಮೊಹಮದ್ ಅಬ್ರಾರ್ ಇವರುಗಳು ಚುನಾವಣೆಯಲ್ಲಿ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಕಾರಿ ನಿಸಾರ್ ಅಹ್ಮದ್ ತಿಳಿಸಿದ್ದಾರೆ.

## ಸ್ಕೌಟಿಂಗ್ ಚಳವಳಿಯಿಂದ ಸ್ವಾಸ್ಥ್ಯ ಸಮಾಜ ನಿರ್ಮಿಸಲು ಸಾಧ್ಯ

**ಚಿಕ್ಕಮಗಳೂರು:** ಸ್ಕೌಟಿಂಗ್ ಚಳುವಳಿಯು ಈ ಸಮಾಜವನ್ನು ಸರಿದಾರಿಗೆ ತರುವ ಹಿನ್ನೆಲೆಯಲ್ಲಿ ಹುಟ್ಟಿ ಬಂದ ಘಟಕವಾಗಿದೆ. ಸ್ಕೌಟ್ಸ್ ಮತ್ತು ಗೈಡ್ಸ್ ಮೊದಲು 1907ರಲ್ಲಿ ಹುಟ್ಟಿ 20 ಮಕ್ಕಳಿಂದ ಪ್ರಾರಂಭವಾಗಿ ಲಾರ್ಡ್ ಬೇಡನ್ ಪೊವೆಲ್ ಯೋಚನೆಗಳು ಉತ್ತಮ ಚಿಂತನೆಗಳನ್ನು ಹೊಂದಿದ್ದರಿಂದ ಇಂದು ಅಗಣಿತವಾಗಿ ಬೆಳೆದು 200ಕ್ಕೂ ಹೆಚ್ಚು ದೇಶಗಳಲ್ಲಿ ಪಸರಿಸಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಉಪಾಧ್ಯಕ್ಷ ಎ.ಎನ್ ಮಹೇಶ್ ನುಡಿದರು. ನಗರದ ಹೊರವಲಯದಲ್ಲಿರುವ ಮಾಡೆಲ್ ಆಂಗ್ಲ ಪ್ರೌಢಶಾಲೆಯಲ್ಲಿ ನಡೆದ ಲಾರ್ಡ್‌ಬೇಡನ್ ಪೊವೆಲ್ ಮತ್ತು ಲೇಡಿ ಬೇಡನ್ ಪೊವೆಲ್‌ರವರ ಜನ್ಮದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ "ವಿಶ್ವ ಚಿಂತನಾ ಮತ್ತು ಭ್ರಾತೃತ್ವ ದಿನಾಚರಣೆ" ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಬೇಡನ್ ಪೊವೆಲ್ ಮತ್ತು ಲೇಡಿ ಬೇಡನ್ ಪೊವೆಲ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆಯನ್ನು ಮಾಡುವುದರ ಮೂಲಕ ಮಾತನಾಡಿದರು. ಅಡ್ವೆಂಚರ್ ಕ್ಲಬ್‌ನ ಅಧ್ಯಕ್ಷ ಕೃಷ್ಣೇಗೌಡ ಮಾತನಾಡಿ ನನಗೆ ಈ ಕಾರ್ಯಕ್ರಮ ಹೊಸತಾಗಿದ್ದು ಸಂತಸ ತಂದಿದೆ, ಸ್ಕೌಟಿಂಗ್ ಮಕ್ಕಳಲ್ಲಿ ಧೈರ್ಯ ತುಂಬುತ್ತದೆ. ಮಾಡೆಲ್ ಶಾಲೆಯ ಪರಿಸರ ಉತ್ತಮ ಮತ್ತು ಸುಂದರವಾಗಿದ್ದು ಬಹುತೇಕ ಶಾಲೆಗಳಿಗೆ ಇಂತಹ ಅವಕಾಶವಿರುವುದಿಲ್ಲ ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಬಳಸಿಕೊಳ್ಳಬೇಕೆಂದು ಸಲಹೆ ನೀಡಿದರು. ಶಾಲಾ ಸಂಸ್ಥಾಪಕ ಷಡಕ್ಷರಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಾಲಾ ಸಂಸ್ಥಾಪಕಿ ವಿಶಾಲ ಷಡಕ್ಷರಿ, ಶಾಲಾ ಮುಖ್ಯ ಶಿಕ್ಷಕ ಯೋಗೀಶ್, ಬೋಧಕ-ಬೋಧಕೇತರ ವರ್ಗದವರು, ಪೋಷಕರು ಮತ್ತು ಮಕ್ಕಳು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ನಿಮ್ರಾ ಶರಫೈನ್ ನಿರೂಪಿಸಿ, ಸೋನಿಕಾ ಜಿ ಶೆಟ್ಟಿ ಸ್ವಾಗತಿಸಿ, ನಿಮ್ರಾ ವಂದಿಸಿದರು.

## ಸಮುದಾಯದವರ ಏಳಿಗೆಗೆ ಬದ್ಧ

**ಭದ್ರಾವತಿ:** ಗಾಂಧಿ ನಗರದ ಆಗಮುಡಿ ಮೊದಲಿಯರ್ ಸಮುದಾಯ ಭವನದಲ್ಲಿ ಭಾನುವಾರ ಜರುಗಿದ ಅಖಿಲ ಭಾರತ ತುಳುವ ವೆಲ್ಲಲ(ಮೊದಲಿಯಾರ್) ಸಂಘಮ್ 36ನೇ ರಾಷ್ಟ್ರೀಯ ಸಮಾವೇಶ ಸಂಸದ ಬಿ.ವೈ ರಾಘವೇಂದ್ರ ಉದ್ಘಾಟಿಸಿದರು. ಸಮಾವೇಶದಲ್ಲಿ ಮೊದಲಿಯಾರ್ ಸಮುದಾಯದವರು ಇನ್ನೂ ಹೆಚ್ಚು ಕ್ರಿಯಾಶೀಲರಾಗುವ ಮೂಲಕ ಸಂಘಟನೆಗೆ ಒತ್ತು ನೀಡಬೇಕು. ಸಮುದಾಯದವರ ಹಿತರಕ್ಷಣೆಗೆ ಬದ್ಧರಾಗಿ ಪರಿಣಾಮಕಾರಿ ಕಾರ್ಯ ಚಟುವಟಿಕೆಗಳನ್ನು ರೂಪಿಸಿಕೊಳ್ಳುವಂತೆ ಕರೆ ನೀಡಲಾಯಿತು. ಸಮಾವೇಶದಲ್ಲಿ ಬಿ.ವೈ ರಾಘವೇಂದ್ರರವರು ತಾಲೂಕು ಸಂಘದ ನೂತನ ಕಛೇರಿ ಉದ್ಘಾಟಿಸುವ ಜೊತೆಗೆ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿದರು. ನಂತರ ಮಾತನಾಡಿ, ಮೊದಲಿಯಾರ್ ಸಮುದಾಯದವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದೇನೆ. ಈ ಸಮುದಾಯದವರ ಏಳಿಗೆಗೆ ಬದ್ಧನಾಗಿದ್ದು, ಎಲ್ಲಾ ರೀತಿಯ ಸಹಕಾರ ನೀಡಲು ಸಿದ್ಧವಿದ್ದೇನೆ ಎಂದರು. ಸಮಾವೇಶಕ್ಕೂ ಮೊದಲು ಅಖಿಲ ಭಾರತ ತುಳುವ ವೆಲ್ಲಲ(ಮೊದಲಿಯಾರ್) ಸಂಘಮ್ ಅಧ್ಯಕ್ಷ, ಹಿರಿಯ ಪತ್ರಕರ್ತ ಕಣ್ಣಪ್ಪ ಧ್ವಜಾರೋಹಣ ನೆರವೇರಿಸಿದರು. ಸಮಾವೇಶದಲ್ಲಿ ಪಾಂಡಿ-ಚೇರಿ, ತಮಿಳುನಾಡು, ಹೈದರಬಾದ್ ಮತ್ತು ಕರ್ನಾಟಕ ಸೇರಿದಂತೆ ದೇಶದ ವಿವಿಧ ರಾಜ್ಯಗಳಿಂದ ಸಂಘದ ಪ್ರತಿನಿಧಿಗಳು ಭಾಗವಹಿಸಿದ್ದರು. ತಾಲೂಕು ಸಂಘದ ಅಧ್ಯಕ್ಷ ಕೆ. ಮಂಜುನಾಥ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಮಾವೇಶದಲ್ಲಿ ಬಿ.ವೈ ರಾಘವೇಂದ್ರರನ್ನು ಸನ್ಮಾನಿಸಿ ಗೌರವಿಸಲಾಯಿತು. ಐಎಂಪಿಎ ಸಂಸ್ಥಾಪಕ ಚೆವಲಿಯಾರ್ ಡಾ. ಆರ್. ಅರುಣ-ಾಚಲ, ಎಐಎಟಿವಿಎಸ್ ಕಾರ್ಯದರ್ಶಿ ಗೋಪಾಲಮಣಿ, ಎನ್. ಮಂಜುನಾಥ್, ಪ್ರಮುಖರಾದ ಉದ್ಯಮಿ ಬಿ.ಕೆ ಜಗನ್ನಾಥ್, ನಗರಸಭೆ ಮಾಜಿ ಅಧ್ಯಕ್ಷ ಆರ್. ಕರುಣಾಮೂರ್ತಿ, ತಾಲೂಕು ಸಂಘದ ಉಪಾಧ್ಯಕ್ಷ ಎ. ಸುಬ್ರಮಣಿ ಇದ್ದರು.



# ಆಮೆ ವೇಗದ ಕಾಮಗಾರಿ ಮತ್ತೆ ನನೆಗುದಿಗೆ

ಹರಿಹರ: ಅನುದಾನದ ಕೊರತೆಯಿಂದ ಸಾರ್ವಜನಿಕ ಕಟ್ಟಡ ನಿರ್ಮಾಣ ಕಾಮಗಾರಿ ಕುಂಠಿತಗೊಳ್ಳುವುದನ್ನು ಕೇಳಿದ್ದೇವೆ. ಆದರೆ ಅನುದಾನ ಇದ್ದರೂ ಇಲ್ಲಿನ ನಗರಸಭೆಯ ಹೊಸ ಕಟ್ಟಡ ಕಾಮಗಾರಿ ಕುಂಠಿತಗೊಂಡು ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಆರು ದಶಕಗಳ ಹಿಂದೆ ನಿರ್ಮಾಣಗೊಂಡಿದ್ದ ನಗರಸಭೆಯ ಹಳೆ ಕಟ್ಟಡವನ್ನು ತೆರವುಗೊಳಿಸಿದ ಜಾಗದಲ್ಲಿ ಹೊಸ ಕಟ್ಟಡ ನಿರ್ಮಿಸಲು 2021ರಲ್ಲಿ ರಾಜ್ಯ ಸರ್ಕಾರ 4.22 ಕೋಟಿ ಅನುದಾನ ಬಿಡುಗಡೆಮಾಡಿತ್ತು. ಬೆಂಗಳೂರಿನ ಗುತ್ತಿಗೆದಾರ ಟೆಂಡರ್ ಪಡೆದಿದ್ದರು. ಹಳೆ ಕಟ್ಟಡ ತೆರವುಗೊಳಿಸಲು ಒಂದು ವರ್ಷ ಸಮಯ ತೆಗೆದುಕೊಂಡ ಗುತ್ತಿಗೆದಾರ, ನಂತರ ಆ ಜಾಗದಲ್ಲಿ ಬುನಾದಿ ಹಾಕಿ ಒಂದು ವರ್ಷ ಸುಮ್ಮನಿದ್ದರು. ಈಗ ಗೋಡೆ ಹಂತದವರೆಗೆ ನಿರ್ಮಾಣ ಕಾರ್ಯ ನಡೆಯಿತು.

ಆದರೆ ಕಳೆದ 3 ತಿಂಗಳಿಂದ ಕಾಮಗಾರಿ ಮತ್ತೆ ಸ್ಥಗಿತಗೊಂಡಿದೆ. ಆರ್‌ಸಿಸಿ ಹಾಕಿ ಉಳಿದ ಕೆಲಸಗಳನ್ನು ಪೂರ್ಣಗೊಳಿಸಲು ಅಂದಾಜು 2-3 ತಿಂ ಗಳು ಸಾಕಾಗಬಹುದು. ನಗರಸಭೆಯಿಂದ ಹಲವು ಬಾರಿ ನೋಟಿಸ್ ಜಾರಿಮಾಡಿದ್ದರೂ ಗುತ್ತಿಗೆದಾರ ಕಾಮಗಾರಿ ಪೂರ್ಣಗೊಳಿಸಲು ಮುಂದೆ ಬರುತ್ತಿಲ್ಲ.

ನಗರಸಭೆಯ ಕಂದಾಯ, ಆರೋಗ್ಯ, ಎಂಜಿನಿಯರಿಂಗ್, ದಾಖಲೆ, ಸಮುದಾಯ ಅಭಿವೃದ್ಧಿ, ಕಂಪ್ಯೂಟರ್, ಲೆಕ್ಕಪತ್ರ ಶಾಖೆ ಸೇರಿ ವಿವಿಧ ವಿಭಾಗಗಳ ಕೆಲಸಗಳನ್ನು ಕಿಷ್ಕಿಂಧೆಯಂತಹ ತಾತ್ಕಾಲಿಕ ಕೊಠಡಿಗಳಲ್ಲಿ ನಡೆಸಲಾಗುತ್ತಿದೆ. ಸಿಬ್ಬಂದಿ ಕುಳಿತು ಕೆಲಸಮಾಡಲು ಹಾಗೂ ತಮ್ಮ ಶಾಖೆಗೆ ಸೇರಿದ ದಾಖಲೆಗಳನ್ನು ಇಟ್ಟುಕೊಳ್ಳಲೂ ಸಾಧ್ಯವಾಗುತ್ತಿಲ್ಲ. ಪೌರಾಯುಕ್ತ, ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಭೇಟಿ ಮಾಡಲು ಬರುವ ಜನರಿಗೆ ತೊಂದರೆಯಾಗುತ್ತಿದೆ. ಕಂದಾಯ, ಆರೋಗ್ಯ, ಎಂಜಿನಿಯರಿಂಗ್ ಶಾಖೆಗಳು ಮೊದಲ ಮಹಡಿಯಲ್ಲಿರುವುದರಿಂದ ಹಿರಿಯ ನಾಗರಿಕರಿಗೆ ಹತ್ತಿ ಇಳಿಯುವುದು ದುಸ್ತರವಾಗಿದೆ.

ಸಿಬ್ಬಂದಿ ಕೊರತೆಯಿಂದ ಸಾರ್ವಜನಿಕರಿಗೆ ಒಂದು ರೀತಿ ತೊಂದರೆಯಾಗುತ್ತಿದ್ದರೆ, ಕಿಷ್ಕಿಂಧೆಯಂತಿರುವ ಕಟ್ಟಡ ಇನ್ನೊಂದು ರೀತಿಯ ಅಡ್ಡಿ ಉಂಟುಮಾಡುತ್ತಿದೆ. ಗುತ್ತಿಗೆದಾರರ ಮೇಲೆ ಒತ್ತಡ ಹೇರಿ ಶೀಘ್ರವೇ ಕಾಮಗಾರಿ ಪೂರ್ಣಗೊಳಿಸಲು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಮುಂದಾಗಬೇಕು ಎಂದು ನಾಗರಿಕರು ಒತ್ತಾಯಿಸಿದ್ದಾರೆ.

## ಹೆಚ್ ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಸಮಾಜಶಾಸ್ತ್ರ ವಿಭಾಗದಲ್ಲಿ ಟಿ. ಭಾನುಪ್ರಿಯಾಗೆ ದ್ವಿತೀಯ ರ್‍ಯಾಂಕ್



**ಚಳ್ಳಕೆರೆ:** ತಾಲೂಕಿನ ಹೆಚ್ ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ವಿಭಾಗದ ಸಮಾಜಶಾಸ್ತ್ರ ವಿಷಯದಲ್ಲಿ ಕಾಲೇಜಿನ ವಿದ್ಯಾರ್ಥಿನಿ ಟಿ ಭಾನುಪ್ರಿಯರವರು ಎರಡನೇ ರ್‍ಯಾಂಕ್ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲ ಜಿಎಸ್ ಮಂಜುನಾಥ್ ತಿಳಿಸಿದ್ದಾರೆ.

ನಗರದ ಕಾಲೇಜು ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ನಮ್ಮ ಕಾಲೇಜಿನ ವಿದ್ಯಾರ್ಥಿನಿ ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕರ ಉತ್ತಮ ಮಾರ್ಗದರ್ಶನ ಪಡೆದು ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಎರಡನೇ ರ್‍ಯಾಂಕ್ ಪಡೆದಿದ್ದಾರೆ. ಕಾಲೇಜಿಗೆ ಮೊದಲ ರಾಂಕ್ ಬರಬೇಕಿತ್ತು, ಆದರೆ ಒಂದು ಅಂಕದ ಕಡತದ ಕಾರಣ ಎರಡನೇ ರಾಂಕ್ ಪಡೆಯಲಾಗಿದೆ ವಿದ್ಯಾರ್ಥಿನಿ ಭಾನುಪ್ರಿಯರವರು ಶೈಕ್ಷಣಿಕ ಅವಧಿಯಲ್ಲಿ ಉತ್ತಮವಾಗಿ ವ್ಯಾಸಂಗ ನಡೆಸಿದ್ದರಿಂದ ಈ ಸಾಧನೆ ಸಾಧ್ಯವಾಗದೆ ಮುಂದಿನ ದಿನಗಳಲ್ಲಿ ಅವರ ಇಚ್ಛೆಯಂತೆ ಪಿ ಎಚ್ ಡಿ ಪದವಿ ಪಡೆದು ಉಪನ್ಯಾಸಕರಾಗಬೇಕು ಎಂಬ ಆಸೆ ಈಡೇರಲಿ ಹಾಗೂ ಯುಪಿಎಸ್ಸಿ ಮತ್ತು ಕೆಪಿಎಸ್ಸಿ ಪರೀಕ್ಷೆಗಳನ್ನು ತೆಗೆದುಕೊಂಡು ಉತ್ತಮ ಸ್ಥಾನಕ್ಕೆ ಏರಲಿ ಎಂದು ಆಶಿಸುತ್ತೇನೆ ಕಾಲೇಜಿನಲ್ಲಿ ಅತ್ಯಂತ ಹಿಂದುಳಿದ ಎಸ್ ಸಿ ಎಸ್ ಟಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಉತ್ತಮ ವಾತಾವರಣವಿದೆ ಈ ಹಿಂದೆಯೂ ಕಾಲೇಜಿಗೆ ಉತ್ತಮ ರ್‍ಯಾಂಕ್ ಗಳು ಬಂದಿದ್ದು ಮುಂದಿನ ದಿನಗಳಲ್ಲಿ ವಿಜ್ಞಾನ ವಿಷಯಕ್ಕೆ ಸಂಬಂಧಪಟ್ಟಂತೆ ಸ್ನಾತಕೋತ್ತರ ತರಗತಿಗಳನ್ನು ಆರಂಭಿಸಲು ಚಿಂತನೆ ನಡೆಸಲಾಗಿದೆ ಹಂಪಿ ವಿಶ್ವವಿದ್ಯಾನಿಲಯದ ಅಡಿಯಲ್ಲಿ ಸಂಶೋಧನಾ ಕೇಂದ್ರ ಸ್ಥಾಪನೆಗೆ ಹಂಪಿ ವಿಶ್ವವಿದ್ಯಾನಿಲಯದ ಕುಲಪತಿಗಳು ಉತ್ಸಾಹ ತೋರಿದು ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯ ಕೇಂದ್ರ ಸ್ಥಾಪನೆ ಈಗಾಗಲೇ ಕಾರ್ಯ ಆರಂಭವಾಗಿದ್ದು ಮುಂದಿನ ಭವಿಷ್ಯದ ವಿದ್ಯಾರ್ಥಿಗಳಿಗೆ ಕಾಲೇಜಿನಲ್ಲಿ ಉತ್ತಮವಾದ ಶಿಕ್ಷಣ ದೊರೆಯುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ದೇವಪ್ಪ ಮಾತನಾಡಿ ಹೆಚ್ ಪಿ ಪಿ ಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಾಣಿಜ್ಯ ಹಾಗೂ ಕಲಾ ವಿಭಾಗಗಳನ್ನು ಹೊಂದಿದ್ದು ವಿದ್ಯಾರ್ಥಿಗಳಿಗೆ ಉತ್ತಮ ಜ್ಞಾನಾರ್ಜನೆ ದೃಷ್ಟಿಯಿಂದ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ನೀಡುತ್ತಿದ್ದು ಕಾಲೇಜಿನಲ್ಲಿ ಅತ್ಯುತ್ತಮವಾದ ಗ್ರಂಥಾಲಯ ಹಾಗೂ ಕೊಠಡಿಗಳ ವ್ಯವಸ್ಥೆ ಇದ್ದು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚಾಗಿ ವಿದ್ಯಾಭ್ಯಾಸ ಮಾಡುತ್ತಿದ್ದು ಅವರಿಗೆ ಸ್ವಲ್ಪಮಟ್ಟಿನ ಆಂಗ್ಲ ಭಾಷೆಯ ಹಾಗೂ ಕಂಪ್ಯೂಟರ್ ಜ್ಞಾನದ ಕೊರತೆ ಇರುವುದರಿಂದ ಇತ್ತೀಚಿನ ದಿನಗಳಲ್ಲಿ ರಾಂಕ್ ಗಳಿಸಲು ತೊಡಕಾಗಿತ್ತು ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದರಿಂದ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿಯೇ ಅತ್ಯುತ್ತಮ ಕಾಲೇಜಾಗಿ ಹೊರಹೊಮ್ಮಲಿದೆ ವಿದ್ಯಾರ್ಥಿನಿ ಭಾನುಪ್ರಿಯರವರು ಸಮಾಜಶಾಸ್ತ್ರ ವಿಭಾಗದಲ್ಲಿ ಆಂಶಿಕ ಕಿರು ಪ್ರಬಂಧವನ್ನು ಅತ್ಯುತ್ತಮವಾಗಿ ಮಂಡನೆ ಮಾಡಿದ್ದರಿಂದ ರಾಂಕ್ ಗಳಿಸಲು ಸಾಧ್ಯವಾಗಿದೆ ಇದು ಮುಂದಿನ ಶೈಕ್ಷಣಿಕ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ ಎಂದು ಆಶಿಸಿದರು

ವಿದ್ಯಾರ್ಥಿನಿ ಭಾನುಪ್ರಿಯ ಮಾತನಾಡಿ ನನಗೆ ದ್ವಿತೀಯ ರಾಂಕ್ ಬಂದಿರುವುದು ಸಂತಸವಾಗಿದೆ ಈ ಸಾಧನೆಗೆ ಕಾಲೇಜಿನ ಪ್ರಾಂಶುಪಾಲ ಜಿಎಸ್ ಮಂಜುನಾಥ್ ಹಾಗೂ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ ದೇವಪ್ಪ, ಸೇರಿದಂತೆ ಉಪನ್ಯಾಸಕ ವರ್ಗದ ಪ್ರೋತ್ಸಾಹ ಮತ್ತು ಕುಟುಂಬ ವರ್ಗದ ಬೆಂಬಲದಿಂದಾಗಿ ಈ ಸಾಧನೆ ಸಾಧ್ಯವಾಗಿದೆ ಕಾಲೇಜಿನಲ್ಲಿನ ಅತ್ಯುತ್ತಮ ಬೋಧನೆ ಗ್ರಂಥಾಲಯದಲ್ಲಿ ದೊರೆತ ಉತ್ತಮ ಪುಸ್ತಕಗಳ ನೆರವಿನಿಂದ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಸಾಧ್ಯವಾಯಿತು ಸಾಧನೆ ಮಾಡಲು ಗುರಿ ಮುತ್ತು ಸತತ ಪರಿಶ್ರಮವಿದ್ದರೆ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಗುತ್ತದೆ ಮುಂದಿನ ದಿನಗಳಲ್ಲಿ ಪಿ ಹೆಚ್ ಡಿ ಪದವಿ ಪಡೆದು ಉಪನ್ಯಾಸಕಿ ಆಗುವುದು ಹಾಗೂ ಯುಪಿಎಸ್ಸಿ ಹಾಗೂ ಕೆಪಿಎಸ್ಸಿ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿ ನಾಗರೀಕ ಸೇವೆ ಸಲ್ಲಿಸುವುದು ನನ್ನ ಕನಸಾಗಿದೆ ಎಂದು ತಿಳಿಸಿದರು.

ಇದೆ ವೇಳೆ ಕಾಲೇಜಿನ ವತಿಯಿಂದ ರ್‍ಯಾಂಕ್ ಪಡೆದ ಟಿ ಭಾನುಪ್ರಿಯರವರನ್ನು ಸಾಂಕೇತಿಕವಾಗಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಕನ್ನಡ ವಿಭಾಗದ ಉಪನ್ಯಾಸಕ ಚಿತ್ತಯ್ಯ, ಗ್ರಂಥಾಲಯ ವಿಭಾಗದ ಮುಖ್ಯಸ್ಥ ಪಾಪಣ್ಣ ಸೇರಿದಂತೆ ಕಾಲೇಜಿನ ಉಪನ್ಯಾಸಕ ವರ್ಗ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## ಅಪೌಷ್ಠಿಕತೆ ಹೋಗಲಾಡಿಸಲು ಬಿಸಿಯೂಟ ಯೋಜನೆ

**ಹೊನ್ನಾಳಿ:** ಶಾಲಾ ಮಕ್ಕಳ ಅಪೌಷ್ಠಿಕತೆ ಹೋಗಲಾಡಿಸಲು 2003 ರಲ್ಲಿ ಶಿಕ್ಷಣಮಂತ್ರಿಯಾಗಿದ್ದ ಎಚ್. ವಿಶ್ವನಾಥ್ ಅವರು ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರೊಂದಿಗೆ ಸಮಾಲೋಚನೆ ನಡೆಸಿ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಜಾರಿಗೊಳಿಸಿದ್ದರು ಎಂದು ಹೊನ್ನಾಳಿ, ನ್ಯಾಮತಿ ಅವಳಿ ತಾಲ್ಲೂಕು ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ನಾಗೇಂದ್ರಪ್ಪ ಹೇಳಿದರು. ಗುರುಭವನದಲ್ಲಿ ಹಮ್ಮಿಕೊಂಡಿದ್ದ ಅವಳಿ ತಾಲ್ಲೂಕುಗಳ ಬಿಸಿಯೂಟ ತಯಾರಕರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ತಾಲ್ಲೂಕು ಅಗ್ನಿಶಾಮಕ ದಳದ ಠಾಣಾಧಿಕಾರಿ ಪರುಶುರಾಮ್ ಅವರು ಬೆಂಕಿಯಿಂದ ಆಗುವ ಅನಾಹುತ ಮತ್ತು ಅವುಗಳ ನಿರ್ವಹಣೆ ಕುರಿತು ಮಾತನಾಡಿದರು. ಬಿಸಿಯೂಟ ತಯಾರಕರ ಫೆಡರೇಷನ್ ಮುಖಂಡರಾದ ಪುರವಂತರ ಪರಮೇಶ್ವರಪ್ಪ ಅವರು ಮಾತನಾಡಿ, ಅಲ್ಪ ಗೌರವಧನದಲ್ಲಿ ಕೆಲಸ ಮಾಡುವ ಬಿಸಿಯೂಟ ತಯಾರಕರಿಗೆ ಸರ್ಕಾರ ಮಾರ್ಚ್ ತಿಂಗಳ ಬಜೆಟ್ ನಲ್ಲಿ ಗೌರವಧನ ಹೆಚ್ಚಳ ಮಾಡಬೇಕು ಎಂದು ಆಗ್ರಹಿಸಿದರು. ಈ ಕುರಿತು ಶಿಕ್ಷಣ ಮಂತ್ರಿಯೊಂದಿಗೆ ಈಗಾಗಲೇ ಮಾತುಕತೆಯಾಗಿದ್ದು, ಸರ್ಕಾರದ ಗಮನಸೆಳೆಯಲು ಮಾರ್ಚ್ 5 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಂಡಿರುವ ಧರಣಿ ಸತ್ಯಾಗ್ರಹಕ್ಕೆ ಎಲ್ಲಾ ಅಡಿಗೆಯವರು ಬರಬೇಕು ಎಂದು ಕರೆನೀಡಿದರು. ಆರೋಗ್ಯ ಶಿಕ್ಷಣ ಇಲಾಖೆಯ ರಾಧಮ್ಮ ಶುಚಿತ್ವದ ಬಗ್ಗೆ ತಿಳಿಸಿದರು. ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರಪ್ಪ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ಪ್ರಕಾಶನಾಯ್ಕ, ಶಿಕ್ಷಕ ರಾಮಪ್ಪ, ಮಂಜುನಾಥ್ ಬಿ.ಎನ್. ಹನುಮಂತಪ್ಪ , ಫೆಡರೇಷನ್ನಿನ ಅಧ್ಯಕ್ಷೆ ಹಾಲಮ್ಮ, ಪದಾಧಿಕಾರಿಗಳಾದ ಲಲಿತಮ್ಮ ಮಂಗಳಗೌರಿ, ಜಯಮ್ಮ ಸೇರಿದಂತೆ ಹಲವರು ಹಾಜರಿದ್ದರು.





## ಭದ್ರಾ ಮೇಲ್ದಂಡೆ ಅಕ್ಟೋಬರ್-2025 ರೊಗಳಗೆ ಪೂರ್ಣಗೊಳಿಸುವ ಗುರಿ

**ಚಿತ್ರದುರ್ಗ :** ಮಧ್ಯ ಕರ್ನಾಟಕದ ಕನಸಿನ ಯೋಜನೆಯಾದ ಈ ಭದ್ರಾ ಮೇಲ್ದಂಡೆ ಯೋಜನೆಯಡಿ ಬರುವ ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿಯನ್ನು ಅಕ್ಟೋಬರ್-2025 ರೊಗಳಗೆ ಪೂರ್ಣಗೊಳಿಸುವ ಗುರಿ ನಿಗಧಿಪಡಿಸಿಕೊಳ್ಳಲಾಗಿದ್ದು, ಈ ಯೋಜನೆಯನ್ನು ಕಾಂಗ್ರೆಸ್ ಸರ್ಕಾರದ ಅವಧಿಯೊಳಗೆ ಪೂರ್ಣಗೊಳಿಸಲು ಅನುವಾಗುವಂತೆ ಈ ಬಾರಿಯ 2025-26ನೇ ಸಾಲಿನ ಆಯವ್ಯಯದಲ್ಲಿ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಗೆ ರೂ.3000.00 ಕೋಟಿಗಳ ಅನುದಾನ ಒದಗಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರಿಗೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಪತ್ರವನ್ನು ಬರೆದಿದ್ದಾರೆ.

ಈ ಬಗ್ಗೆ ಸಚಿವರಿಂದ ಮುಖ್ಯಮಂತ್ರಿಗಳಿಗೆ ಬರೆದ ಪತ್ರದ ಸಾರಾಂಶ ಈ ರೀತಿಯಿದೆ ಭದ್ರಾ ಮೇಲ್ದಂಡೆ ಯೋಜನೆ ಮಧ್ಯ ಕರ್ನಾಟಕದ ಬರಪೀಡಿತ ಪ್ರದೇಶಗಳಾದ ಚಿತ್ರದುರ್ಗ, ಚಿಕ್ಕಮಗಳೂರು, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಯಲ್ಲಿನ 2,25,515 ಹೆಕ್ಟರ್ ಭೂ ಪ್ರದೇಶಕ್ಕೆ ಹನಿ ನೀರಾವರಿ ಪದ್ಧತಿಯಲ್ಲಿ ನೀರಾವರಿ ಸೌಲಭ್ಯ ಹಾಗೂ ಈ ಜಿಲ್ಲೆಗಳ ವ್ಯಾಪ್ತಿಯಲ್ಲಿನ 367 ಕೆರೆಗಳನ್ನು ತುಂಬಿಸುವ ಮಹತ್ವಾಕಾಂಕ್ಷೆ ಯೋಜನೆಯಾಗಿದೆ.

## ಈಶ್ವರೀಯ ವಿಶ್ವವಿದ್ಯಾಲಯ ಕೊಡುಗೆ ಅಪಾರ



**ಸೊರಬ:** ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಈಶ್ವರೀಯ ವಿಶ್ವವಿದ್ಯಾಲಯದ ಕೊಡುಗೆ ಅಪಾರವಾಗಿದೆ ಎಂದು ಶ್ರೀ ರಂಗನಾಥ ಸೊಸೈಟಿ ನಿರ್ದೇಶಕ ಡಿ.ಎಸ್ ಶಂಕರ್ ಶೇಟ್ ಹೇಳಿದರು.

ಪಟ್ಟಣದ ಮಾರ್ಕೆಟ್ ರಸ್ತೆಯಲ್ಲಿರುವ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ಶಾಂತಿಧಾಮದಲ್ಲಿ ಮಹಾಶಿವರಾತ್ರಿ, ಸ್ಮೃತಿ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಡುವೆ ಇತ್ತೀಚಿನ ದಿನಗಳಲ್ಲಿ ಮನುಷ್ಯ ಮನುಷ್ಯನ ದ್ವೇಷ-ಅಸೂಹೆ ಹೆಚ್ಚಾಗಿ ಅಂತರ ಕಾಣುತ್ತಿದ್ದೇವೆ. ಇಂತಹ ಸಂದರ್ಭದಲ್ಲಿ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದಲ್ಲಿ ಎಲ್ಲರಿಗೂ ನೈತಿಕ ಶಿಕ್ಷಣ ನೀಡುವುದರ ಜೊತೆಗೆ ಅವರನ್ನು ಸಮಾಜಮುಖಿಗೆ ಕರೆ ತರುವಲ್ಲಿ ಹೆಚ್ಚಿನ ಪಾತ್ರವನ್ನು ವಹಿಸುತ್ತಿದೆ. ಹಿರಿಯ-ಕಿರಿಯರೆನ್ನದೇ ಎಲ್ಲರೂ ಇಲ್ಲಿ ನೀಡುವ ರಾಜಯೋಗ ಶಿಕ್ಷಣ, ಆಧ್ಯಾತ್ಮವನ್ನು ಕಲಿತರೆ ಅವರ ಜೀವನ ಸುಗಮವಾಗುತ್ತದೆ ಎಂದರು.

ಈ ಸಂಸ್ಥೆಯ ಸಂಚಾಲಕಿ ಬಿ.ಕೆ. ವೀಣಕ್ಕ ರವರು ಪ್ರತಿ ಹಬ್ಬಗಳ ಸಂದರ್ಭದಲ್ಲಿ ಒಂದಲ್ಲ ಒಂದು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನಶಿಕ್ಷಣ, ಆಧ್ಯಾತ್ಮವನ್ನು ನೀಡುತ್ತಿರುವುದು ಶ್ಲಾಘನೀಯ ಎಂದರು. ಮುಂಡಗೋಡು ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ಬಿ.ಕೆ ಗಂಗಕ್ಕ ಮಾತನಾಡಿ, ನಮ್ಮೆಲ್ಲರ ಪರಮಾತ್ಮ ಒಬ್ಬನೇ. ಸರ್ವ ದೇವರಿಗೆ ಸಲ್ಲಿಸುವ ನಮಸ್ಕಾರ ಆತನಿಗೆ ಸಲ್ಲಿಸುತ್ತದೆ. ಸುಖ, ಶಾಂತಿ, ಮುಕ್ತಿಯನ್ನು ಪರಮಾತ್ಮ ಮಾತ್ರ ನೀಡಬಲ್ಲ. ಸೃಷ್ಟಿಯ ಪರಿವರ್ತನೆ ಕೆಲಸ ಪರಮಾತ್ಮನದ್ದಾದರೆ ಅದಕ್ಕೆ ಈಶ್ವರೀಯ ವಿಶ್ವವಿದ್ಯಾಲಯ ಸಹಯೋಗ ನೀಡುತ್ತಿದೆ. ನಾವು ಅನೇಕತೆಯಲ್ಲಿ ಏಕತೆ ಕಾಣಬೇಕೆ ಹೊರತು, ಏಕತೆಯಲ್ಲಿ ಅನೇಕತೆ ಕಾಣಬಾರದು. ಸಚ್ಚಾರಿತ್ರ್ಯ ರಾಜಯೋಗದಿಂದ ಪರಮಾತ್ಮನನ್ನು ಕಾಣಬಹುದಾಗಿದ್ದು, ಜಾತಿ, ಮತ, ಬೇಧ-ಭಾವಗಳಿಲ್ಲದೇ ಎಲ್ಲರೂ ರಾಜಯೋಗ ಕಲಿಯಲು ಇಲ್ಲಿಗೆ ಬರಬೇಕು ಎಂದರು.

ಬಿಕೆ ವೀಣಕ್ಕ ಮಾತನಾಡಿ ನಮ್ಮಲ್ಲಿ ಆಚರಿಸುವ ಹಬ್ಬಗಳಲ್ಲಿ ಮಹಾಶಿವರಾತ್ರಿ ವಿಶೇಷ ಮಹತ್ವ ಪಡೆದಿದೆ. ಶಿವರಾತ್ರಿ ಹಬ್ಬದ ಆಚರಣೆಯ ಜೊತೆಗೆ ಅದರ ಆಧ್ಯಾತ್ಮಿಕ ರಹಸ್ಯವನ್ನು ಅರಿಯುವ ಸಮಯವಿದು. ಅಜ್ಞಾನದ ಅಂಧಕಾರ ಹಾಗೂ ಅಧರ್ಮದಿಂದ ತುಂಬಿದ ಕತ್ತಲನ್ನು ಸೂಚಿಸುತ್ತದೆ. ವರ್ತಮಾನ ಸಮಯದಲ್ಲಿ ನೈತಿಕ, ಮಾನವೀಯ ಹಾಗೂ ಆಧ್ಯಾತ್ಮಿಕ ಮೌಲ್ಯಗಳ ಘೋರ ಅವಹೇಳನೆಯಾಗುತ್ತಿದೆ ಎಂದರು.

ಹರಿಹರದ ಶಿವದೇವಕ್ಕ ಮಾತನಾಡಿ, ಆಧ್ಯಾತ್ಮ ನಮ್ಮ ಒಳಗಿದೆ. ಪರಮಾತ್ಮ ನಮಗೆ ಎಲ್ಲಾ ಶಕ್ತಿ ನೀಡಿದ್ದಾನೆ. ಅವುಗಳನ್ನು ನಾವು ಜಾಗೃತಗೊಳಿಸಬೇಕಿದೆ. ಮನಸ್ಸಿನಿಂದ ಪರಮಾತ್ಮನ ಬಳಿ ಇರುವುದರಿಂದ ಕೆಟ್ಟ ವಿಚಾರ ಬಿಡುವುದರಿಂದ ದೇವರನ್ನು ಕಾಣಬಹುದು. ಸಾತ್ವಿಕ ಆಹಾರ ಸೇವನೆಯಿಂದ ಸಾತ್ವಿಕ ವಿಚಾರಗಳು ನಮ್ಮಲ್ಲಿ ಬರುತ್ತವೆ. ಈ ಎಲ್ಲಾ ಅಂಶಗಳು ಇಲ್ಲಿ ಕಲಿಯಬಹುದು ಎಂದರು.

ಹಾನಗಲ್‌ನ ಶೈಲಕ್ಕ ಮಾತನಾಡಿ, ಶಿವಭಕ್ತರಿಗೆ ನಿತ್ಯವೂ ಶಿವರಾತ್ರಿ. ನಕಾರಾತ್ಮಕ ಬಿಟ್ಟು ಸಕಾರಾತ್ಮಕ ವಿಚಾರಗಳನ್ನು ಬೆಳೆಸಿಕೊಳ್ಳಬೇಕು ಎಂದರು. ಹರಪನಹಳ್ಳಿಯ ಸುಮಂಗಲಕ್ಕ ಮಾತನಾಡಿ, 89 ವರ್ಷಗಳಿಂದ ಮಹಾಶಿವರಾತ್ರಿ ಕಾರ್ಯಕ್ರಮ ನಡೆಸಿಕೊಂಡು ಬರಲಾಗುತ್ತಿದೆ. ಮನಸ್ಸಿನಲ್ಲಿರುವ ನಕಾರಾತ್ಮಕ ವಿಚಾರಗಳನ್ನು ಸ್ಮೃತಿ ಪಟಲದಿಂದ ಹೊರ ಹಾಕಬೇಕು. ಹಳೆಯ ಪ್ರಸಂಗಗಳನ್ನು ಮರೆತು ಜ್ಞಾನ ನೀಡುವ ವಿಚಾರಗಳನ್ನು ತುಂಬಿಕೊಳ್ಳಬೇಕು. ಜೀವಾತ್ಮರಾದ ನಾವು ಯೋಗ, ಧ್ಯಾನವನ್ನು ಅಭ್ಯಾಸ ಮಾಡಿಕೊಳ್ಳಬೇಕು ಎಂದರು.

ಅನುಸೂಯಕ್ಕ ಹರಿಹರ, ಸೌಭಾಗ್ಯಕ್ಕ ಹಿರೇಕೆರೂರು, ವಂದನಕ್ಕ ನ್ಯಾಮತಿ, ಗೌರಿ ನ್ಯಾಮತಿ ಮತ್ತು ಸಮಾಜ ಸೇವಕಿ ಸರಸ್ವತಿ ನಾವುಡ ಮತ್ತಿತರರಿದ್ದರು.

## ಕಸ್ತೂರಿ ಸಿರಿಗನ್ನಡ ವೇದಿಕೆಯಿಂದ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಜ್ಞಾನ ವಿಭೂಷಣ ರಾಷ್ಟ್ರ ಪ್ರಶಸ್ತಿ ಪ್ರಧಾನ



**ದಾವಣಗೆರೆ:** ಬೆಳಗಾವಿಯ ಕಸ್ತೂರಿ ಸಿರಿಗನ್ನಡ ವೇದಿಕೆಯಿಂದ ಮಹಾನ್ ಆಧ್ಯಾತ್ಮಿಕ ನಾಯಕ, ತತ್ವಜ್ಞಾನಿ, ಚಿಂತಕ ಹಾಗೂ ವಿಶ್ವ ಸನ್ಯಾಸಿ ಸ್ವಾಮಿ ವಿವೇಕಾನಂದರ 182ನೇ ಜನ್ಮದಿನಾಚರಣೆ ನಿಮಿತ್ಯ ಫೆಬ್ರವರಿ 6 ರಂದು ಅಂತರ್ಜಾಲ ತಾಣದಲ್ಲಿ ನಡೆದ ಸಮಾರಂಭದಲ್ಲಿ ಕನ್ನಡ ನಾಡು, ನೆಲ, ಜಲ, ಸಂಸ್ಕೃತಿ, ಯಕ್ಷಗಾನ ಮುಂತಾದ ವಿವಿಧ ಕ್ಷೇತ್ರಗಳಲ್ಲಿ ಅನವರತವಾಗಿ ಕಠಿಣ ಪರಿಶ್ರಮದಿಂದ ಕಳೆದ 4 ದಶಕಗಳಿಂದ ಸೇವೆ ಸಾಧನೆ ಮಾಡುತ್ತಿದ್ದ ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ, ದಾವಣಗೆರೆಯ ಯಕ್ಷಗಾನ ರಾಯಭಾರಿ ಎಂದೇ ಪ್ರಖ್ಯಾತರಾದ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ರಾಷ್ಟ್ರ ಮಟ್ಟದ ಜ್ಞಾನ ವಿಭೂಷಣ ಪ್ರಶಸ್ತಿ ಪ್ರಧಾನ ಮಾಡಲಾಯಿತು ಎಂದು ಕಸ್ತೂರಿ ಸಿರಿಗನ್ನಡ ವೇದಿಕೆಯ ಬೆಳಗಾವಿ ಜಿಲ್ಲಾಧ್ಯಕ್ಷರಾದ ಪ್ರೊ|| ಎಲ್. ಹೆಚ್.ಪೆಂಡಾರಿ ತಿಳಿಸಿದ್ದಾರೆ.

ಕಲಾಕುಂಚ, ಯಕ್ಷರಂಗ, ಸಿನಿಮಾಸಿರಿ, ಶ್ರೀ ಗಾಯಿತ್ರಿ ಪರಿವಾರ, ಕನ್ನಡ ಸಾಹಿತ್ಯ ಪರಿಷತ್, ಕರ್ನಾಟಕ ಸಗಮ ಸಂಗೀತ ಪರಿಷತ್, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಗೌಡಸಾರಸ್ವತ ಸಮಾಜ ಸೇರಿದಂತೆ ವಿವಿಧ ಸಂಘಟನೆಗಳ ಸರ್ವ ಸದಸ್ಯರು, ಪದಾಧಿಕಾರಿಗಳು ಅಭಿಮಾನದಿಂದ ಅಭಿನಂದನೆ ಸಲ್ಲಿಸಿದ್ದಾರೆ.

## ಶ್ರೀರೇಣುಕಾಚಾರ್ಯ ಜಯಂತಿ

**ದಾವಣಗೆರೆ :** ಜಿಲ್ಲಾಡಳಿತ ವತಿಯಿಂದ ಮಾರ್ಚ್ 12 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಡಳಿತ ಭವನದಲ್ಲಿ ಶ್ರೀರೇಣುಕಾಚಾರ್ಯ ಜಯಂತಿಯನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

## ಹೊರಗುತ್ತಿಗೆ ಆಧಾರದ ಮೇಲೆ ಮಾಜಿ ಸೈನಿಕರಿಗೆ ಉದ್ಯೋಗಾವಕಾಶ

**ದಾವಣಗೆರೆ :** ಭೂ ಸೇನೆಯಿಂದ ಅಕ್ಟೋಬರ್ 2022ರ ನಂತರ ನಿವೃತ್ತರಾಗಿರುವ ಜೆ.ಸಿ.ಓ ಹಾಗೂ ಹವಾಲ್ದಾರ್ ಬ್ಯಾಂಕ್ ಹೊರಗುತ್ತಿಗೆ ಆಧಾರದ ಮೇಲೆ ಮಾಜಿ ಸೈನಿಕರನ್ನು ನೇಮಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಬೆಂಗಳೂರು, ಮೈಸೂರು. ಮಂಗಳೂರು, ಬೆಳಗಾವಿ, ರಾಯಚೂರು ಮತ್ತು ಶಿವಮೊಗ್ಗದ ಎನ್.ಸಿ.ಸಿ. ಬೆಟಾಲಿಯನ್ಗಳಿಗೆ ಹೆಚ್ಚುವರಿ ತರಬೇತಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವ ಉದ್ದೇಶದಿಂದ ಸೈನ್ಯದಲ್ಲಿ ದುರ್ನಡತೆ ಮತ್ತು ಯಾವುದೇ ವೈದ್ಯಕೀಯ ಕಾರಣಗಳಿಂದ ಸೈನ್ಯದಿಂದ ಬಿಡುಗಡೆಗೊಂಡಿರದ ಆಸಕ್ತ ಮಾಜಿ ಸೈನಿಕರು ಮಾರ್ಚ್ 13 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಇಮೇಲ್: jtdirpc.kardte@nccindia.nic.in ಹಾಗೂ ಅರ್ಜಿ ಸಲ್ಲಿಸಲು https://nis.bisag-n.gov.in/nis/downloads-public ಮತ್ತು ಕೆಎಸ್ಸಿಎಂಎಫ್ ಬಿಲ್ಡಿಂಗ್, 4ನೇ ಮಹಡಿ ನಂ-8, ಕನ್ನಿಂಗ್ಹ್ಯಾಮ್ ರಸ್ತೆ, ಬೆಂಗಳೂರು-560001 ಸಂಪರ್ಕಿಸಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರಾದ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

## ಫೋಟೋಗ್ರಾಫರ್ಸ್ ಯೂತ್ ಅಸೋಸಿಯೇಷನ್ ನಿಂದ ಮಹಿಳಾ ನಿಲಯಕ್ಕೆ ಕೊಡುಗೆ



**ದಾವಣಗೆರೆ:** ಫೋಟೋಗ್ರಾಫರ್ಸ್ ಯೂತ್ ವೆಲ್ ಫೇರ್ ಅಸೋಸಿಯೇಷನ್ ವತಿಯಿಂದ ಮಹಿಳಾ ದಿನಾಚರಣೆ ಅಂಗವಾಗಿ ರಾಜ್ಯ ಮಹಿಳಾ ನಿಲಯಕ್ಕೆ ಒಂದು ತಿಂಗಳ ಪಡಿತರಕ್ಕಾಗಿ ಒಂಭತ್ತು ಸಾವಿರದ ನಾಲ್ಕುನೂರ ಇಪ್ಪತ್ತನಾಲ್ಕು ರೂಪಾಯಿಗಳ ಚೆಕ್ ನೀಡಲಾಯಿತು.

ಈ ಸಂದರ್ಭದಲ್ಲಿ ಅಧ್ಯಕ್ಷ ಶ್ರೀನಾಥ್ ಪಿ. ಅಗಡಿ, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಕಾರ್ಯದರ್ಶಿ ದುಗ್ಗಪ್ಪ, ಜಿಲ್ಲಾ ಕಾರ್ಯದರ್ಶಿ ಹೆಚ್.ಕೆ. ಚನ್ನಬಸವರಾಜು, ಸಹಕಾರ್ಯದರ್ಶಿ ಅರುಣ ಪಾಟೀಲ್, ಸಂಘಟನಾ ಕಾರ್ಯದರ್ಶಿ ಕಿರಣಕುಮಾರ್, ಹಾಜರಿದ್ದರು.

## ಗಾಯಕಿ ರುದ್ರಾಕ್ಷಿ ಬಾಯಿಗೆ ವೀರ ವನಿತೆ ಪ್ರಶಸ್ತಿ ಪ್ರದಾನ

**ದಾವಣಗೆರೆ:** ಬೆಂಗಳೂರಿನ ಸದಾಶಿವ ನಗರದಲ್ಲಿ ಚಿತ್ರಸಂತೆ ಸಂಸ್ಥೆ ವತಿಯಿಂದ ನಡೆದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ದಾವಣಗೆರೆಯ ಹಾಡುಗಾರ್ತಿ, ಸಂಗೀತ ಶಿಕ್ಷಕಿ ಸಿ.ಕೆ. ರುದ್ರಾಕ್ಷಿ ಬಾಯಿಯವರ ಸಂಗೀತ ಸೇವೆಗಾಗಿ ವೀರ ವನಿತೆ ಪ್ರಶಸ್ತಿ-2025 ನೀಡಿ ಗೌರವಿಸಲಾಯಿತು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕನ್ನಡ ಚಲನಚಿತ್ರ ರಂಗದ ಖ್ಯಾತ ನಟಿ ಡಾ. ಪ್ರಿಯಾಂಕಾ ಉಪೇಂದ್ರ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಿಯಾಂಕಾ ಮಹಿಳೆಯರು ಎಲ್ಲ ರಂಗದಲ್ಲೂ ತಮ್ಮನ್ನು ತಾವು ತೊಡಗಿಸಿಕೊಂಡು ತಮ್ಮದೇ ಆದ ಕ್ಷೇತ್ರಗಳಲ್ಲಿ ಅನುಪಮ ಸಾಧನೆಯನ್ನು ಮಾಡುತ್ತಿದ್ದಾರೆ ಅವರ ಸಾಧನೆಗೆ ಕುಟುಂಬದ ಸದಸ್ಯರ ಪ್ರೋತ್ಸಾಹ ಅಗತ್ಯವಿದೆ




ಅಲ್ಲದೆ ನಾವು ಕೂಡ ತಂದೆ ತಾಯಿ ಅತ್ತೆ ಮಾವ ಅಣ್ಣ ತಮ್ಮ ಗಂಡ ಮಕ್ಕಳೊಂದಿಗೆ ಪ್ರೀತಿ ಮತ್ತು ಸಂಸ್ಕಾರ ಸಮಯವನ್ನು ಮೀಸಲಿಟ್ಟು ನಮ್ಮ ಕಾರ್ಯ ಸಾಧನೆಯನ್ನು ಮಾಡಬೇಕು ಎಂದು ತಿಳಿಸಿದರು.

## ಕಲಾಕುಂಚದಿಂದ ಯುಗಾದಿ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಕವನ ಸ್ಪರ್ಧೆಗೆ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ ಯುಗಾದಿ ಹಬ್ಬದ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಕವನ ಬರೆಯುವ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದು ತೀರ್ಪುಗಾರರಲ್ಲಿ ಒಬ್ಬರಾದ ಹಿರಿಯ ಸಾಹಿತಿ, ಕವಯತ್ರಿ ಶ್ರೀಮತಿ ಕುಸುಮಾ ಲೋಕೇಶ್ ತಿಳಿಸಿದ್ದಾರೆ. ಕವನ ಬರೆಯುವ ಆಸಕ್ತರು ಯುಗಾದಿ ಬಗ್ಗೆ ಕವನ ಬರೆದು ತಮ್ಮ ಪೂರ್ಣ ವಿಳಾಸ ವ್ಯಾಟ್ಸಪ್ ಸಂಖ್ಯೆಯೊಂದಿಗೆ 7022002518 ಈ ವ್ಯಾಟ್ಸಪ್‌ಗೆ ದಿನಾಂಕ 31-3-2025ರೊಳಗೆ ಕಳಿಸಬೇಕೆಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ಪ್ರಕಟಿಸಿದ್ದಾರೆ. ಸ್ಪರ್ಧೆಯ ನಿಯಮದಂತೆ ಯಾವುದೇ ಸಭೆ, ಸಮಾರಂಭ ಇಲ್ಲದೇ ಬಹುಮಾನ ವಿಜೇತರ ವ್ಯಾಟ್ಸಪ್‌ಗೆ ಅವರವರ ಫಲಿತಾಂಶ ಅಭಿನಂದನಾ ಪತ್ರ ಕಳಿಸಲಾಗುವುದು. ಹಿರಿಯ, ಕಿರಿಯ, ಕವಿ, ಕವಯತ್ರಿಯರು ಯಾವುದೇ ವಯಸ್ಸಿನ ಮಿತಿ ಇಲ್ಲದೇ ಹೆಚ್ಚಿನ ಸಂಖ್ಯೆಯಲ್ಲಿ ಈ ರಾಜ್ಯ ಮಟ್ಟದ ಉಚಿತ ಸ್ಪರ್ಧೆಯಲ್ಲಿ ಭಾಗವಹಿಸಬೇಕಾಗಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಮೇ 7 ರಿಂದ ಅಂತರಾಷ್ಟ್ರೀಯ ಕನ್ನಡ ಸಮ್ಮೇಳನ-ವಸ್ತುಪ್ರದರ್ಶನ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ವಿಶ್ವ ಕನ್ನಡಿಗರ ಟ್ರಸ್ಟ್ ಹಾಗೂ ವಿಕಾಸ ಎಕ್ಸ್‌ಪೋ ಜಂಟಿಯಾಗಿ ಮೇ 7ರಿಂದ 12ರವರೆಗೆ ದಾವಣಗೆರೆ ನಗರದ ಜಿ.ಎಂ.ಐ.ಟಿ. ಕಾಲೇಜಿನ ಪಕ್ಕದಲ್ಲಿರುವ ಮೈದಾನದಲ್ಲಿ 'ಅಂತರಾಷ್ಟ್ರೀಯ ಕನ್ನಡ ಸಮ್ಮೇಳನ' ಹಾಗೂ 'ಅಂತರಾಷ್ಟ್ರೀಯ ವಸ್ತು ಪ್ರದರ್ಶನ' ಹಮ್ಮಿಕೊಳ್ಳಲಾಗಿದೆ ಎಂದು ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಒಟ್ಟು ಆರು ದಿನಗಳ ಕಾಲ ಈ ಸಮ್ಮೇಳನದಲ್ಲಿ ಪ್ರತಿ ದಿನವೂ ಒಂದೊಂದು ವಿಶಿಷ್ಟ ಸಮ್ಮೇಳನ ನಡೆಯಲಿದೆ. ಮೇ 7ರಂದು ಸಾಹಿತ್ಯ ಸಮ್ಮೇಳನ, ಮೇ 8ರಂದು ಯೂಟ್ಯೂಬರ್ಸ್ ಮೇಳ, ಮೇ 9 ರಂದು ಶಿಕ್ಷಣ ಸಮ್ಮೇಳನ. ಮೇ 10ರಂದು ಸಿನಿ ಸಾಹಿತ್ಯ - ಕಲಾವಿದರ ಸಮ್ಮೇಳನ, ಮೇ 11ರಂದು ಕೃಷಿ ಮೇಳ ಹಾಗೂ ಮೇ 12 ರಂದು ಉದ್ಯೋಗ ಮೇಳ ನಡೆಯಲಿದೆ ಎಂದರು.

ನವಲೇಖಕರ ಮೇಳದ ಉದ್ದೇಶ ಕನ್ನಡ ಸಾಹಿತ್ಯ ಲೋಕಕ್ಕೆ ಹೊಸ ಹೊಸ ಲೇಖಕರನ್ನು ಪರಿಚಯಿಸಬೇಕು




ಎಂಬುದ್ದಾಗಿರುತ್ತದೆ. 5ಕ್ಕಿಂತ ಕಡಿಮೆ ಪುಸ್ತಕಗಳನ್ನು ರಚಿಸಿರುವವರನ್ನು ನವ ಲೇಖಕರು ಎಂದು ಪರಿಗಣಿಸಲಾಗುತ್ತದೆ. ಅವರಿಗೆ ವೇದಿಕೆಯಲ್ಲಿ ಎರಡು ನಿಮಿಷಗಳ ಕಾಲ ತಮ್ಮ ಒಂದು ಪುಸ್ತಕದ ಪರಿಚಯ ಮಾಡಿಕೊಳ್ಳಲು ಅವಕಾಶ ನೀಡಲಾಗುತ್ತದೆ. ಪುಸ್ತಕ ರಚನೆ ಹಾಗೂ ಪ್ರಕಾಶನ ಮಾಡುವುದರ ಬಗ್ಗೆಯೂ ವಿಚಾರಗೋಷ್ಠಿ ಮತ್ತು ತರಬೇತಿ ಶಿಬಿರಗಳನ್ನು ನಡೆಸಲಾಗುತ್ತದೆ. ಜೊತೆಗೆ ಪ್ರಕಾಶಕರ ಮೇಳವೂ ನಡೆಯುವುದರಿಂದ ಪ್ರಕಾಶಕರು ಹಾಗೂ ವಿತರಕರ ಬಗ್ಗೆಯೂ ಸಮಾಜಕ್ಕೆ ತಿಳಿಸಿಕೊಡುವ ಕೆಲಸ ನಡೆಯುತ್ತದೆ ಎಂದರು.

ಪುಸ್ತಕ ಮಳಿಗೆಗಳಲ್ಲಿ ನವ ಲೇಖಕರ ಗರಿಷ್ಟ 5 ಪುಸ್ತಕಗಳನ್ನು ಪ್ರದರ್ಶನಕ್ಕೆ ಇಡಲು ಅವಕಾಶ ಮ ಾ ಡಿ ಕ ೊ ಡ ಲ ಾ ಗ ು ತ ್ ದ ೆ. ನವಲೇಖಕರು ತಮ್ಮ ವಿವರಗೆಳನ್ನು ಕನ್ನಡಸಮ್ಮೇಳನ ಎಂಬ ವೆಬ್‌ಸೈಟಿನಲ್ಲಿ ನೊಂದಾಯಿಸಿಕೊಳ್ಳಲು ಅವಕಾಶವಿರುತದೆ. ಶೀಘ್ರದಲ್ಲಿಯೇ ವೆಬ್ ಸೈಟಿನ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಈ ಸಮ್ಮೇಳನದಲ್ಲಿಯೇ ಶಿಕ್ಷಣ ಸಮ್ಮೇಳನವನ್ನೂ ಹಮ್ಮಿಕೊಳ್ಳಲಾಗಿದ್ದು ಶಿಕ್ಷಕರಾಗಿ ವಿಶಿಷ್ಟ ಸಾಧನೆಗೈದ ಶಿಕ್ಷಕರಿಗೆ ಸನ್ಮಾನಿಸುವುದರ ಜೊತೆಗೆ ಮಾದರಿ ಶಿಕ್ಷಕರು ಹೇಗಿರಬೇಕು ಎಂಬ ಬಗ್ಗೆಯೂ ವಿಚಾರಗೋಷ್ಠಿಗಳನ್ನು ನ ಡ ೆ ಸ ಲ ಾ ಗ ು ವ ು ದ ು.

ಸಾಹಿತ್ಯ ಎಂದರೆ ಕೇವಲ ಪುಸ್ತಕ ಮಾತ್ರವಲ್ಲದೆ, ಜಾನಪದ ಹಾಗೂ ಸಿನಿಮಾಗಳಿಗೆ ಕಥೆ, ಚಿತ್ರಕಥೆ, ಸಂಭಾಷಣೆ, ಹಾಡುಗಳನ್ನು ಬರೆಯುವವರೂ ಸಹ ಸಾಹಿತಿಗಳೇ ಆಗಿರುವುದರಿಂದ ಅಂತಹವರಿಗೂ ಒಂದು ವೇದಿಕೆಯನ್ನು ಸೃಷ್ಟಿಸಲಾಗುವುದು. ಅದಕ್ಕಾಗಿಯೇ ಸಿನಿ ಸಾಹಿತ್ಯ ಹಾಗೂ ಕಲಾವಿದರ ಸಮ್ಮೇಳನವನ್ನೂ ಹಮ್ಮಿಕೊಳ್ಳಲಾಗಿದೆ. ಜಾನಪದ, ಚಿತ್ರಕಲೆ ಎಲ್ಲವೂ ಸಹ ಸಾಹಿತ್ಯದ ಅವಿಭಾಜ್ಯ ಅಂಗಗಳು. ಅದಕ್ಕಾಗಿ ಅದೆಲ್ಲವುಗಳನ್ನು ಒಳಗೊಂಡ ಈ ಸಮ್ಮೇಳನ ವಿಶ್ವದಲ್ಲಿಯೇ ಒಂದು ವಿಶಿಷ್ಟ ಕಾರ್ಯಕ್ರಮವಾಗಲಿದೆ ಎಂದು ಹೇಳಿದರು.

ಮಹಿಳಾ ಸಾಹಿತ್ಯ ಮೇಳ, ಮಕ್ಕಳ ಸಾಹಿತ್ಯ ಮೇಳ, ದಲಿತ ಸಾಹಿತ್ಯ ಮೇಳ, ನವಲೇಖಕರ ಮೇಳ, ಹಿರಿಯ ಸಾಹಿತಿಗಳ ಮೇಳ ಸೇರಿದಂತೆ ಸಾಹಿತ್ಯಕ್ಕೆ ಪೂರಕವಾದ ಸಿನಿಮಾ, ರಂಗಭೂಮಿ, ಜಾನಪದ, ಚಿತ್ರಕಲೆ, ಇತರ ಎಲ್ಲಾ ಕಲಾವಿದರು ಹಾಗೂ ಸಾಹಿತಿಗಳನ್ನು ಗುರುತಿಸಿ ವೇದಿಕೆ ಸೃಷ್ಟಿಸುವ ಕೆಲಸ ಮಾಡಲಾಗುತ್ತಿದೆ. ಇದೊಂದು ವಿಶಿಷ್ಟ ಸಮ್ಮೇಳನವಾಗಿದೆ ಎಂದರು. ಪುಸಕ ಮಳಿಗೆಗಳು, ಅಂತರಾಷ್ಟ್ರೀಯ ವಸ್ತು ಪ್ರದರ್ಶನ ಮಳಿಗೆಗಳು, ಕೃಷಿ ಮಳಿಗೆಗಳು ಹಾಗೂ ಶಾಲಾ ಕಾಲೇಜುಗಳು ಸಹ ಈ ಪ್ರದರ್ಶನ ಮಳಿಗೆಗಳಲ್ಲಿ ಭಾಗವಹಿಸಲಿವೆ ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ವಿಶ್ವ ಕನ್ನಡಿಗರ ಟ್ರಸ್ಟ್ ಅಧ್ಯಕ್ಷ ಗುರುರಾಜ್ ಹೊಸಕೋಟೆ, ವಿಕಾಸ ಎಕ್ಸ್ ಪೋ ನಿರ್ದೇಶಕ ಆನಂದ್ ಗೌಡ, ದಾವಣಗೆರೆ ತಾಲ್ಲೂಕು ಕಸಾಪ ಅಧ್ಯಕ್ಷೆ ಸುಮತಿ ಜಯಪ್ಪ, ಗೌರವ ಕಾರ್ಯದರ್ಶಿ ಬಿ. ದಿಳ್ಯಪ್ಪ, ಪದಾಧಿಕಾರಿಗಳಾದ ರುದ್ರಾಕ್ಷಿ ಬಾಯಿ, ಜಿಗಳಿ ಪ್ರಕಾಶ್, ಷಡಾಕ್ಷರಿ ಎಂ. ಬೇತೂರು, ಎಸ್. ವಾಣಿ, ತಿಪ್ಪೇಸ್ವಾಮಿ, ಲೋಕೇಶ್ ಉಪಸ್ಥಿತರಿದ್ದರು.

# ಸ್ವಾಭಿಮಾನಿ ಕಲಾವಿದರಿಂದ ರಂಗಾಯಣ ಕಾರ್ಯಕ್ರಮಗಳ ಬಹಿಷ್ಕಾರ: ಎ. ಭದ್ರಪ್ಪ

**ದಾವಣಗೆರೆ:** ದಾವಣಗೆರೆ ವೃತ್ತಿ ರಂಗಾಯಣದ ನಿರ್ದೇಶಕರು ಇದೇ 15,16 ಹಾಗೂ 17 ರಂದು ನಡೆಯಲಿರುವ ವೃತ್ತಿ ರಂಗೋತ್ಸವಕ್ಕೆ ಸ್ಥಳೀಯ ನಾಟಕ ಕಂಪನಿಗಳಿದ್ದರೂ ಅದನ್ನು ಪರಿಗಣಿಸದೆ, ಅವಮಾನಿಸಿದ್ದು, ರಂಗಾಯಣದ ಮುಂದಿನ ಯಾವುದೇ ಕಾರ್ಯಕ್ರಮಗಳಲ್ಲಿ ಸ್ವಾಭಿಮಾನಿ ಕಲಾವಿದರು ಭಾಗವಹಿಸದೆ, ಬಹಿಷ್ಕರಿಸುವುದಾಗಿ ರಾಜ್ಯ ವೃತ್ತಿ ರಂಗಭೂಮಿ ಕಲಾವಿದರ ಸಂಘದ ಅಧ್ಯಕ್ಷ ಎ. ಭದ್ರಪ್ಪ ತಿಳಿಸಿದರು.

ಸೋಮವಾರ ದಾವಣಗೆರೆ ಜಿಲ್ಲಾ ವರದಿಗಾರರು ಕೂಟದಲ್ಲಿ ರಾಜ್ಯ ವೃತ್ತಿ ರಂಗಭೂಮಿ ಕಲಾವಿದರ ಸಂಘ ಮತ್ತು ಕರ್ನಾಟಕ ರಾಜ್ಯ ರಂಗಭೂಮಿ ಕಲಾವಿದರ ಒಕ್ಕೂಟ ಇವರ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.




ರಂಗಾಯಣದ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ಅವರು ಕಲಾವಿದರಲ್ಲಿ ತಾರತಮ್ಯ ತಮ್ಮ ತಾಳಕ್ಕೆ ತಕ್ಕಂತೆ ಕುಣಿಯುವ ಕೆಲವೇ ಕೆಲವರಿಗೆ ಆದ್ಯತೆ ನೀಡುತ್ತಿದ್ದು, ಅವರ ಕಾರ್ಯವೈಖರಿಯನ್ನು ಪ್ರಶ್ನಿಸುವವರನ್ನು ದೂರ ಇಡುತ್ತಾರೆ. ಇತ್ತೀಚೆಗೆ ನಡೆದ ರಂಗಾಯಣದ ರಾಷ್ಟ್ರೀಯ ವೃತ್ತಿ ರಂಗೋತ್ಸವದ ಪೂರ್ವಭಾವಿ ಸಭೆಯಲ್ಲಿ ಎಲ್ಲಾ ಕಾರ್ಯಕ್ರಮದ ಸಿದ್ಧತೆಯನ್ನು ಮೊದಲೇ ನಿರ್ಧರಿಸಿ ನಾಮಕಾವಸ್ಥೆ ಸಭೆ ನಡೆಸಿದ್ದಾರೆ ಎಂದು ದೂರಿದರು.

ರಂಗೋತ್ಸವದಲ್ಲಿ ದಾವಣಗೆರೆಯ ವೃತ್ತಿ ರಂಗ ಕಲಾವಿದರಿಗೆ ಅವಕಾಶ ಕೇಳಿದ್ದಕ್ಕೆ ನೀವು ಬರೀ ಹಳೆಯ ನಾಟಕಗಳನ್ನು ಆಡುತ್ತೀರಿ. ನಿಮ್ಮ ನಾಟಕದ ಗುಣಮಟ್ಟ ಇರುವುದಿಲ್ಲ ಎಂದು ನೇರವಾಗಿ ಹೇಳಿದರು. ದಾವಣಗೆರೆಯ ಕೆ.ಬಿ.ಆರ್.ಡ್ರಾಮಾ ಕಂಪನಿ ಮತ್ತು ಜಯಲಕ್ಷ್ಮೀ ನಾಟಕ ಸಂಘ, ಇನ್ನೂ ಜೀವಂತವಾಗಿವೆ. ಹೊಸ ನಾಟಕಗಳನ್ನು ಮಾಡುವುದಿಲ್ಲ ಎಂದು ಹೇಳುವ ನಿರ್ದೇಶಕರು, ತಾವೇ ಇತ್ತೀಚೆಗೆ ನಡೆಸಿದ ಹೊಸ ನಾಟಕಗಳ ರಚನಾ ಶಿಬಿರದಿಂದ ಹೊಸ ನಾಟಕವನ್ನು ಕೊಟ್ಟು ಸ್ಥಳೀಯ ವೃತ್ತಿ ಕಲಾವಿದರಿಂದ ಪ್ರದರ್ಶನ ಮಾಡಬಹುದಾಗಿತ್ತು ಎಂದರು. ಈ ಹೇಳಿಕೆಯಿಂದ ದಾವಣಗೆರೆಯ ವೃತ್ತಿ ಕಲಾವಿದರ ಸ್ವಾಭಿಮಾನಕ್ಕೆ ಧಕ್ಕೆ ತಂದಿದ್ದಾರೆ. ರಂಗಾಯಣದ ವತಿಯಿಂದ ಮುಂದಿನ ದಿನಗಳಲ್ಲಿ ಯಾವುದೇ ಕಾರ್ಯಕ್ರಮಗಳನ್ನು ಆಯೋಜಿಸಿದರೆ, ಅಂತಹ ಕಾರ್ಯಕ್ರಮಗಳನ್ನು ಸ್ವಾಭಿಮಾನಿ ಕಲಾವಿದರು ಬಹಿಷ್ಕರಿಸುತ್ತೇವೆ ಎಂದು ಹೇಳಿದರು. ಕಲಾವಿದ ಹಾಗೂ ಪತ್ರಕರ್ತ ಅಹಮ್ಮದ್ ಶರೀಫ್ ಮಾತನಾಡಿ, ವೃತ್ತಿ ರಂಗಭೂಮಿಗೆ ಸಂಬಂಧವಿಲ್ಲದ ಶ್ರೀಮಲ್ಲಿಕಾರ್ಜುನ ಕಡಕೋಳರವರನ್ನು ತಕ್ಷಣ ಬದಲಿಸಿ ಅರ್ಹ ಮತ್ತು ವೃತ್ತಿ ರಂಗಭೂಮಿಯ ಅನುಭವ ಇರುವ ವ್ಯಕ್ತಿಯನ್ನು ನೇಮಕ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ್ ತಂಗಡಿಯವರಿಗೆ ಫೋನ್ ಮುಖಾಂತರ ಮತ್ತು ಬರವಣಿಗೆಯ ಮುಖಾಂತರ ಒತ್ತಾಯಿಸುವುದಾಗಿ ತಿಳಿಸಿದರು. ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತೆ ಸಾವಿತ್ರಿ ರಿತ್ತಿ ಮಾತನಾಡಿ, ವೃತ್ತಿ ರಂಗಭೂಮಿಯ ಕೆಲವು ಸಂಘಗಳನ್ನು ಸಂಪರ್ಕಿಸದೇ ಅವರ ಸಂಘದ ಹೆಸರುಗಳನ್ನು ಹಾಕಿಕೊಳ್ಳುವುದು ಎಷ್ಟು ಸರಿ ಎಂದು ಕಳೆದ 29 ವರ್ಷದಿಂದ ನಿರಂತರ ಚಟುವಟಿಕೆಯಲ್ಲಿರು ರಾಜ್ಯ ವೃತ್ತಿ ರಂಗಭೂಮಿ ಕಲಾವಿದರ ಸಂಘದ ಹೆಸರನ್ನು ಸ್ಮರಿಸದೇ ವೃತ್ತಿ ರಂಗಭೂಮಿಗೆ ಸಂಬಂಧವಿಲ್ಲದ ಸಂಘದ ಹೆಸರನ್ನು ಹಾಕಿದ್ದಾರೆ ಎಂದರು. ದಾವಣಗೆರೆಯ ಬಹಳಷ್ಟು ವೃತ್ತಿ ರಂಗಭೂಮಿಯ ಕಲಾವಿದರೊಂದಿಗೆ ಒಡನಾಟ ಹೊಂದಿರುವ ನಿರ್ದೇಶಕರು ಸ್ಥಳೀಯರನ್ನು ಪರಿಗಣಿಸದೇ ಕಲಾವಿದರಲ್ಲಿ ಪರಸ್ಪರ ಅಪನಂಬಿಕೆ ಹುಟ್ಟಿಸುವಂತೆ ವರ್ತಿಸುತ್ತಾರೆಂದು ಕಲಾವಿದೆ ಶಶಿಕಲಾ ಆಪಾದಿಸಿದರು.

## ಮದ್ಯ ಹಾಗೂ ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳ ಕುರಿತು ವಿಚಾರ ಸಂಕಿರಣ ಹಾಗೂ ಜಾಗೃತಿ ಕಾರ್ಯಕ್ರಮ

**ದಾವಣಗೆರೆ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 12 ರಂದು ಮಧ್ಯಾಹ್ನ 12 ಗಂಟೆಗೆ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಮದ್ಯ ಹಾಗೂ ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳ ಕುರಿತು ವಿಚಾರ ಸಂಕಿರಣ ಹಾಗೂ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಕಾರ್ಯಕ್ರಮ ಉದ್ಘಾಟಿಸುವರು. ಪ್ರಾಂಶುಪಾಲರಾದ ಡಾ; ಮಂಜಣ್ಣ ಎಂ ಅಧ್ಯಕ್ಷತೆ ವಹಿಸುವರು. ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಜಿಲ್ಲಾ ಸರ್ಜನ್ ಡಾ; ನಾಗೇಂದ್ರಪ್ಪ, ಕಾಲೇಜಿನ ಇಂಗ್ಲೀಷ್ ವಿಭಾಗದ ಮುಖ್ಯಸ್ಥರು ಹಾಗೂ ಐಕ್ಯೂಎಸಿ ಸಂಚಾಲಕ ಡಾ; ಭೀಮಪ್ಪ ಎಂ.ಪಿ, ಕನ್ನಡ ವಿಭಾಗದ ಮುಖ್ಯಸ್ಥೆ ಹಾಗೂ ಮಹಿಳಾ ಕೋಶದ ಸಂಚಾಲಕಿ ಡಾ; ಕಾವ್ಯಶ್ರೀ ಜಿ, ಗಣಿತಶಾಸ್ತ್ರ ಮುಖ್ಯಸ್ಥರು ಹಾಗೂ ರೆಡ್‌ಕ್ರಾಸ್ ಸಂಚಾಲಕರಾದ ಪ್ರೊ; ಶಿವರಾಜ್ ಎನ್, ಅಧೀಕ್ಷಕರಾದ ಶೇಷಪ್ಪ.ಟಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಮನೋವೈದ್ಯರಾದ ಡಾ; ಮರುಳಸಿದ್ದಪ್ಪ ಉಪನ್ಯಾಸ ನೀಡುವರು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ ತಿಳಿಸಿದ್ದಾರೆ.

## ಸಂಘ-ಸಂಸ್ಥೆಗಳ ನೋಂದಣಿ ನವೀಕರಿಸಲು ಸೂಚನೆ

**ಶಿವಮೊಗ್ಗ:** ಸಹಕಾರ ಇಲಾಖೆಯು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ-1960 ಕಲಂ 13 ರಂತೆ ನೋಂದಣಿಯಾದ ಪ್ರತಿಯೊಂದು ಸಂಘ-ಸಂಸ್ಥೆಗಳು ಪ್ರತಿವರ್ಷ ನವೀಕರಣಗೊಳಿಸಿಕೊಳ್ಳುವುದು ಕಡ್ಡಾಯ. ಅನೇಕ ಸಂಘ-ಸಂಸ್ಥೆಗಳು 5 ವರ್ಷಗಳಿಗೂ ಮೇಲ್ಪಟ್ಟು ನವೀಕರಿಸದೇ ಇರುವುದರಿಂದ ಇಂತಹ ಸಂಘ-ಸಂಸ್ಥೆಗಳ ಹಿತದೃಷ್ಟಿಯಿಂದ ಕೂಡಲೇ ಪ್ರತಿ ವರ್ಷಕ್ಕೆ ರೂ. 3,000/-ಗಳ ದಂಡ ಪಾವತಿಸಿ ನವೀಕರಿಸಿಕೊಳ್ಳುವುದು.

ಇಂತಹ ಸಂಘ ಸಂಸ್ಥೆಗಳು ದಿ: 31/12/2025 ರೊಳಗಾಗಿ ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಯಲ್ಲಿ ಸೂಕ್ತ ದಾಖಲೆ ಮತ್ತು ಮಾಹಿತಿಗಳೊಂದಿಗೆ ಫೈಲಿಂಗ್ ಮಾಡುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

## ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಜಿಲ್ಲಾ ಜಂಗಮ ಹಾಗೂ ಬೇಡ ಜಂಗಮ ಸಮಾಜ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಮಾ.12 ರ ಬೆಳಿಗ್ಗೆ 11 ಗಂಟೆಗೆ ಕುವೆಂಪು ರಂಗಮಂದಿರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವವನ್ನು ಆಯೋಜಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾಪ್ಪ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ತಂಗಡಗಿ ಶಿವರಾಜ್ ಸಂಗಪ್ಪ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಶಾಸಕರಾದ ಎಸ್.ಎನ್.ಚನ್ನಬಸಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರು ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ದಿ ನಿಗಮ ಹಾಗೂ ರಾಜ್ಯ ಅರಣ್ಯ ಕೈಗಾರಿಕೆ ನಿಗಮ ನಿಯಮತದ ಅಧ್ಯಕ್ಷರುಗಳು, ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಿಗಳ ಅಧ್ಯಕ್ಷರು, ಜನಪ್ರತಿಧಿನಿಗಳು, ಅಧಿಕಾರಿಗಳು ಪಾಲ್ಗೊಳ್ಳುವರು. ಬಸವೇಶ್ವರ ವಿದ್ಯಾ ಸಂಸ್ಥೆಯ ನಿವೃತ್ತ ಪ್ರಾಚಾರ್ಯರಾದ ಗುರುಸಿದ್ದ ಶಾಸ್ತ್ರಿ ಜಿ ಟಿ ಎಂ ವಿಶೇಷ ಉಪನ್ಯಾಸ ಮಾಡುವರು.

## ಪತ್ತು ಪರಿಣಿತರ ಹುದ್ದೆಗೆ ಅರ್ಜಿ ಆಹ್ವಾನ

**ದಾವಣಗೆರೆ:** ನಗರದ ಜಿಲ್ಲಾ ವಿಪತ್ತುನಿರ್ವಹಣಾ ಪ್ರಾಧಿಕಾರದಲ್ಲಿ ತೆರವಾಗಿರುವ ಜಿಲ್ಲಾ ವಿಪತ್ತು ಪರಿಣಿತರ ಹುದ್ದೆಗೆ ಒಂದು ವರ್ಷದ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ, ಅರ್ಜಿ ಸಲ್ಲಿಸಲು ಮಾರ್ಚ್ 21 ಕೊನೆಯ ದಿನವಾಗಿದೆ.

ಮಾಸಿಕ ರೂ.48400 ಗಳಂತೆ ಸಂಭಾವನೆ ನೀಡಲಾಗುತ್ತದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ವಿಜ್ಞಾನ, ಸಮಾಜ ವಿಜ್ಞಾನ, ಗ್ರಾಮೀಣಾಭಿವೃದ್ಧಿ, ಪರಿಸರ ವಿಜ್ಞಾನ, ನಿರ್ವಹಣೆಯಲ್ಲಿ ಸ್ನಾತಕೋತ್ತರ ಪದವಿ ಹೊಂದಿರಬೇಕು. ವಿಪತ್ತು ನಿರ್ವಹಣೆಯಲ್ಲಿ ಕನಿಷ್ಠ 3 ರಿಂದ 5 ವರ್ಷಗಳ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ವಿಪತ್ತು ನಿರ್ವಹಣಾ ಕಾಯ್ದೆ 2005 ಮತ್ತು ವಿವಿಧ ವಿಪತ್ತುಗಳ ಕುರಿತು ರಾಷ್ಟ್ರೀಯ ವಿಪತ್ತು ನಿರ್ವಹಣಾ ಮಾರ್ಗಸೂಚಿಗಳ ಬಗ್ಗೆ ತಿಳಿದಿರಬೇಕು. ಬಲವಾದ ಸಂವಹನ ಮತ್ತು ಪ್ರಸ್ತುತಿ ಕೌಶಲ್ಯಗಳನ್ನು ಹೊಂದಿರಬೇಕು. ಕನ್ನಡ ಮತ್ತು ಇಂಗ್ಲಿ?ʼ ಭಾ?ಗಳಲ್ಲಿ ಪರಿಣಿತರಾಗಿರಬೇಕು. ಒಖ ಆಫೀಸ್, ಸ್ಪ್ರೆಡ್ಶೀಟ್, ಕಕಖ ಮತ್ತು ಇಂಟರ್ನೆಟ್ ಅಪ್ಲಿಕೇಶನ್ಗಳ ಉತ್ತಮ ಜ್ಞಾನ ಹೊಂದಿರಬೇಕು.

ಆಸಕ್ತರು ಅರ್ಜಿಯನ್ನು ಸ್ವಯಂ-ದೃಢೀಕೃತ ಪ್ರತಿಗಳು ಸ್ವ-ವಿವರದೊಂದಿಗೆ ಉಪ ಆಯುಕ್ತರು, ವಿಪತ್ತು ನಿರ್ವಹಣಾ ಕೋಶ, ಉಪ ಆಯುಕ್ತರ ಕಚೇರಿ, ಪ್ಲಾಟ್ ಸಂಖ್ಯೆ.77, ಕರೂರ್ ಕೈಗಾರಿಕಾ ಪ್ರದೇಶ, ಹಳೆಯ ಪಿ.ಬಿ. ರಸ್ತೆ, ದಾವಣಗೆರೆ ಇಲ್ಲಿಗೆ ಇದೇ ಮಾ.21 ರೊಳಗೆ ನೊಂದಣಿ ಅಂಚೆ ಮೂಲಕ ಕಳುಹಿಸಬೇಕು.

ಹೆಚ್ಚಿನ ಮಾಹಿತಿಗಾಗಿ 9945235035 ಸಂಖ್ಯೆಗೆ ಸಂಪರ್ಕಿಸಬೇಕೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.


## ಮಕ್ಕಳ ಕಲ್ಯಾಣ ಸಮಿತಿಗೆ ನೇಮಕ, ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ದಾವಣಗೆರೆ ಜಿಲ್ಲೆಯ ಮಕ್ಕಳ ಕಲ್ಯಾಣ ಸಮಿತಿಗೆ ಅಧ್ಯಕ್ಷರು, ಸದಸ್ಯರುಗಳನ್ನು ಸರ್ಕಾರದ ಮಾನದಂಡದನ್ವಯ ನೇಮಕ ಮಾಡಲಾಗಿದ್ದು ಆಯ್ಕೆಯಾಗಿರುವ ಅಭ್ಯರ್ಥಿಗಳ ಕುರಿತು ಆಕ್ಷೇಪಣೆಗಳಿದ್ದಲ್ಲಿ ಮಾರ್ಚ್ 13 ರೊಳಗೆ ಲಿಖಿತ ಅರ್ಜಿ ಸಲ್ಲಿಸಬೇಕು.

ಮಕ್ಕಳ ಕಲ್ಯಾಣ ಸಮಿತಿಗೆ ಹೊಸದಾಗಿ ಅಧ್ಯಕ್ಷರು, ಸದಸ್ಯರಾಗಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಯಾವುದೇ ರಾಜಕೀಯ, ಚಟುವಟಿಕೆಗಳಲ್ಲಿ ವ್ಯಕ್ತಿಗಳೊಂದಿಗೆ, ಪಕ್ಷಗಳೊಂದಿಗೆ ಸಂಪರ್ಕ ಹೊಂದಿರಬಾರದು.

ಆಯ್ಕೆಗೊಂಡಿರುವ ಅಭ್ಯರ್ಥಿಗಳ ವಿವರ: ಎ.ಸಿ.ರಾಘವೇಂದ್ರ ಬಿನ್ ಚಂದ್ರರೋಜಿರಾವ್ ಅಧ್ಯಕ್ಷರು, #778/10, ಹೊಂಡದ ರಸ್ತೆ, ಬೀರಲಿಂಗೇಶ್ವರ ದೇವಸ್ಥಾನದ ಹತ್ತಿರ, ದಾವಣಗೆರೆ-577001, ಮಂಜುಳಾ.ಎಂ ಕೋಂ ಮಹೇಶ್ವಿ ಸದಸ್ಯರು, #677/ಸಿಬಿಪಿ, 5 ನೇಕ್ರಾಸ್, ಭಗತ್ಸಿಂಗ್ ನಗರ, ದಾವಣಗೆರೆ-577006, ಕರಿಯಮ್ಮ.ಡಿ ಡಿ/ಓ ಲೇ.ದುರುಗಪ್ಪ, ಸದಸ್ಯರು, ಕರಿಯಮ್ಮ ದೇವಸ್ಥಾನದ ಹತ್ತಿರ, ಕೊಂಡಜ್ಜಿ ರಸ್ತೆ, ಯರಗುಂಟೆ ಗ್ರಾಮ, ದಾವಣಗೆರೆ, ನಾಗರಾಜು ನಾಯಕ್.ಎಂ #99/99 ಕೆಂಗಪ್ಪ, ಸೊಸೈಡಿ ಹತ್ತಿರ, ದುರ್ಗಾ ಬಂಕ್ ಲೇ ಔಟ್ ದಾವಣಗೆರೆ-577008, ದುರ್ಗಪ್ಪ.ಆರ್ ಬಿನ್ ರಂಗಪ್ಪ ಸದಸ್ಯರು, ನಾಗರಕಟ್ಟೆ(ವಿ) ಕಾಡಜ್ಜಿ ಪೋಸ್ಟ್, ದಾವಣಗೆರೆ-577002 ಈ ಅಭ್ಯರ್ಥಿಗಳ ಆಯ್ಕೆಯಾಗಿರುವ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ ಮಾರ್ಚ್ 13 ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಭವನ, ಟ್ರೈನ್ ಪಾರ್ಕ್, ಜೆ.ಹೆಚ್.ಪಟೇಲ್ ಬಡಾವಣೆ, ಶಾಮನೂರು ದಾವಣಗೆರೆ ಇಲ್ಲಿಗೆ ಮಾಹಿತಿ ನೀಡಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ ತಿಳಿಸಿದ್ದಾರೆ.

## ಹಳೇ ಕುಂದುವಾಡದ ಶತಾಯುಷಿ ಸೀತಮ್ಮ ನಿಧನ



**ದಾವಣಗೆರೆ :** ನಗರದ ಹಳೇ ಕುಂದುವಾಡ ನಿವಾಸಿ ಗ್ವಾರಪ್ಪರ ದಿವಂಗತ ನಿಂಗಪ್ಪ ಇವರ ಧರ್ಮಪತ್ನಿ ಶತಾಯುಷಿ ಸೀತಮ್ಮ(103) ಮಂಗಳವಾರ ಸಂಜೆ ನಿಧನರಾದರು..

ಏಳು ಜನ ಪುರುಷರು, ಏಳು ಜನ ಹೆಣ್ಣು ಮಕ್ಕಳು, ಮಕ್ಕಳು, ಗಿರಿಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ ಹೊಂದಿರುವ ಮೃತರ ಅಂತ್ಯಕ್ರಿಯೆ ಬುಧವಾರ 12 ಗಂಟೆಗೆ ಹಳೇ ಕುಂದುವಾಡ ಹಿಂದೂ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. 9740220709, 9900636628

# 90ರ ಮಿಡ್ಲ್ ಕ್ಲಾಸ್ ಫ್ಯಾಮಿಲಿ ಮನರಂಜನೆಗಳು

ಬೆಳಗ್ಗೆ ರೇಡಿಯೋ ಹಾಕಿದ್ರೆ ರಂಗರಾವ್, ಚಾಮರಾಜ್ ವಾರ್ತೆಗಳು.. ಸಂಸ್ಕೃತ ವಾರ್ತೆಯ ಇಂಪು.

ನೇಸರ ನೋಡು...ಅನ್ನೋ ಮಾರ್ನಿಂಗ್ ರಾಗ..

ರೇಡಿಯೋ ಸಿಲೋನ್ ನಲ್ಲಿ ಬರ್ತಿದ್ದ ತಮಿಳು, ಕನ್ನಡ ಹಾಡುಗಳು...

ಫಿಲ್ಮ್ ಸಾಂಗ್ ನೋಡಬೇಕಂದ್ರೆ ಶುಕ್ರವಾರ ಚಿತ್ರಮಂಜರಿಗಾಗಿ ಕಾಯಬೇಕಿತ್ತು.

ಬಾಲಿವುಡ್ ಹಾಡಿಗಾಗಿ ಭಾನುವಾರದ ರಂಗೋಲಿಗಾಗಿ ಕಾಯಬೇಕಿತ್ತು.

ಫಿಲಂ ನೋಡಬೇಕಂದ್ರೆ ಭಾನುವಾರ ಮಧ್ಯಾಹ್ನದವರೆಗೂ ಕಾಯಬೇಕಿತ್ತು...

ಒಡಿಸ್ಸಾ, ಬೆಂಗಾಲಿ.. ಯಾವ್ ಭಾಷೆದಾದ್ರೂ ನೋಡದು.

ಮುಂದಿನ ಭಾನುವಾರ ಪ್ರಸಾರವಾಗುವ ಸಿನಿಮಾ ಯಾವುದು ಅಂತ ತಿಳಿಯೋದಿಕ್ಕೆ ಚಿತ್ರಮಂಜರಿಯನ್ನು ಕೊನೆಯವರೆಗೂ ನೋಡಬೇಕಿತ್ತು.

ಮನೆಯಲ್ಲಿ ಬ್ಲಾಕ್ ಅಂಡ್ ಟಿವಿಗಾಗಿ ಅಪ್ಪನನ್ನು ಇನ್ನಿಲ್ಲದಂತೆ ಕಾಡಬೇಕಿತ್ತು.

ಟಿವಿ ಇದ್ದವರ ಮನೆಯ ಅಂಗಳದಲ್ಲಿ ಚಾತಕಪಕ್ಷಿಯಂತೆ ಕಾಯಬೇಕಿತ್ತು.

ರಾಮಾಯಣ, ಮಹಾಭಾರತ ನೋಡಲು ಭಾನುವಾರ ಒಂಬತ್ತು ಗಂಟೆ ಹೊತ್ತಿಗೆ ಕೆಲಸ ಮುಗಿಸಬೇಕಿತ್ತು.



ನಮ್ಮ ಬಾಲ್ಯದ ಬದುಕನ್ನು ಸುಂದರವೂ, ರೋಮಾಂಚನವೂ, ಅಚ್ಚರಿಗೊಳಿಸಿದ್ದು, ಕಾಯುವುದರ ಮಹತ್ವ ತಿಳಿಸಿದ್ದೂ ದೂರದರ್ಶನವೇ...ಅವರು ಹಾಕಿದ್ದೇ ಹಾಡು, ತೋರಿಸಿದ್ದೇ ಸಿನಿಮಾ. ಕೈಯಲ್ಲಿ ರಿಮೋಟ್ ಇಲ್ಲ, ಬೇರೆ ಚಾನೆಲ್ ಮಾತೇ ಇಲ್ಲ. ಪದೇ ಪದೇ ಹಾಕುತ್ತಿದ್ದ ಅಡಚಣೆಗಾಗಿ ಕ್ಷಮಿಸಿ ಬೋರ್ಡ್ ನಮ್ಮನ್ನು ಬೋರ್ ಮಾಡಲೇ ಇಲ್ಲ.. ಹಿಂದಿ ಕಾರ್ಯಕ್ರಮವನ್ನೂ ಕಣ್ಣು ಬಾಯಿ ಬಿಟ್ಟುಕೊಂಡು ನೋಡುತ್ತಿದ್ದ ನಮಗೆ, ಕನ್ನಡ ಮಾತ್ರ ನೋಡಬೇಕೆಂಬ ಒತ್ತಡ ಇರಲಿಲ್ಲ. ನಮ್ಮ ಬಾಲ್ಯದ ಬದುಕು ರಮ್ಯ, ಚೈತ್ರ ಕಾಲ..!

ಮಿಲೇ ಸುರ್ ಮೇರಾ ತುಮ್ಹಾರಾ.. ನಮ್ಮ ಪಾಲಿನ ವಂದೇ ಮಾತರಂ.

ಅಜ್ಜಿ ಮನೆ ವಿಚಾರ, ಅಮ್ಮನ ತವರಿನ ಸುದ್ದಿ, ದೊಡ್ಡಮ್ಮ, ಚಿಕ್ಕಮ್ಮನ ಮನೆ ವಿಷಯ ತಿಳಿಯಲು ಶುಕ್ರವಾರದ ಸಂತೆ ದಿನಕ್ಕಾಗಿ ಕಾಯಬೇಕಿತ್ತು.

ನಾಟಕ, ಜಾತ್ರೆಗಾಗಿ ವರ್ಷವಿಡೀ ಕಾಯಬೇಕಿತ್ತು.

ಟಾಕೀಸ್‌ನಲ್ಲಿ ಸಿನಿಮಾ ನೋಡಲು ಹಬ್ಬವೇ ಬರಬೇಕಿತ್ತು.

ಫ್ಯಾನ್ ಇರದಿದ್ರೂ ಬಿಸಿಲಿಗೆ, ಬೆವರಿಗೆ ಬೆದರಲಿಲ್ಲ..

ರುಬ್ಬುಗುಂಡಿನಲ್ಲಿ ಅಕ್ಕಿ, ಕಾಯಿ, ಖಾರ ಅರೆಯುವ ಸುಖ ತೋಳಲ್ಲಿ ನೋವು ತರಲಿಲ್ಲ.

ಕಿಲೋ ಮೀಟರ್ ಗಟ್ಟಲೆ ನಡೆಯುತ್ತಾ, ಕುಣಿಯುತ್ತಾ ಯಾರದ್ದೋ ಸೈಕಲ್ ಹಿಂದೆ ಓಡುವ ಸಂಭ್ರಮ..

ಬಿದ್ದು ಮಂಡಿಗೆ, ಮೊಳಕೈಗೆ ಗಾಯವಾದರೆ ಎಂಜಲೇ firstaid.. ಅಮ್ಮನ ಬೈಗುಳವೇ ಮಾತ್ರೆ, ಅಪ್ಪ ಕೆಂಗಣ್ಣು ಇಂಜೆಕ್ಷನ್.

ಬೇಸಿಗೆ ರಜೆಗೆ ಅಜ್ಜಿ ಊರು, ಹೊಳೆದಂಡೆ, ಕಾಲುವೆ ನೀರಲ್ಲಿ ಆಡಿದ ಆಟಗಳು..

ಯಾರದ್ದೋ ನೆಂಟರ ಮನೆಯಲ್ಲಿ ಕಳೆದ ರಾತ್ರಿಗಳು.. ಹುಣ್ಣಿಮೆ ಬೆಳದಿಂಗಳ ರಾತ್ರಿಯಲ್ಲಿ ಪಕ್ಕದೂರಿಗೆ ನಡೆದುಕೊಂಡೇ ಹೋಗುವ ಖುಷಿಗೆ ಲೆಕ್ಕವಿಲ್ಲ.

ಅಮ್ಮ ಹೆಣೆದ ನೀರು ಜಡೆ, ಎರಡು ಬದಿಯ ಬದನೆ ಕಾಯಿ ಜಡೆ, ಸಾವಿರಕಾಲಿನ ಜಡೆ, ತಲೆಗೆ ಎಣ್ಣೆ ಹಚ್ಚಿ ಕೂದಲು ಕಟ್ಟಿದರೆ ಮತ್ತೆ ಬೆಳಗ್ಗೆಯೇ ಬಿಚ್ಚುತ್ತಿದ್ದ ಟೈಟ್ ಜಡೆ.

ಪ್ರತಿ ವರ್ಷವೂ ಲಂಗದ ಅಂಚಿನ ದಾರ ಬಿಚ್ಚಿ, ಮೊಳಕಾಲಿನವರೆಗೆ ಇಳಿಸಿ, ಹೊಲಿಗೆ ಹಾಕಿಸಿದರೆ ಅದೇ ಹೊಸ ಯೂನಿಫಾರ್ಮ್.

ಅಮ್ಮನ ಅಂದಗೆಟ್ಟ, ಮಾಸಿದ ಹಳೆಯ ರೇಷ್ಮೆ ಸೀರೆಯನ್ನೇ ಹರಿದು ಹೊಲೆಸಿದ ಲಂಗ– ದಾವಣಿ.

ಜಾತ್ರೆ ದಿನ ಹೊಸ ಲಂಗ ದಾವಣಿ ತೊಟ್ಟು, ತಂಬಿಟ್ಟಿನ ಆರತಿ ಹಿಡಿದು ಮೆರವಣಿಗೆ ಹೋಗುವ ಹೆಣ್ಮಕ್ಕಳ ಕಣ್ಣಲ್ಲಿ ನಕ್ಷತ್ರ.

–ಶೋಭಾ ಮಳವಳ್ಳಿ

# ಶ್ರೀ ಜಗದ್ಗುರು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಸಮಾರಂಭ




**ದಾವಣಗೆರೆ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಇವರ ಸಹಯೋಗದಲ್ಲಿ ಮಾ.12 ನಾಳೆ ಬುಧವಾರ ಶ್ರೀ ಆದಿ ಜಗದ್ಗುರು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಸಮಾರಂಭವನ್ನು ಅಭಿನವ ರೇಣುಕ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಆವರಗೊಳ್ಳ ಪುರವರ್ಗ ಹಿರೇಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಿಗ್ಗೆ 6 ರಿಂದ 8 ರವರೆಗೆ ಅಭಿನವ ರೇಣುಕ ಮಂದಿರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಲಿಂಗೋದ್ಭವ ಮೂರ್ತಿಗೆ ವಿಶೇಷ ರುದ್ರಾಭಿಷೇಕ, ಅಷ್ಟೋತ್ತರ ಶತ ನಾಮಾವಳಿ ಹಾಗೂ ಅಲಂಕಾರದೊಂದಿಗೆ ಮಹಾಮಂಗಳಾರತಿ ಪೂಜೆ ನೆರವೇರುವುದು ಎಂದರು.

ಬೆಳಿಗ್ಗೆ 9 ರಿಂದ 10–30 ರವರೆಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾಡಳಿತ ಭವನದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಜಯಂತಿ ಆಚರಿಸಲಾಗುವುದು.

ಬೆಳಿಗ್ಗೆ 10–30 ಕ್ಕೆ ಶ್ರೀ ಶೈಲ ಮಠದಿಂದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂಗಲ ಮೂರ್ತಿಯ ಭಾವಚಿತ್ರವನ್ನು ಕಳಸ, ಕನ್ನಡಿ ಸಮೇತ ಸಕಲ ವಾದ್ಯ ವೈಭವದಿಂದ ಸಾರೋಟು ಮೂಲಕ ವಿಜೃಂಭಣೆಯಿಂದ ರೇಣುಕ ಮಂದಿರದವರೆಗೆ ಉತ್ಸವ ನೆರವೇರುವುದು ಎಂದು ತಿಳಿಸಿದರು.ಬೆಳಿಗ್ಗೆ 11–30 ಕ್ಕೆ ಶ್ರೀ ಅಭಿನವ ರೇಣುಕ ಮಂದಿರದ ಶ್ರೀ ಜಗದ್ಗುರು ವೀರಗಂಗಾಧರ ಮಂಗಲಭವನದಲ್ಲಿ ಜನ ಜಾಗೃತಿ ಧಾರ್ಮಿಕ ಸಮಾರಂಭ ನಡೆಯುವುದು. ರಾಮಘಟ್ಟದ ಶ್ರೀ ರೇವಣಸಿದ್ದ ಸ್ವಾಮೀಜಿ, ಮುಷ್ಟೂರು ಶ್ರೀ ರುದ್ರಮುನಿ ಸ್ವಾಮೀಜಿ, ಹೊನ್ನಾಳಿಯ ಶ್ರೀ ಒಡೆಯರ್ ಚೆನ್ನಮಲ್ಲಿಕಾರ್ಜುನ ಸ್ವಾಮೀಜಿ, ಸಾನ್ನಿಧ್ಯ ವಹಿಸಲಿದ್ದು, ಆವರಗೊಳ್ಳದ ಶ್ರೀ ಓಂಕಾರ ಸ್ವಾಮೀಜಿ ನೇತೃತ್ವ ವಹಿಸುವರು.

ತಾವರೆಕೆರೆ ಶ್ರೀ ಅಭಿನವ ಸಿದ್ಧಲಿಂಗ ಸ್ವಾಮಿಗಳು ಉಪದೇಶ ನೀಡುವರು ಎಂದು ಮಾಹಿತಿ ನೀಡಿದರು.ಮಹಾಸಭಾದ ಗೌರವಾಧ್ಯಕ್ಷ ಎಸ್.ಜಿ. ಉಳವಯ್ಯ ಅಧ್ಯಕ್ಷತೆ ವಹಿಸಿ, ಪ್ರಾಸ್ತಾವಿಕ ನುಡಿಗಳನ್ನಾಡುವರು. ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಡಾ. ಶಾಮನೂರು ಶಿವಶಂಕರಪ್ಪ ಉದ್ಘಾಟನೆ ನೆರವೇರಿಸಲಿದ್ದಾರೆ. ಕೆ.ಎಸ್. ವೀರಭದ್ರಪ್ಪ ತೆಲಿಗಿ ಉಪನ್ಯಾಸ ನೀಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದೆ ಪ್ರಭಾ ಮಲ್ಲಿಕಾರ್ಜುನ್, ಶಾಸಕ ಕೆ.ಎಸ್. ಬಸವಂತಪ್ಪ, ದೂಡಾ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಮಾಜಿ ಸಚಿವ ಎಸ್.ಎ. ರವೀಂದ್ರನಾಥ್, ಮಾಜಿ ಮುಖ್ಯ ಸಚೇತಕ ಡಾ. ಶಿವಯೋಗಿ ಸ್ವಾಮಿ, ಜಿಲ್ಲಾಧಿಕಾರಿ ಜಿ. ಗಂಗಾಧರ ಸ್ವಾಮಿ, ಜಿಪಂ ಸಿಇಓ ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಆಯುಕ್ತೆ ರೇಣುಕಾ ಇನ್ನಿತರ ಗಣ್ಯರು ಉಪಸ್ಥಿತರಿರುವರು.

# ಮಾ.15 ರಿಂದ ದೊಣೆಹಳ್ಳಿ ಶರಣಬಸವೇಶ್ವರ ಮಠದಲ್ಲಿ ದಾಸೋಹ ಸಂಸ್ಕೃತಿ ಉತ್ಸವ

**ಜಗಳೂರು:** ದೊಣೆಹಳ್ಳಿ ಶ್ರೀ ಶರಣಬಸವೇಶ್ವರ ದಾಸೋಹ ಮಠದಲ್ಲಿ ಮಾ.15 ರಿಂದ 7ದಿನಗಳಕಾಲ 'ದಾಸೋಹ ಸಂಸ್ಕೃತಿ ಉತ್ಸವ' ಕಾರ್ಯಕ್ರಮ ಸಮಾಜಮುಖಿ ಆಶಯಗಳೊಂದಿಗೆ ಅರ್ಥಪೂರ್ಣವಾಗಿ ಜರುಗಲಿದೆ ಎಂದು ದಾಸೋಹ ಮಠ ನಿರ್ಮಾಣ ಅಭಿವೃದ್ಧಿ ಸಮಿತಿ ಸಂಘಟನಾ ಸಂಚಾಲಕ ಹಿರಿಯ ಪತ್ರಕರ್ತ ದೊಣೆಹಳ್ಳಿ ಗುರುಮೂರ್ತಿ ತಿಳಿಸಿದರು.

ಮಂಗಳವಾರ ಪಟ್ಟಣದ ಪತ್ರಿಕಾಭವನದಲ್ಲಿ ದೊಣೆಹಳ್ಳಿ ಶರಣಬಸವೇಶ್ವರ ದಾಸೋಹ ಮಠ ನಿರ್ಮಾಣ ಅಭಿವೃದ್ಧಿ ಸಮಿತಿವತಿಯಿಂದ ನಡೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಮಾ.15 ರಂದು ಜಗಳೂರು ನೆರೆಯ ತಾಲ್ಲೂಕುಗಳಾದ ಕೂಡ್ಲಿಗಿ,ಮೊಳಕಾಲ್ಮುರು,ಚಳ್ಳಕೆರೆ,ತಾಲ್ಲೂಕುಗಳ ಸಮಗ್ರ ನೀರಾವರಿ ಐಕ್ಯಹೊರಾಟ ಕುರಿತು ಚರ್ಚಿಸಲು ರೈತ ಸಮಾವೇಶದೊಂದಿಗೆ ಉತ್ಸವದ ಉದ್ಘಾಟನೆಗೊಳ್ಳಲಿದೆ.ಸಮಾವೇಶದಲ್ಲಿ ವಿವಿಧ ಬಸವಾದಿ ಶರಣರ ತತ್ವದಡಿಯ ಮಠಾಧೀಶರ ಸಾನಿಧ್ಯದಲ್ಲಿ ಸಂಸದರಾದ ಗೋವಿಂದಕಾರಜೋಳ,ಡಾ.ಪ್ರಭಾಮಲ್ಲಿಕಾರ್ಜುನ್,ಈ ತುಕಾರಾಂ ,ಶಾಸಕರಾದ ಎನ್.ವೈ.ಗೋಪಾಲಕೃಷ್ಣ,ಡಾ.ಎನ್ ಟಿ ಶ್ರೀನಿವಾಸ್,ಟಿ.ರಘುಮೂರ್ತಿ,ಮಾಜಿ ಶಾಸಕರಾದಎಚ್.ಪಿ.ರಾಜೇಶ್,ಎಸ್.ವಿ .ರಾಮಚಂದ್ರ ಸೇರಿದಂತೆ ಪ್ರಗತಿಪರ ಚಿಂತಕರು ಭಾಗವಹಿಸಲಿದ್ದಾರೆ.




ಮಾ.16 ರಂದು ಭಾನುವಾರ ಚಿತ್ರದುರ್ಗ ಮುರುಘಾಮಠದ ಮಾದಾರ ಚೆನ್ನಯ್ಯ ಅವರ ದಿವ್ಯ ನೇತೃತ್ವದಲ್ಲಿ ಮಹಿಳಾ ಸಬಲೀಕರಣ ಸಮಾವೇಶ ನಡೆಯಲಿದ್ದು ಚಿತ್ರದುರ್ಗದ ಮಾಜಿ ಶಾಸಕ ಎಸ್. ಕೆ.ಬಸವರಾಜನ್ ಅಧ್ಯಕ್ಷತೆ ವಹಿಸಲಿದ್ದಾರೆ ಹಾಗೂ ಉಚಿತ ಸಾಮೂಹಿಕ ವಿವಾಹಗಳು ಮತ್ತು ರಾಜ್ಯಮಟ್ಟದ ವಧುವರರ ಸಮಾವೇಶ ಜರುಗಲಿವೆ.ಇದೇ ವೇಳೆ ಸಾಹಿತಿ ಡಾ.ಸಂಗೇನಹಳ್ಳಿ ಅಶೋಕ ಕುಮಾರ್ ಅವರ ನನ್ನ ದೇವರು ಮತ್ತು ಇತರೇ ಕವಿತೆಗಳು ಪುಸ್ತಕ ಲೋಕಾರ್ಪಣೆಗೊಳ್ಳಲಿದೆ.ವಿಜಯನಗರ ಜಿಲ್ಲಾಧಿಕಾರಿ ದಿವಾಕರ್ ಅವರು ಪುಸ್ತಕ ಬಿಡುಗಡೆಗೊಳಿಸಲಿದ್ದಾರೆ ಗಣ್ಯರು ಹಾಗೂ ಸ್ವಾಮೀಜಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮಾ.17 ರಂದು ಶರಣ ಸಂಗಮ,ಉಚಿತ ಆರೋಗ್ಯತಪಾಸಣಾ ಸಮಾವೇಶ,ಮಾ.22,23 ರಂದು ಆಯೋಜಿಸಿರುವ ಉಚಿತ ಕೃತಕ ಪೂರ್ಣದಂತ ಪಂಕ್ತಿ ಜೋಡಣಾ ಶಿಬಿರದಲ್ಲಿ ಬೆಂಗಳೂರಿನ ಸರ್ಕಾರಿ ದಂತ ಮಹಾವಿದ್ಯಾಲಯದ 150 ಕ್ಕೂ ಅಧಿಕ ವೈದ್ಯರ ತಂಡ ಆಗಮಿಸಲಿದೆ.ಮಾ.23 ರಂದು ಮಧ್ಯಾಹ್ನ ದಂತ ಪಂಕ್ತಿ ವಿತರಣಾ ಸಮಾರಂಭದಲ್ಲಿ ಮುರುಘಾರಾಜೇಂದ್ರ ಬೃಹನ್ಮಠದ ಉಸ್ತುವಾರಿ ಸದಸ್ಯ ಡಾ.ಬಸವಕುಮಾರ್ ಸ್ವಾಮೀಜಿ,ಮುಖ್ಯ ಅತಿಥಿಗಳಾಗಿ ದಾಮ ಐಮಡಿ ಶರಣಾರ್ಯರು ಸೇರಿದಂತೆ ಗಣ್ಯರು ಹಾಗೂ ಅಧ್ಯಕ್ಷತೆಯನ್ನು ಶಾಸಕ ಬಿ.ದೇವೇಂದ್ರಪ್ಪ ವಹಿಸಲಿದ್ದಾರೆ. ದಾಸೋಹ ಸಂಸ್ಕೃತಿ ಉತ್ಸವ ಕಾರ್ಯಕ್ರಮದಲ್ಲಿ ತಾಲೂಕಿನ ಜನಪರ,ಪ್ರಗತಿಪರ ಹೊರಾಟಗಾರರು,ಸಮಾಜಮುಖಿ ಸಂಘಟನೆ ಮುಖಂಡರುಗಳು ಅಧಿಕ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಕರೆ ನೀಡಿದರು.

ವೀರಶೈವ ಸಮಾಜದ ಮುಖಂಡ ಶಿವನಗೌಡ ಮಾತನಾಡಿ,ದಾಸೋಹ ಸಂಸ್ಕೃತಿ ಕಾರ್ಯಕ್ರಮಕ್ಕೆ ವ್ಯಾಪಕಬೆಂಬಲವಿದೆ. ದೊಣೆಹಳ್ಳಿ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿದ್ದು ಶಿಕ್ಷಣ ಸಂಸ್ಥೆತೆರೆದು ದಾಸೋಹ,ವಸತಿನಿಲಯ ಆರಂಭಿಸಬೇಕಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಂದರ್ಭದಲ್ಲಿ ಮಾಜಿ ಚೇರ್ಮನ್ ಬಸವರಾಜಪ್ಪ,ಸಾಹಿತಿ ಸಂಗೇನಹಳ್ಳಿ ಅಶೋಕ ಕುಮಾರ್,ಕೃಷಿಪತ್ತಿನ ಸಹಕಾರ ಪತ್ತಿನ ಬ್ಯಾಂಕ್ ನಿರ್ದೇಶಕರಾದ ಮಂಜುನಾಥ್,ಏಳಂಜಿ ಶರಣಪ್ಪ,ವಿಎಸ್ ಎಸ್ ಎನ್ ಅಧ್ಯಕ್ಷ ಕೆ.ಗುರುಮೂರ್ತಿ ,ಸಂತೋಷ ಕುಮಾರ್,ವಿಜಯ್ ಕುಮಾರ್,ಕಾನಾಮಡುಗು ಪ್ರಾಂಶುಪಾಲ ನಾಗಲಿಂಗಪ್ಪ ,ಭರಮಸಮುದ್ರ ಕುಮಾರ್,ಸೇರಿದಂತೆ ಉಪಸ್ಥಿತರಿದ್ದರು.

# ಬೇಸಿಗೆ ನಿರ್ವಹಣೆಗೆ ವಿಶೇಷ ನೆರವು ಕೋರಿ ಮುಖ್ಯಮಂತ್ರಿಯವರಿಗೆ ಪ್ರಸ್ತಾವನೆ: ಸಚಿವ ಕೆ.ಜೆ.ಜಾರ್ಜ್

**ಚಿಕ್ಕಮಗಳೂರು: ಮಾ. 11:** ಚಿಕ್ಕಮಗಳೂರು ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಉದ್ಭವಿಸಬಹುದಾದ ಸಮಸ್ಯೆಗಳನ್ನು ಬಗೆಹರಿಸಲು ವಿಶೇಷ ನೆರವು ಕೋರಿ ಮುಖ್ಯಮಂತ್ರಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿಯೂ ಆಗಿರುವ ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಉದ್ಭವಿಸಬಹುದಾದ ಪರಿಸ್ಥಿತಿ ಕುರಿತು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಸಚಿವ ಕೆ.ಜೆ.ಜಾರ್ಜ್, ಬೇಸಿಗೆಯನ್ನು ನಿಭಾಯಿಸಲು ಕೈಗೊಳ್ಳಬೇಕಾದ ಕಾರ್ಯಕ್ರಮಗಳು ಮತ್ತು ಅದಕ್ಕೆ ಬೇಕಾದ ಅನುದಾನದ ಬಗ್ಗೆ ಪ್ರಸ್ತಾವನೆ ಸಿದ್ಧಪಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

"ಈ ಪ್ರಸ್ತಾವನೆಯೊಂದಿಗೆ ಮುಖ್ಯಮಂತ್ರಿಯವರನ್ನು ಭೇಟಿಯಾಗಿ, ಹೆಚ್ಚುವರಿ ಅನುದಾನ ಕೋರಿ ಮನವಿ ಸಲ್ಲಿಸಲಾಗುವುದು. ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಳೆದ ವರ್ಷದ ಬೇಸಿಗೆಯಲ್ಲಿ ಕೈಗೊಂಡ ಕಾಮಗಾರಿಗಳಿಗೆ 3.60ಕೋಟಿ ರೂ. ಅನುದಾನ ಬಿಡುಗಡೆಯಾಗಬೇಕಿದೆ. ಅದೇ ರೀತಿ ಈ ಬಾರಿಯ ನಿರ್ವಹಣೆಗೆ ಅನುದಾನ ಬೇಕಾಗಿದೆ. ಈ ಎರಡೂ ವಿಚಾರಗಳನ್ನು ಮುಂದಿಟ್ಟುಕೊಂಡು ಇಲಾಖೆ ಸಚಿವರನ್ನು ಭೇಟಿಯಾಗಿ ಮನವಿ ಸಲ್ಲಿಸಲಾಗುವುದು," ಎಂದು ಸಚಿವರು ತಿಳಿಸಿದರು.

"ಕಳೆದ ವರ್ಷ ತೀವ್ರ ಬರಗಾಲವಿದ್ದರೂ ಜಿಲ್ಲೆಯಲ್ಲಿ ಪರಿಸ್ಥಿತಿಯನ್ನು ನಿರ್ವಹಿಸುವಲ್ಲಿ ಯಶಸ್ವಿಯಾಗಿದ್ದೇವೆ. ಅದೇ ರೀತಿ ಈ ವರ್ಷವೂ ಬೇಸಿಗೆಯಲ್ಲಿ ಜನರಿಗೆ ಹೆಚ್ಚು ಸಮಸ್ಯೆಯಾಗದಂತೆ ನೋಡಿಕೊಳ್ಳಲು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ನೀರು, ವಿದ್ಯುತ್ ಸೇರಿದಂತೆ ಯಾವುದೇ ರೀತಿಯ ಸಮಸ್ಯೆ ಬಂದರೂ ಅದನ್ನು ಬಗೆಹರಿಸಲು ಈಗಲೇ ಯೋಜನೆ ಸಿದ್ಧಪಡಿಸಬೇಕು," ಎಂದು ಸೂಚಿಸಿದರು.

"ಪ್ರಸ್ತುತ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 6.23 ಕೋಟಿ ರೂ. ಲಭ್ಯವಿದೆ. ತುರ್ತು ಸಂದರ್ಭದಲ್ಲಿ ಈ ಹಣ ಬಳಸಿಕೊಂಡು ಸಮಸ್ಯೆಗೆ ಸ್ಪಂದಿಸಬೇಕು. ಕೆರೆಗಳ ಹೂಳೆತ್ತುವ ಕಾರ್ಯವನ್ನು ವೈಜ್ಞಾನಿಕವಾಗಿ ಕೈಗೊಂಡು ಕೆರೆಗಳನ್ನು ಸಂರಕ್ಷಿಸಿಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಗಮನ ಹರಿಸಬೇಕು," ಎಂದು ಹೇಳಿದರು.



ಜಿಲ್ಲೆಯ ಪರಿಸ್ಥಿತಿ ಕುರಿತು ವಿವರ ನೀಡಿದ ಜಿಲ್ಲಾಧಿಕಾರಿ ಮೀನಾ ನಾಗರಾಜ್, "ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಯಾವುದೇ ಭಾಗದಲ್ಲಿ ತೀವ್ರತರ ಸಮಸ್ಯೆಗಳು ಉದ್ಭವಿಸಿಲ್ಲ. 4 ಹಳ್ಳಿಗಳಲ್ಲಿ ನೀರಿನ ಸಮಸ್ಯೆ ತೀವ್ರವಾಗಿದ್ದು, ಪರಿಸ್ಥಿತಿ ನಿಯಂತ್ರಿಸಲು ಕ್ರಮ ವಹಿಸಲಾಗಿದೆ. ಕಳೆದ ಬಾರಿ ಹೆಚ್ಚು ಮಳೆಯಾಗಿದ್ದರಿಂದ ಬಯಲುಸೀಮೆ ಭಾಗಗಳಲ್ಲಿ ಅಂತರ್ಜಲ ಪ್ರಮಾಣ ಏರಿಕೆಯಾಗಿದೆ. ಕೆರೆಗಳನ್ನು ತುಂಬಿಸುವ ಕಾರ್ಯವನ್ನೂ ಕೈಗೊಳ್ಳಲಾಗಿದ್ದು, ತರೀಕೆರೆ ತಾಲೂಕಿನಲ್ಲಿ ಏತ ನೀರಾವರಿ ಯೋಜನೆ ಮೂಲಕ 79 ಕೆರೆಗಳನ್ನು ತುಂಬಿಸಲಾಗಿದೆ. ಭದ್ರಾ ಜಲಾಶಯ ಭಾಗದಲ್ಲಿ 73 ಕೆರೆಗಳನ್ನು ಭರ್ತಿ ಮಾಡಲಾಗಿದೆ. ಆರೋಗ್ಯ ಸಮಸ್ಯೆ ಉದ್ಭವವಾಗದಂತೆ ಮತ್ತು ಅರಣ್ಯದಲ್ಲಿ ಬೆಂಕಿ ದುರಂತ ಸಂಭವಿಸುವುದನ್ನು ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಲಾಗುತ್ತಿದೆ," ಎಂದು ಮಾಹಿತಿ ನೀಡಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಟಾಸ್ಕ್ ಫೋರ್ಸ್ ಮೂಲಕ ಕಳೆದ ವರ್ಷ ಕೈಗೊಂಡ ಪರಿಹಾರ ಕಾರ್ಯಕ್ರಮಗಳಿಗೆ 3.6 ಕೋಟಿ ರೂ. ಬಿಡುಗಡೆಯಾಬೇಕಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದಾಗ, ಜಿಲ್ಲೆಯ ಶಾಸಕರ ಜತೆಗೆ ಈ ಬಗ್ಗೆ ಇಲಾಖೆ ಸಚಿವರನ್ನು ಭೇಟಿಯಾಗಿ ಮನವಿ ಸಲ್ಲಿಸಲಾಗುವುದು ಎಂದು ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

**ಲಿಂಕ್ ಲೈನ್ ಮೂಲಕ ವಿದ್ಯುತ್ ಸಮಸ್ಯೆಗೆ ಪರಿಹಾರ:** "ರಾಜ್ಯದಲ್ಲಿ ವಿದ್ಯುತ್ ಕೊರತೆ ಇಲ್ಲ. ಹೀಗಾಗಿ ಜಿಲ್ಲೆಗೆ ಅಗತ್ಯ ವಿದ್ಯುತ್ ನೀಡಲು ಯಾವುದೇ ತೊಂದರೆ ಆಗುವುದಿಲ್ಲ. ಆದರೆ, ಸರಬರಾಜು ವ್ಯವಸ್ಥೆಯಲ್ಲಿ ಸಮಸ್ಯೆ ಇರುವುದರಿಂದ ಮತ್ತು ಅಕ್ರಮ ಪಂಪ್ ಸೆಟ್ ಗಳನ್ನು ಬಳಸುತ್ತಿರುವುದರಿಂದ ಒತ್ತಡ ತಡೆದುಕೊಳ್ಳಲು ಸಾಧ್ಯವಾಗದೆ ಟ್ರಾನ್ಸ್ ಫಾರ್ಮರ್ ಗಳು ಹಾನಿಗೊಳಗಾಗುತ್ತವೆ. ಈ ರೀತಿಯ ತಾಂತ್ರಿಕ ಸಮಸ್ಯೆ ಉದ್ಭವಿಸದಂತೆ ಲಿಂಕ್ ಲೈನ್ ಮೂಲಕ ಅಗತ್ಯ ವಿದ್ಯುತ್ ಪೂರೈಸಲು ಕ್ರಮ ವಹಿಸಲಾಗುವುದು," ಎಂದರು.

"ರೈತರಿಗೆ ವಿದ್ಯುತ್ ಸಮಸ್ಯೆ ಉದ್ಭವವಾಗಬಾರದು ಎಂಬ ಕಾರಣಕ್ಕೆ ಕುಸುಮ್–ಬಿ ಯೋಜನೆಯಡಿ ರೈತರಿಗೆ ಸೋಲಾರ್ ಪಂಪ್ ಸೆಟ್ ಗಳನ್ನು ಒದಗಿಸಲಾಗುತ್ತದೆ. ಕುಸುಮ–ಸಿ ಯೋಜನೆಯಡಿ ಫೀಡರ್ ಸೋಲರೈಸೇಷನ್ ಮೂಲಕ ಆಯಾ ಫೀಡರ್‌ಗಳ ವ್ಯಾಪ್ತಿಯಲ್ಲೇ ವಿದ್ಯುತ್ ಉತ್ಪಾದಿಸಿ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪೂರೈಸಲಾಗುತ್ತಿದೆ. ಜಿಲ್ಲೆಯ ಜನಪ್ರತಿನಿಧಿಗಳು ಈ ಬಗ್ಗೆ ಆಸಕ್ತಿ ವಹಿಸಿ ರೈತರು ಸೋಲಾರ್ ಪಂಪ್ ಸೆಟ್ ಗಳನ್ನು ಅಳವಡಿಸಿಕೊಳ್ಳುವಂತೆ ನೋಡಿಕೊಳ್ಳಬೇಕು. ಅದೇ ರೀತಿ ಕುಸುಮ್–ಸಿ ಯೋಜನಯಡಿ ಫೀಡರ್ ಸೋಲರೈಸೇನ್ ಗೆ ಅಗತ್ಯ ಭೂಮಿ ಒದಗಿಸಲು ಕ್ರಮ ಕೈಗೊಳ್ಳಬೇಕು," ಎಂದು ಮನವಿ ಮಾಡಿದರು.

ಸಭೆಯಲ್ಲಿ ವಿಧಾನ ಪರಿಷತ್ ಉಪಸಭಾಪತಿಗಳಾದ ಎಂ.ಕೆ. ಪ್ರಾಣೇಶ್, ಶಾಸಕ ಮತ್ತು ಕ್ರೆಡಲ್ ಅಧ್ಯಕ್ಷರಾದ ಟಿ.ಡಿ ರಾಜೇಗೌಡ, ಶಾಸಕರಾದ ಜಿ.ಎಚ್. ಶ್ರೀನಿವಾಸ್, ಎಚ್.ಡಿ. ತಮ್ಮಯ್ಯ, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿ, ಎಸ್. ಎಲ್. ಭೋಜೇಗೌಡ, ಡಾ. ಧನಂಜಯ ಸರ್ಜಿ, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ಅಪರ ಜಿಲ್ಲಾಧಿಕಾರಿ ನಾರಾಯಣ–ರಡ್ಡಿ ಕನಕರಡ್ಡಿ, ಜಿಲ್ಲಾ ಉಪಅರಣ್ಯ ಸಂರಕ್ಷಣಾಧಿಕಾರಿ ರಮೇಶ್ ಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅಶ್ವಥ್ ಬಾಬು ಮತ್ತಿತರರು ಹಾಜರಿದ್ದರು.

### ಶೀಘ್ರ ಮಧ್ಯಸ್ಥಿಕೆ ಅರಿವು ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಅಭಿಮತ

# ಪ್ರಾರಂಭಿಕ ಹಂತದಲ್ಲೇ ಅಂಗವೈಕಲ್ಯ ಗುರುತಿಸುವಂತಾಗಬೇಕು

**ಚಿತ್ರದುರ್ಗ :** ಪ್ರಾರಂಭಿಕ ಹಂತದಲ್ಲೇ ಅಂಗವೈಕಲ್ಯ ಗುರುತಿಸುವಂತಾಗಬೇಕು. ಯಾವುದೇ ಕಾರಣಕ್ಕೂ ಕ್ಷೇತ್ರಮಟ್ಟದಲ್ಲಿ ಅಂಗವಿಕಲರಾಗಿ ಉಳಿಯಬಾರದು. ಪ್ರಾರಂಭಿಕ ಹಂತದಲ್ಲಿಯೇ ಅಂಗವಿಕಲತೆಯನ್ನು ಗುರುತಿಸಿದಾಗ ಮಾತ್ರ ಚಿಕಿತ್ಸೆ ಹಾಗೂ ಗುಣಪಡಿಸಲು ಸಾಧ್ಯವಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಈಚೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ದಾವಣಗೆರೆ ಸಂಯೋಜಿತ ಪ್ರಾದೇಶಿಕ ಕೇಂದ್ರ, ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಎಂ.ಆರ್. ಡಬ್ಲ್ಯೂ, ವಿ.ಆರ್.ಡಬ್ಲ್ಯೂ, ಯು.ಆರ್. ಡಬ್ಲ್ಯೂಗಳಿಗೆ ವಿಶೇಷಚೇತನ ಮಕ್ಕಳನ್ನು ಪ್ರಾರಂಭಿಕ ಹಂತದಲ್ಲಿ ಗುರುತಿಸುವಿಕೆ ಹಾಗೂ ಶೀಘ್ರ ಮಧ್ಯಸ್ಥಿಕೆ ಅರಿವು ಕಿಟ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಾರಂಭಿಕ ಹಂತದಲ್ಲಿಯೇ ಅಂಗವೈಕಲ್ಯ ಗುರುತಿಸಿದರೆ ಅವರಿಗೆ ಯಾವ್ಯಾವ ಸೇವೆಗಳು, ಸೌಲಭ್ಯಗಳು ನೀಡಬಹುದಾಗಿದೆ ಎಂಬುವುದು ಗೊತ್ತಾಗಲಿದೆ. ಅಂಗವೈಕಲ್ಯಕ್ಕೆ ಅನುಗುಣವಾಗಿ ಚಿಕಿತ್ಸೆ ನೀಡಬಹುದಾಗಿದೆ. ಇದರ ಜೊತೆಗೆ ಬೆಂಬಲ ನೀಡುವ ಪಾಲಕರಿಗೆ ಕೌನ್ಸಿಲ್ ಕೊಡುವುದು, ನಂತರ ಯಾವ ಶಾಲೆಗೆ ಪ್ರವೇಶಾತಿ ಪಡೆಯಬೇಕು ಎಂಬ ಸಿದ್ಧತೆ–ಯ ಬಗ್ಗೆ ತಿಳಿದುಕೊಳ್ಳುವುದು ಸಹ ಬಹಳ ಮುಖ್ಯವಾಗಿದೆ ಎಂದು ತಿಳಿಸಿದರು.

ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಂಗನವಾಡಿ ಕಾರ್ಯಕರ್ತೆಯರು ತಾಯಿ ಗರ್ಭಾವಸ್ಥೆಯಲ್ಲೇ ಮಗುವಿನ ಬೆಳವಣಿಗೆ ತಿಳಿದುಕೊಳ್ಳುವುದು ಉತ್ತಮ. ಮನೆ ಭೇಟಿ, ಚುಚ್ಚುಮದ್ದು, ಆಹಾರ ಸೇವನೆ, ಹೆರಿಗೆ ಸಿದ್ಧತೆ ಕುರಿತು ಮಾಹಿತಿ ನೀಡಲಾಗುತ್ತಿದ್ದು, ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಬೇಕು.




ಮಗುವಿನ ಬೆಳವಣಿಗೆ ಹಂತಗಳ ಕುರಿತು ಸೂಕ್ಷ್ಮವಾಗಿ ಗಮನಿಸಬೇಕು. ಬೆಳವಣಿಗೆ ಕುಂಠಿತಗೊಂಡಲ್ಲಿ ಅದನ್ನು ಗುರುತಿಸುವ ಕೆಲಸವಾಗಬೇಕು ಎಂದು ಹೇಳಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, ವಿಕಲತೆ, ನ್ಯೂನತೆಯನ್ನು ಪ್ರಾರಂಭಿಕ ಹಂತದಲ್ಲಿ ಹೇಗೆ ಗುರುತಿಸಬೇಕು, ಮಧ್ಯಸ್ಥಿಕೆಯನ್ನು ಹೇಗೆ ವಹಿಸಬೇಕು ಎಂಬುವುದರ ಕುರಿತು ತರಬೇತಿ, ಅರಿವು ಮೂಡಿಸುವ ಕಾರ್ಯಕ್ರಮದ ಅಂಗವಿಕಲತೆಯನ್ನು ಪ್ರಾರಂಭದಲ್ಲಿ ಹೇಗೆ ಗುರುತಿಸಬೇಕು ಎನ್ನುವುದರ ಸಂಬಂಧಪಟ್ಟ ಕಿಟ್ ವಿತರಣಾ ಕಾರ್ಯಕ್ರಮವನ್ನು ದಾವಣಗೆರೆಯ ದಿವ್ಯಾಂಗ ವ್ಯಕ್ತಿಗಳ ಕೌಶಲ್ಯಾಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣ ಸಂಯುಕ್ತ ಪ್ರಾದೇಶಿಕ ಕೇಂದ್ರದ ವತಿಯಿಂದ ಹಮ್ಮಿಕೊಳ್ಳಲಾಗಿದೆ. ಈ ಕೇಂದ್ರವು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯದ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಈ ಕೇಂದ್ರದಲ್ಲಿ ವಿಕಲಚೇತನರಿಗೆ ಸಂಬಂಧಪಟ್ಟಂತೆ ಸಂಪೂರ್ಣ ಪುನರ್ವಸತಿ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎನ್.ಸುಧಾ, ಮಹಿಳಾ ಮತ್ತು ಅಭಿವೃದ್ಧಿ ಅಧಿಕಾರಿ ಪವಿತ್ರ, ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ, ಜಿಲ್ಲಾ ಪಂಚಾಯಿತಿ ಎಪಿಒ ಸುಮ, ದಾವಣಗೆರೆ ಸಿಆರ್‌ಸಿ ಪುನರ್ವಸತಿ ಅಧಿಕಾರಿ ವಿ.ಕನಗಸಭಾಪತಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಎಂ.ಆರ್. ಡಬ್ಲ್ಯೂ, ವಿ.ಆರ್.ಡಬ್ಲ್ಯೂ, ಯು.ಆರ್. ಡಬ್ಲ್ಯೂಗಳು ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**